RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 101 ಪುಟ: 06 ಸೋಮವಾರ 17–03–2025 ₹ 3 Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)
Executive Editor: L P Babu
Honourary Editor: Venkatesh

ಸುದ್ದಿ, ಜಾಹೀರಾತು ಹಾಗೂ ಪತ್ರಿಕೆಗೆ ಚಂದಾದಾರರಾಗಲು ಸಂಪರ್ಕಿಸಿ: 9448074878



ಹ್ಯಾಪಿ ಬರ್ತ್‌ಡೇ ಅಪ್ಪು

ಪುಟ 6

## ಯಾವ ಯೋಜನೆಗಳೂ ನಿಲ್ಲಲ್ಲ, ಕೊಟ್ಟ ಮಾತಿನಂತೆ ನಡೆದಿದ್ದೇವೆ– ಸಿಎಂ ಸಿದ್ದರಾಮಯ್ಯ

# ಖಜಾನೆ ಖಾಲಿಯಾಗಿಲ್ಲ

**ಬೆಂಗಳೂರು:** 2024–25ನೇ ಸಾಲಿನಲ್ಲಿ 52,0009 ಕೋಟಿ ಇಟ್ಟು, 41509 ಕೋಟಿ ರೂಪಾಯಿ ವೆಚ್ಚ ಮಾಡಿದ್ದೇವೆ. ಖಜಾನೆ ಖಾಲಿ ಯಾಗಿದೆ ಎಂಬ ಮಾತು ಸತ್ಯಕ್ಕೆ ದೂರ ತಾನೇ ಎಂದು ವಿಧಾನ ಸಭೆಯಲ್ಲಿ ಅಂಕಿ ಅಂಶಗಳನ್ನು ಮುಂದಿಟ್ಟು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆವೇಳೆ ಪ್ರತಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡರು.

ರಾಜ್ಯದಲ್ಲಿ 1.26 ಕೋಟಿ ಕುಟುಂಬಗಳಿಗೆ ಯೋಜನೆಗಳು ತಲುಪುತ್ತಿದ್ದು, ಕೊಟ್ಟ ಮಾತಿನಂತೆ ನಡೆದಿದ್ದೇವೆ. ಯಾವ ಕಾರಣಕ್ಕೂ ಯಾವ ಕಾರ್ಯಕ್ರಮವನ್ನೂ ನಿಲ್ಲಿಸುವುದಿಲ್ಲ. ಸಾಲಮನ್ನಾ ಮಾಡಿ ಅಂದರೆ ಹಣ ಎಲ್ಲಿಂದ ತರುವುದು ಎಂದು ಹೇಳಿದ ಬಿಜೆಪಿ, ಅದಾನಿಯವರಿಗೆ 17 ಲಕ್ಷ ಕೋಟಿ ಸಾಲ ಮನ್ನಾ ಮಾಡಿತು. ಅದು ನ್ಯಾಯವೇ ಎಂದು ಪ್ರಶ್ನಿಸಿದರು.

ಇದೇ ವೇಳೆ ರಾಜಕೀಯ ದುರುದ್ದೇಶ ಬಿಟ್ಟು ಮಾತನಾಡಬೇಕೆಂದು ವಿರೋಧ ಪಕ್ಷದವರಿಗೆ ಮನವಿ ಮಾಡಿದ ಸಿಎಂ, ದೇಶದ 100 ಕೋಟಿ ಜನರಿಗೆ ಕೊಳ್ಳುವ ಆಯ್ಕೆಗಳೇ ಇಲ್ಲ ಎಂದು ವರದಿ ಬಂದಿತ್ತು. 20.5 ಕೋಟಿ ಕುಟುಂಬಗಳು ಅಂದರೆ ನೂರು ಕೋಟಿ ಜನರ ವಾರ್ಷಿಕ ಆದಾಯ 87000 ರೂಪಾಯಿಗಿಂತ ಕಡಿಮೆ ಇದೆ ಎನ್ನುವ ವರದಿ ಬಂದಿದೆ. ಅಸಮಾನತೆ ಅಪ್ಪರ ಮಟ್ಟಿಗೆ ಇದೆ. ದೇಶದಲ್ಲಿ ಆರ್ಥಿಕ, ಸಾಮಾಜಿಕ ಅಸಮಾನತೆ ಇರುವವರೆಗೆ ದೇಶಕ್ಕೆ ನಿಜವಾದ ಸ್ವಾತಂತ್ರ್ಯ ಸಿಗುವುದಿಲ್ಲ . ಕೊಳ್ಳುವ ಶಕ್ತಿಯನ್ನು ಹೆಚ್ಚು ಮಾಡುವ ಸಾರ್ವತ್ರಿಕ ಮೂಲ ಆದಾಯ ತತ್ವ ಅಗತ್ಯ. ಆರ್ಥಿಕ, ಸಾಮಾಜಿಕ ಶಕ್ತಿಯನ್ನು ಜನರಲ್ಲಿ ತುಂಬಿದರೆ ಜನರ ಹಾಗೂ ರಾಜ್ಯದ ಅಭಿವೃದ್ಧಿ ಸಾಧ್ಯ. ನಾವು ಸಮಾಜದ 90% ಜನರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ತುಂಬಿದ್ದೇವೆ. ನೀವು ಸಮಾಜದ 10% ಜನರಿಗೆ ಶಕ್ತಿ ತುಂಬುತ್ತಿದ್ದೀರಿ ಎಂದರು.

94 ರಲ್ಲಿ 34% ಇದ್ದ ಶ್ರೀಮಂತರ ಸಂಖ್ಯೆ ಈಗ 57% ಗೆ ಹೆಚ್ಚಾಗಿದೆ. 50% ಜನರಿಗೆ ಇರುವ ಆರ್ಥಿಕ ಶಕ್ತಿ 15% ಗೆ ಕುಸಿದಿದೆ. ಇದು ಆತಂಕಕಾರಿ ಸಂಗತಿ ಅಲ್ಲವೇ? ಶ್ರೀಮಂತರು ಶ್ರೀಮಂತರಾದರೆ, ಬಡವರು ಬಡವರಾಗುತ್ತಿದ್ದಾರೆ. ಈ ಅಸಮಾನತೆಯನ್ನು ತೊಡೆದು ಹಾಕಲು ನಾವು ಪ್ರಯತ್ನ ಮಾಡುತ್ತಿದ್ದೇವೆ ಎಂದು ಸಿಎಂ ಸ್ಪಷ್ಟಪಡಿಸಿದರು.

ಗ್ಯಾರಂಟಿ ಯೋಜನೆಗಳಿಂದ ಬಡವರಲ್ಲಿ ಆತ್ಮವಿಶ್ವಾಸ ಹೆಚ್ಚಿದ್ದು ಮಾತ್ರವಲ್ಲ, ಸ್ವಾಭಿಮಾನ ಹೆಚ್ಚುತ್ತಿದೆ. ಜನರು ಸಾಮಾಜಿಕವಾಗಿ ಆರ್ಥಿಕವಾಗಿ ನಿರ್ಭಯವಾಗಿ,



ಅವರ ಬದುಕು ಸುಧಾರಣೆಯಾಗಿದೆ. ಸಮಾನತೆಯ ಭಾವ ಉಂಟಾಗುತ್ತಿದೆ ಎಂದರು.

ವೈರುಧ್ಯತೆ ಇರುವ ಸಮಾಜಕ್ಕೆ ನಾವು ಕಾಲಿಡುತ್ತಿದ್ದು, ರಾಜಕೀಯ ಸ್ವಾತಂತ್ರ್ಯ ದೊರೆತರೆ ಸಾಲದು, ನಮಗೆ ಆರ್ಥಿಕ ಸಾಮಾಜಿಕ ಸ್ವಾತಂತ್ರ್ಯ ಸಿಕ್ಕಿಲ್ಲ. ಅದು ಸಿಗಬೇಕಾದರೆ ಕಟ್ಟ ಕಡೆಯ ವ್ಯಕ್ತಿಯನ್ನು ಮುಖ್ಯವಾಹಿನಿಗೆ ಕೊಂಡೊಯ್ಯುವ ಕೆಲಸವಾಗಬೇಕು ಎಂದು ಅಂಬೇಡ್ಕರ್ ಹೇಳಿದ ಕೆಲಸವನ್ನು ನಾವು ಮಾಡುತ್ತಿದ್ದೇವೆ. ಬಿಜೆಪಿಯವರಂತೆ ನಾವು ಕೇವಲ 10% ಜನರ ಕೈಹಿಡಿದು ಶೇ90% ರಷ್ಟು ಜನರ ಕೈ ಬಿಟ್ಟಿಲ್ಲ ಎಂದು ಬಿಜೆಪಿ ಮತ್ತು ಕಾಂಗ್ರೆಸ್ ನ ಆರ್ಥಿಕ ನೀತಿ, ನಿಲುವುಗಳು ಯಾರ ಪರವಾಗಿವೆ ಎನ್ನುವ ವ್ಯತ್ಯಾಸವನ್ನು ವಿವರಿಸಿದರು.

ನಮ್ಮ ಸರ್ಕಾರ ಜನರ ಆಶೀರ್ವಾದದಿಂದ 2023 ಮೇ 22 ರಂದು ಅಧಿಕಾರಕ್ಕೆ ಬಂದಿತು. ನಮ್ಮ ಪಕ್ಷ 136 ಸ್ಥಾನಗಳನ್ನು ಗೆಲ್ಲುವ ಮೂಲಕ ಅಧಿಕಾರಕ್ಕೆ ಬಂದು 2 ವರ್ಷಗಾಳಾಗುತ್ತಿದೆ. ಇದು ಸರ್ಕಾರ ಬಂದ ನಂತರ ರಾಜ್ಯಪಾಲರ ಎರಡನೇ ಭಾಷಣ.

ಅಧಿಕಾರಕ್ಕಾಗಿ ಅಧಿಕಾರ ಮಾಡುವುದಲ್ಲ. ಜನರ ಕಲ್ಯಾಣಕ್ಕೆ ಅಧಿಕಾರ ಬಳಕೆಯಾಗಬೇಕು ಎನ್ನುವ ಕಾಳಜಿಯ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಇವೆಲ್ಲವೂ ವಾಸ್ತವ ಕಾರ್ಯಕ್ರಮಗಳಾಗಿರುವುದರಿಂದ ರಾಜ್ಯಪಾಲರು ಶ್ಲಾಘಿಸಿದ್ದಾರೆ. ಸದನದ ಚರ್ಚೆಗಳು ಬಸವಣ್ಣ ಹೇಳಿದಂತೆ ನುಡಿದರೆ ಮುತ್ತಿನ ಹಾರದಂತಿರಬೇಕು, ನುಡಿದರೆ ಲಿಂಗ ಮೆಚ್ಚಿ ಅಹುದಹುದೆನ್ನುವಂತಿರಬೇಕು. ಸದನದಲ್ಲಿ ಮಾತನಾಡಿದರೆ ಜನರ ಅಭಿರುಚಿಯನ್ನು ಹೆಚ್ಚಿಸಬೇಕು. ವಿದ್ಯಾವಂತರು ಸದನಕ್ಕೆ ಬರುತ್ತಿರುವುದರಿಂದ ಚರ್ಚೆ ಅರ್ಥ ಪೂರ್ಣ, ಆರೋಗ್ಯಕರವಾಗಿರಬೇಕು. ಜನರೂ, ಸಧನವೂ ಇದನ್ನೇ ನಿರೀಕ್ಷಿಸುತ್ತದೆ.

ಅಶೋಕ್ ಹಾಗು ಸುನೀಲ್ ಕುಮಾರ್ ಅವರು ಮಾತನಾಡುವಾಗ ಕರಿಮಣಿ ಮಾಲೀಕ ಯಾರು ಎಂದು ಪ್ರಶ್ನಿಸಿದ್ದಾರೆ. ನನ್ನ ಹಾಗು ಬಹುತೇಕ ಸದಸ್ಯರ ಪ್ರಕಾರ ಅರ್ಥಹೀನ ಮಾತುಗಳು. ನನಗೂ ಹಿರಿಯ ಸದಸ್ಯರಿಂದ ಇಂಥ ಮಾತುಗಳನ್ನು ನಿರೀಕ್ಷೆ ಇರಲಿಲ್ಲ.

ನಿಮ್ಮ ಪಕ್ಷದಲ್ಲಿ ಭಿನಾಭಿಪ್ರಯಗಳಿಲ್ಲವೇ? ನಿಮ್ಮ ಭಿನ್ನಾಭಿಪ್ರಾಯಗಳು ಯಾವ ಮಟ್ಟಕ್ಕೆ ಹೋಗಿವೆ ಎಂಬ ಚರ್ಚೆ ಬೇಡ. ಅಭಿರುಚಿ ಹೀನ ಎಂದಷ್ಟೇ ಹೇಳಿದ್ದೇನೆ. ನಿಮಗೆ ಸರಿಯಿದ್ದರೆ ಓಕೆ. ಜನ ಅಂತಿಮವಾಗಿ ತೀರ್ಮಾನ ಮಾಡುತ್ತಾರೆ. ಪುಟ 2



ಗದಗದ ಕಪ್ಪತ್ತಗುಡ್ಡ ಜೆಎಲ್‌ಆರ್ ಪ್ರಕೃತಿ ಶಿಬಿರದ ಹಾಗೂ ಮೃಗಾಲಯದ ಅಭಿವೃದ್ಧಿಗಾಗಿ ಭೂಸ್ವಾಧೀನ ಪಡಿಸಿಕೊಂಡ ಭೂಮಿಯ ಶಂಕುಸ್ಥಾಪನೆಯನ್ನು ಉಪಮುಖ್ಯಮಂತ್ರಿ ಡಿ.ಕೆಶಿವಕುಮಾರ್ ಅವರು ನೆರವೇರಿಸಿದರು. ಹಾಗೆಯೇ ವಲಯ ಅರಣ್ಯ ಅಧಿಕಾರಿಗಳ ನೂತನ ಕಛೇರಿ ಮತ್ತು ನೂತನ ವಸತಿ ಗೃಹ, ಶಿಶುಗಳಿಗೆ ಹಾಲುಣಿಸುವ ಕೊಠಡಿಯನ್ನು ಉದ್ಘಾಟಿಸಿದೆ. ಈ ಸಂದರ್ಭದಲ್ಲಿ ಸಚಿವರಾದ ಶ್ರೀ ಹೆಚ್.ಕೆ.ಪಾಟೀಲ್, ಶ್ರೀ ಈಶ್ವರ್ ಖಂಡ್ರೆ ಅವರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.


## ಖೋಟಾ ನೋಟು ಮಾರಾಟ: ಕಾನ್ಸ್‌ಟೇಬಲ್ ಸೇರಿ ನಾಲ್ವರ ಬಂಧನ

ರಾಯಚೂರು : ಖೋಟಾ ನೋಟು ಜಾಲವನ್ನು ರಾಯಚೂರು ಪೊಲೀಸರು ಭೇದಿಸಿದ್ದಾರೆ. ಪ್ರಕರಣ ಸಂಬಂಧ ಸಶಸ್ತ್ರ ಮೀಸಲು ಪಡೆಯ ಕಾನ್ಸ್‌ಟೇಬಲ್ ಸೇರಿ ನಾಲ್ವರು ಆರೋಪಿಗಳನ್ನು ಸೋಮವಾರ ಬಂಧಿಸಲಾಗಿದೆ.

ಸದ್ದಾಂ ಅಲಿಯಾಸ್ ಮೊಹಮ್ಮದ್ ಯಾಸಿನ್, ಸಶಸ್ತ್ರ ಮೀಸಲು ಪಡೆ ಕಾನ್ಸ್‌ಟೇಬಲ್ ಮರಿಲಿಂಗ, ರಮೇಶ್ ಆದಿ ಹಾಗೂ ಶಿವಲಿಂಗ ಬಂಧಿತ ಆರೋಪಿಗಳು.

ಶಾಂತಿ ಕಾಲೋನಿಯಲ್ಲಿನ ಬಾಡಿಗೆ ಮನೆಯಲ್ಲಿ ಖೋಟಾ ನೋಟು ತಯಾರಿಕೆ ಮತ್ತು ಹಣ ತರಿಸಿಕೊಂಡು ಈ ಖೋಟಾ ನೋಟು ಮಾರಾಟ ಹಾಗೂ ಮಾರುಕಟ್ಟೆಯಲ್ಲಿ ನಕಲಿ ನೋಟು ಚಲಾವಣೆ ಮಾಡಿ ಜನರಿಗೆ ಮೋಸ ಮಾಡುತ್ತಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕಿತ್ತು.

ಈ ಖಚಿತ ಮಾಹಿತಿ ಮೇರೆಗೆ ಪೊಲೀಸರು ಇಂದು



ದಾಳಿ ನಡೆಸಿದ್ದಾರೆ. ಈ ವೇಳೆ ಮನೆಯಲ್ಲಿ ಪತ್ತೆಯಾದ ಖೋಟಾ ನೋಟು ತಯಾರಿಕೆಗೆ ಬಳಸುತ್ತಿದ್ದ ಬಿಳಿ ಪೇಪರ್ ಸೇರಿ ಕಚ್ಚಾ ವಸ್ತುಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಖೋಟಾ ನೋಟು ಪ್ರಕರಣ ಸಂಬಂಧ ಪಶ್ಚಿಮ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಪುಟ 2

## ನಕಲಿ ಮತದಾರರ ಗುರುತಿನ ಚೀಟಿ ಕುರಿತ ಚರ್ಚೆಗೆ ಸವಾಲು

**ನವದೆಹಲಿ:** ನಕಲಿ ಮತದಾರರ ಗುರುತಿನ ಚೀಟಿಗಳ ವಿಷಯದ ಬಗ್ಗೆ ಪ್ರತಿಪಕ್ಷಗಳು ಚರ್ಚೆಗೆ ಬಯಸಿವೆ ಮತ್ತು ಅದಕ್ಕೆ ಸರಕಾರ ಸಿದ್ಧವಾಗಿದೆಯೇ ಎಂದು ಟಿಎಂಸಿ ಸಂಸದ ಡೆರೆಕ್ ಒ ಬ್ರಿಯಾನ್ ಪ್ರಶ್ನಿಸಿದ್ದಾರೆ. ನಾಲ್ಕು ದಿನಗಳ ವಿರಾಮದ ಬಳಿಕ ಸಂಸತ್ತಿನ ಬಜೆಟ್ ಅಧಿವೇಶನ ಇಂದಿನಿಂದ ಪುನರಾರಂಭಗೊಳ್ಳುತ್ತಿರುವ ಸಂದರ್ಭದಲ್ಲಿ ಅವರು



ಎಕ್ಸ್ ಮಾಡಿ ಕೇಂದ್ರಕ್ಕೆ ಸವಾಲು ಹಾಕಿದ್ದಾರೆ.ಎಕ್ಸ್‌ನ ಪೋಸ್ಟ್‌ನಲ್ಲಿ, ನಕಲಿ ಮತದಾರರ ಗುರುತಿನ ಚೀಟಿಗಳ ವಿಷಯವು ಪ್ರಜಾಪ್ರಭುತ್ವದ ತಿರುಳಿನಲ್ಲಿದೆ ಎಂದು ಹೇಳಿ ಮಾರ್ಚ್ 12 ರ ಪೋಸ್ಟ್ ಅನ್ನು ಟ್ಯಾಗ್ ಮಾಡಿದ್ದಾರೆ. ಅದರಲ್ಲಿ ಅವರು ಈ ವಿಷಯದ ಬಗ್ಗೆ ಮುಂದಿನ ವಾರ (ನಿಯಮ 176ರ ಅಡಿಯಲ್ಲಿ) ಮುಕ್ತ ಪುಟ 2

## ಶಸ್ತ್ರಾಸ್ತ್ರ: ವ್ಯಕ್ತಿ ಬಂಧನ

**ಕೋಲ್ಕತಾ:** ಶಸ್ತ್ರಾಸ್ತ್ರಗಳನ್ನು ಹೊಂದಿದ್ದ ವ್ಯಕ್ತಿಯೊಬ್ಬರನ್ನು ಕೋಲ್ಕತಾ ಪೊಲೀಸರ ವಿಶೇಷ ಕಾರ್ಯಪಡೆ ಸೋಮವಾರ ಬೆಳಿಗ್ಗೆ ಸೀಲ್ದಾ ರೈಲ್ವೆ ನಿಲ್ದಾಣದಲ್ಲಿ ಬಂಧಿಸಿದೆ. ಬಂದ ಖಚಿತ ಮಾಹಿತಿ ಮೇರೆಗೆ ಎಸ್‌ಎಫ್ ಸಿಬ್ಬಂದಿ ಮಾಲ್ದಾ ಜಿಲ್ಲೆಯ ಕಲಿಯಾಚಕ್ ನಿವಾಸಿ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆ ವ್ಯಕ್ತಿ ಸೋಮವಾರ ಬೆಳಿಗ್ಗೆ ಪುಟ 2

## ಗುಂಡಿನ ಚಕಮಕಿ

**ಶ್ರೀನಗರ:** ಉತ್ತರ ಕಾಶ್ಮೀರದ ಕುಪ್ವಾರ ಜಿಲ್ಲೆಯಲ್ಲಿ ಸೋಮವಾರ ಭದ್ರತಾ ಸಿಬ್ಬಂದಿ ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ.ಹಂದ್ವಾರದ ಝುಚಲ್ದಾರನ ಕ್ರುಂಭೂರಾ ಗ್ರಾಮದಲ್ಲಿ ಭಯೋತ್ಪಾದಕರು ಅಡಗಿರುವ ಕುರಿತು ಗುಪ್ತಚರ ಮೂಲಗಳಿಂದ ದೊರೆತ ಖಚಿತ ಮಾಹಿತಿ ಆಧರಿಸಿ ಭದ್ರತಾ ಪಡೆ ಶೋಧ ಪ್ರಾರಂಭಿಸಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಡಗಿರುವ ಉಗ್ರರನ್ನು ಭದ್ರತಾ ಪಡೆ ಸುತ್ತುವರೆಯುತ್ತಿದ್ದಂತೆ, ಭಯೋತ್ಪಾದಕರು ಗುಂಡಿನ ದಾಳಿ ಪುಟ 2

## ಮಹಿಳೆಯರ ಸುರಕ್ಷತೆ: ದೆಹಲಿಯಲ್ಲಿ ಹೊಸ ಕ್ರಮ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಮಹಿಳೆಯರ ಸುರಕ್ಷತೆಗೆ ಪೊಲೀಸರು 'ಶಿಷ್ಟಾಚಾರ ಈವ್ ಟೀಸಿಂಗ್ ವಿರೋಧಿ ಸ್ವಾಡ್' ರಚಿಸಿದ್ದಾರೆ. ಈ ತಂಡ ಎಲ್ಲೆಡೆ ಗಸ್ತು ತಿರುಗಿ ಮಹಿಳೆಯರ ಭದ್ರತೆಯನ್ನು ಖಾತ್ರಿಪಡಿಸಲಿದೆ. ವೈಯಕ್ತಿಕ ಅಥವಾ ಸಾಂಸ್ಕೃತಿಕ ನೈತಿಕಗಿರಿ ಹೇರುವ ಬದಲಾಗಿ ಕಟ್ಟುನಿಟ್ಟಾಗಿ ಕಾನೂನು ಕ್ರಮಗಳನ್ನು ಈ ತಂಡ ಜಾರಿಗೊಳಿಸುತ್ತಿದೆ. ಈವ್ ಟೀಸಿಂಗ್, ಕಿರುಕುಳ ಮತ್ತಿತರ ಮಹಿಳೆಯರ ಮೇಲಿನ ಅಪರಾಧವನ್ನು ತಡೆಯುತ್ತದೆ.ಪುಟ

## ನಮ್ಮ ಮೆಟ್ರೋ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ಅನಿವಾರ್ಯ

**ಬೆಂಗಳೂರು:** ಬಿಎಂಆರ್‌ಸಿಎಲ್ ಸಂಸ್ಥೆಯು ಇತ್ತೀಚಿನ ತನ್ನ ಲೋಕೋ ಪೈಲೆಟ್‌ಗಳ ನೇಮಕಾತಿಯಲ್ಲಿನ 3 ವರ್ಷಗಳ ಅನುಭವದ ಷರತ್ತುಗಳು ಸಂಪೂರ್ಣ ಕನ್ನಡಿಗರನ್ನು ಹೊರಗಿಡುವ ಹುನ್ನಾರವೇ ಹೊರತು ಬೇರೇನೂ ಅಲ್ಲ. ಅನ್ಯ ರಾಜ್ಯಗಳ ಮೆಟ್ರೋಗಳಲ್ಲಿ ಕೆಲಸ ಮಾಡುತ್ತಿರುವ ಅನ್ಯ ಭಾಷಿಕರನ್ನು ಚಾಲಕ ಹುದ್ದೆಗಳಿಗೆ ತುಂಬುವುದೇ ಇವರ ಷಡ್ಯಂತ್ರ. ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ತುರ್ತುಪತ್ರಿಕ ಹೇಳಿಕೆಯನ್ನು ಹೊರಡಿಸಿದ್ದಾರೆ.

ಈಗಾಗಲೇ ಸಂಸ್ಥೆಯಲ್ಲಿ ಉನ್ನತ ಹುದ್ದೆಗಳೆಲ್ಲವೂ ಅನ್ಯ ಭಾಷಿಕರ ಪಾಲಾಗಿದ್ದು ಅವರುಗಳ ಇಚ್ಛಾನುಸಾರವೇ ನೇಮಕಾತಿಗಳು ಸಹ ನಡೆಯುತ್ತಿರುವುದು ಕನ್ನಡಿಗರಿಗೆ



ಆಗುತ್ತಿರುವ ಅನ್ಯಾಯ. ಕನ್ನಡದ ನೆಲ, ಜಲ, ತೆರಿಗೆ ಎಲ್ಲವನ್ನು ಬಳಸಿಕೊಳ್ಳುತ್ತಿರುವ ಸಂಸ್ಥೆಯು ಕನ್ನಡಿಗರ ನೇಮಕಾತಿಯ ವಿಚಾರದಲ್ಲಿ ಅನವಶ್ಯಕ ಗೊಂದಲಗಳನ್ನು ಸೃಷ್ಟಿಸುತ್ತಿದ್ದಾರೆ. ಈ ಕೂಡಲೇ ಸರ್ಕಾರ ಇಂತಹ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕಮ ತೆಗೆದುಕೊಳ್ಳಬೇಕು ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಡಾ. ಮುಖ್ಯಮಂತ್ರಿ ಚಂದ್ರು ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ.

ಅಲ್ಲದೆ ಮೆಟ್ರೋ ಉನ್ನತ ಅಧಿಕಾರಿಗಳು ಅನವಶ್ಯಕವಾಗಿ ಅಧ್ಯಯನದ ಹೆಸರಿನಲ್ಲಿ ವಿದೇಶ ಪ್ರವಾಸಗಳನ್ನು ಕೈಗೊಂಡು ಮೋಜಿನ ಜೀವನ ನಡೆಸುತ್ತಿದ್ದಾರೆ. ಸಂಸ್ಥೆಯಲ್ಲಿ ಅನವಶ್ಯಕ ದುಬಾರಿ ಖರ್ಚುಗಳನ್ನು ಮಾಡುವ ಮೂಲಕ ನಷ್ಟವನ್ನು ತೋರಿಸುತ್ತಿದ್ದಾರೆ. ಸಂಸ್ಥೆಯು ಕನ್ನಡ ನೌಕರರ ಯೂನಿಯನ್ ಜೊತೆ ಯಾವುದೇ ಚರ್ಚೆಗಳನ್ನು ಮಾಡದೆ ಕನ್ನಡ ವಿರೋಧಿ ಧೋರಣೆಯನ್ನು ಪದೇ ಪದೇ ಮುಂದುವರಿಸುತ್ತಲೇ ಬರುತ್ತಿದ್ದಾರೆ. ಇವುಗಳೆಲ್ಲವೂ ತಕ್ಷಣವೇ ನಿಲ್ಲಬೇಕು.

ಈಗಾಗಲೇ ಸಮಾಜದ ಎಲ್ಲ ವರ್ಗಗಳ ತೀವ್ರ ವಿರೋಧಗಳ ನಡುವೆಯೂ ಸಹ ಮೆಟ್ರೋ ಟಿಕೆಟ್ ಬೆಲೆಯನ್ನು ಪುಟ 2

## ಚಂದ್ರಯಾನ–5 ಮಿಷನ್‌ಗೆ ಕೇಂದ್ರ ಅನುಮೋದನೆ

**ಚೆನ್ನೈ:** ಚಂದ್ರನ ಅಧ್ಯಯನಕ್ಕಾಗಿ ಮಹತ್ವಾಕಾಂಕ್ಷೆಯ ಚಂದ್ರಯಾನ–5 ಮಿಷನ್‌ಗೆ ಕೇಂದ್ರವು ಇತ್ತೀಚೆಗೆ ಅನುಮೋದನೆ ನೀಡಿದೆ ಎಂದು ಇಸ್ರೋ ಅಧ್ಯಕ್ಷ ವಿ ನಾರಾಯಣನ್ ಹೇಳಿದ್ದಾರೆ.

ಬೆಂಗಳೂರಿನ ಪ್ರಧಾನ ಕಛೇರಿಯ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿದ್ದಕ್ಕಾಗಿ ಅವರನ್ನು ಅಭಿನಂದಿಸುವ ಕಾರ್ಯಕ್ರಮದಲ್ಲಿ, ನಾರಾಯಣನ್ ಅವರು 25 ಕೆಜಿ ರೋವರ್ ಪ್ರಯಾಗ್ಯಾನ್ ಅನ್ನು ಹೊತ್ತ ಚಂದ್ರಯಾನ–3 ಮಿಷನ್‌ಗಿಂತ ಭಿನ್ನವಾಗಿ, ಚಂದ್ರಯಾನ–5 ಮಿಷನ್ ಚಂದ್ರನ ಮೇಲೆಯನ್ನು ಅಧ್ಯಯನ ಮಾಡಲು 250 ಕೆಜಿ ರೋವರ್ ಅನ್ನು ಹೊತ್ತೊಯ್ಯುತ್ತದೆ ಎಂದು ಹೇಳಿದರು.

ಕಳೆದ 2008 ರಲ್ಲಿ ಯಶಸ್ವಿಯಾಗಿ ಉಡಾವಣೆಯಾದ ಚಂದ್ರಯಾನ–1, ಚಂದ್ರನ



ರಾಸಾಯನಿಕ, ಖನಿಜ ಮತ್ತು ಫೋಟೋ–ಭೂವೈಜ್ಞಾನಿಕ ಮ್ಯಾಪಿಂಗ್ ಅನ್ನು ತೆಗೆದುಕೊಂಡಿತು. ಚಂದ್ರಯಾನ–2 ಮಿಷನ್ (2019) ಶೇಕಡಾ 98 ರಷ್ಟು ಯಶಸ್ವಿಯಾಗಿದೆ ಆದರೆ ಅಂತಿಮ ಹಂತದಲ್ಲಿ ಕೇವಲ ಎರಡು ಶೇಕಡಾ ಮಿಷನ್ ಸಾಧಿಸಲು ಸಾಧ್ಯವಾಗಲಿಲ್ಲ ಎಂದರು.

ಇನ್ನೂ ಚಂದ್ರಯಾನ–2 ರ ಆನ್‌ಬೋರ್ಡ್ ಹೈ ರೆಸಲ್ಯೂಶನ್ ಕ್ಯಾಮೆರಾ ನೂರಾರು ಚಿತ್ರಗಳನ್ನು ಕಳುಹಿಸುತ್ತಿದೆ ಎಂದು ಬಾಹ್ಯಾಕಾಶ ಇಲಾಖೆಯ ಕಾರ್ಯದರ್ಶಿಯೂ ಆಗಿರುವ ನಾರಾಯಣನ್ ಹೇಳಿದ್ದಾರೆ.

ಚಂದ್ರಯಾನ–3 ಮಿಷನ್ ಚಂದ್ರನ ಮೇಲೆಯಲ್ಲಿ ಸುರಕ್ಷಿತ ಲ್ಯಾಂಡಿಂಗ್ ಮತ್ತು ರೋವಿಂಗ್‌ನಲ್ಲಿ ಅಂತ್ಯದಿಂದ ಅಂತ್ಯದ ಸಾಮರ್ಥ್ಯವನ್ನು ಪ್ರದರ್ಶಿಸಲು ಚಂದ್ರಯಾನ–2 ಗೆ ಫಾಲೋ–ಆನ್ ಮಿಷನ್ ಪುಟ 2

## ಕರ್ನಾಟಕ ರಾಜ್ಯ ನೀರಾವರಿ ನಿಗಮದಲ್ಲಿ ನಡೆಯುತ್ತಿದೆಯಾ ಅಕ್ರಮ?

**ಬೆಂಗಳೂರು:** ಈ ಹಿಂದಿನಿಂದಲೂ ರಾಜ್ಯದ ಶಕ್ತಿಕೇಂದ್ರ ವಿಧಾನಸೌಧದ ಜಲಸಂಪನ್ಮೂಲ ಇಲಾಖೆಯಡಿ ಬರುವ "ಕರ್ನಾಟಕ ರಾಜ್ಯ ನೀರಾವರಿ ನಿಗಮ"ದಲ್ಲಿ ಅಕ್ರಮ ಮುಂಬಡ್ತಿ, ಅಕ್ರಮ ನೇಮಕಾತಿ ಗುಲ್ಲು ಸುದ್ದಿಕೇಂದ್ರದಲ್ಲಷ್ಟೇ ಅಲ್ಲದೇ ವಿಧಾನಸಭೆ( ಕೆಳಮನೆಯ)ಯ ನಡೆಯುತ್ತಿರುವ ಬಜೆಟ್ ಅಧಿವೇಶನಕ್ಕೂ ಮುಟ್ಟಿದೆ.

ಈ ಬಗ್ಗೆ ನಿಯಮ 351ರ ಅಡಿಯಲ್ಲಿ ಜೆಡಿಎಲ್‌ಪಿ ನಾಯಕ ಸುರೇಶ್ ಬಾಬು ಕೇಳಿರುವ ಸೂಚನಾ ಪ್ರಶ್ನೆಗೆ ಡಿಸಿಎಂ ಆಗಿರುವ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಲಿಖಿತ ಉತ್ತರ ನೀಡಿದ್ದಾರೆ.

ಕರ್ನಾಟಕ ನೀರಾವರಿ ನಿಗಮ ನಿಯಮಿತದಲ್ಲಿ ಅಕ್ರಮ ನೇಮಕಾತಿ / ನಿಯಮ ಬಾಹಿರ ಮುಂಬಡ್ತಿ ನೀಡಿರುವುದು, ಅದರಂತೆಯೇ ವೇತನ ಹಾಗೂ ಇನ್ನಿತರೆ ಸವಲತ್ತುಗಳನ್ನು ನಿಯಮ ಬಾಹಿರವಾಗಿ ಪಡೆದಿರುವ ಸಂಬಂಧ ಸರ್ಕಾರದಲ್ಲಿ ಸಾರ್ವಜನಿಕ ದೂರು ಸ್ವೀಕೃತಗೊಂಡಿರುವ ದೂರಿನಲ್ಲಿನ ಅಂಶಗಳ ಕುರಿತು ಪರಿಶೀಲನೆ ನಡೆಸಿ ವರದಿಯನ್ನು ಸಲ್ಲಿಸುವಂತೆ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ನಿರ್ದೇಶನ ನೀಡಿರುವುದಾಗಿ ಡಿಕೆಶಿ ಹೇಳಿದ್ದಾರೆ. ಅಲ್ಲದೇ, ಕರ್ನಾಟಕ ನೀರಾವರಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸಲ್ಲಿಸಿರುವ ವರದಿಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುವುದಾಗಿ ಸಚಿವರು ಲಿಖಿತವಾಗಿ ಹೇಳಿದ್ದಾರೆ.

ಅಂದ್ಹಾಗೆ ಡಿಸಿಎಂ ಡಿ.ಕೆ.ಶಿವಕುಮಾರ್ ನೀರಾವರಿ ನಿಗಮದಲ್ಲಿನ ಅಕ್ರಮಗಳ ಹರಿವನ್ನು ಪರಿಶೀಲನೆಯಲ್ಲಿದೆ ಎಂದಿದ್ದಾರಾದರೂ ಸಚಿವ ಈ ಲಿಖಿತ ಉತ್ತರದಿಂದ ನೊಂದವರು ತೃಪ್ತರಾಗಿಲ್ಲ. ನೊಂದವರು 2007ರಿಂದಲೂ ನೊಂದುಕೊಂಡೇ ಇದ್ದರೂ ಸಹ ಇದೂವರೆಗೆ ತಮಗೆ ನ್ಯಾಯ ದೊರೆತಿಲ್ಲ ಎಂದೇ ವಿಧಾನಸೌಧದ ಪಡಸಾಲೆಯಲ್ಲಿ ಸದ್ದುಮಾಡುತ್ತಿದ್ದಾರೆ.

ಕರ್ನಾಟಕ ನೀರಾವರಿ ನಿಗಮ, ನೋಂದಾಯಿತ ಕಛೇರಿ, ಬೆಂಗಳೂರು



ಇಲ್ಲಿ ಸುಮಾರು 25 ನೌಕರರು ನಿಗಮದಲ್ಲಿ 2000 ದಿಂದ 2007 ರವರೆಗೆ ಹೊರ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು 2007 ರಲ್ಲಿ ನಿಗಮದ ಮಂಡಳಿ ಸಭೆಯ ಅನುಮೋದನೆ ಪಡೆದು ಖಾಯಂ ಆಗಿ ಕರ್ತವ್ಯಕ್ಕೆ ನಿಯೋಜನೆಗೊಂಡು 2010 ರಲ್ಲಿ ನಿಗಮದ ಖಾಯಂ ನೌಕರರಾಗಿ ಸೇವೆಗೆ ಸೇರಿಕೊಂಡರು. ಆಗ ವೇತನ ನಿಗದಿ ಮಾಡುವಾಗ ಯಾವುದೇ ವಿದ್ಯಾರ್ಹತೆ, ಅನುಭವ, ವಯಸ್ಸು ಇತರೆ ಮಾನದಂಡಗಳನ್ನು ಪರಿಗಣಿಸದೆ ತಮಗಿಷ್ಟ ಬಂದಂತೆ ರೀತಿಯಲ್ಲಿ ಒಬ್ಬರಿಗೆ ಎರೆಡೆರೆಡು ಪದನಾಮಗಳನ್ನು ಜಘುರಂಟಿಚಣುಠಂಟಿ ಬಳಸಿಕೊಂಡು ಸೇವಾ ಹಿರಿತನ ಹಾಗೂ ಇತರೆ ವಿಷಯಗಳನ್ನು ಪರಿಗಣಿಸಿರಲಿಲ್ಲ. 2021 ರ ನವೆಂಬರ್ ನಲ್ಲಿ ನಿಗಮದ ಹಣಕಾಸು ಶಾಖೆಯಲ್ಲಿ ಕೆಲವು ನೌಕರರು ತಮಗೆ ಇಷ್ಟ ಬಂದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಿಕೊಂಡು ಸ್ಟೆನೋ ಕಂ ಆಫೀಸ್ ಅಸಿಸ್ಟೆಂಟ್ ಎಂಬ ಹೊಸ ಹುದ್ದೆಯನ್ನು ಸೃಷ್ಟಿಸಿ ತಮಗೆ ಇಷ್ಟ ಬಂದಂತೆ ಸುಮಾರು 15000 ಗಳ ವರೆಗೆ ಮೂಲ ವೇತನ ಹೆಚ್ಚಿಸಿಕೊಂಡು, ಪ್ರಬಾರ ಹುದ್ದೆಯ ಭತ್ಯೆಯನ್ನೂ ಪಡೆದುಕೊಂಡಿದ್ದಾರೆ ಇಲ್ಲಿ ಯಾವುದೇ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪಾಲಿಸಿಲ್ಲ. ಸ್ಟೆನೋ ಹುದ್ದೆಯಲ್ಲಿ ಕೆಲಸ ಮಾಡ ಬೇಕಾದರೆ ಸಂಪೂರ್ಣ ಜೂನಿಯರ್, ಮಧ್ಯಂತರದಲ್ಲಿ ಕನ್ನಡ ಮತ್ತು ಇಂಗ್ಲಿಷ್ ಭಾಷೆಯಲ್ಲಿ ಉತ್ತೀರ್ಣ ರಾಗಿರಬೇಕು ಮತ್ತು ಪದವಿಧರರಾಗಿರಬೇಕು. ಆದರೆ ಇಂತಹ ವಿದ್ಯಾರ್ಹತೆಯ ಇಲ್ಲದೇ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ಇವರಿಗೆ ಬೇಕಾದಂತೆ ವೇತನ ಪುಟ 2

## ವಿದ್ಯಾರ್ಥಿಗಳಿಗೆ ನೀಡುವ ಆಹಾರ-ನೀರಿನ ಬಗ್ಗೆ ಎಚ್ಚರಿಕೆ ವಹಿಸಿ

**ಬೆಂಗಳೂರು:** ಬೇಸಿಗೆ ಕಾಲವಾದ್ದರಿಂದ ವಿದ್ಯಾರ್ಥಿಗಳಿಗೆ ನೀಡಲಾಗುವ ಆಹಾರ, ಕುಡಿಯುವ ನೀರಿನ ಬಗ್ಗೆ ಹೆಚ್ಚಿನ ಕಟ್ಟೆಚ್ಚರ ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.



ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಮಂಡ್ಯ ಲೋಕಸಭೆ ಕ್ಷೇತ್ರದ ಮಳವಳ್ಳಿ ತಾಲೂಕಿನ ಟಿ.ಕಾಗೇಪುರದ ಖಾಸಗಿ ವಸತಿ ಶಾಲೆಯಲ್ಲಿ ಕಲುಷಿತ ಆಹಾರ ಸೇವಿಸಿ ವಿದ್ಯಾರ್ಥಿ ಮೃತಪಟ್ಟಿರುವ ಘಟನೆ ಅತ್ಯಂತ ದುರದೃಷ್ಟಕರ. ಇದರಿಂದ ನನಗೆ ಪುಟ 2

# ಅಂತರಾಷ್ಟ್ರೀಯ ಗ್ರಾಹಕರ ದಿನಾಚರಣೆ



**ಬೆಂಗಳೂರು:** ಕನ್ ಸ್ಯೂಮರ್ ನ್ಯೂಸ್ ಕನ್ನಡ ಮಾಸ ಪತ್ರಿಕೆ ಹಾಗೂ ಸಿಟಿಜನ್ ಕನ್ ಸ್ಯೂಮರ್ ಕೌನ್ಸಿಲ್ ವತಿಯಿಂದ ಅಂತರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಬೆಂಗಳೂರು ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗದ ಅಧ್ಯಕ್ಷೆ ಅನಿತಾ ಶಿವಕುಮಾರ್, ಪ್ರತಿಯೊಬ್ಬರು ಗ್ರಾಹಕರ ಹಕ್ಕುಗಳ ಬಗ್ಗೆ ಹೆಚ್ಚಿನ ಅರಿವು ಹೊಂದಿರುವುದು ಅಗತ್ಯವಾಗಿದೆ,ಪ್ರತಿ ವಸ್ತುಗಳ ತಯಾರಿಕೆ ಮತ್ತು ಅವುಗಳ ಗುಣಮಟ್ಟ ಕುರಿತು ಜಾಗೃತಿ ಹೊಂದುವ ಮೂಲಕ ಕಳಪೆಯಾಗಿದ್ದರೆ ಇಂತಹ ವೇದಿಕೆ ಮೂಲಕ ಪರಿಹಾರ ಒದಗಿಸಿಕೊಳ್ಳಬಹುದಾಗಿದೆ ಎಂದರು.

ಆಯೋಗದ ಸದಸ್ಯೆ ಸುಮಾ ಅನಿಲ್ ಕುಮಾರ್ ಮಾತನಾಡಿ, ಗ್ರಾಹಕರಿಗೆ ಯಾವುದೇ ಉತ್ಪನ್ನಗಳು,ಕಂಪನಿಗಳಿಂದ ಅನ್ಯಾಯವಾದರೆ ಅವುಗಳಿಗೆ ನ್ಯಾಯ ಒದಗಿಸುವುದು ನಮ್ಮ ಕರ್ತವ್ಯವಾಗಬೇಕು,ಆಯೋಗದ ಗ್ರಾಹಕರಿಗೆ ನ್ಯಾಯ ಒದಗಿಸುವ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಸಿಟಿ ಕನ್ ಸ್ಯೂಮರ್ ಕೌನ್ಸಿಲ್ ಟ್ರಸ್ಟ್ ಅಧ್ಯಕ್ಷ ಡಾ.ವಿನಯ್ ಕುಮಾರ್. ಎಸ್. ಮಾತನಾಡಿ ಗ್ರಾಹಕರ ಹಕ್ಕುಗಳ ಕುರಿತು ಸಾರ್ವಜನಿಕರು ಹೊಂದಬೇಕಾದ ತಿಳುವಳಿಕೆ ಕುರಿತು ಅರಿವು ಮೂಡಿಸಲಾಗುತ್ತದೆ ಎಂದರು.

ಸಾಲು ಸಂಪದ ಪತ್ರಿಕೆ ಸಂಪಾದಕ ವೆಂಕಟೇಶ್ ಸಂಪ, ಸಿವಿಲ್ ಡಿಫೆನ್ಸ್ ಸಹಾಯಕ ಗೌವರ್ನರ್ ಮಿರ್ಜಾ ಇಸ್ಮಾಯಿಲ್, ಸಹ ಸಂಸ್ಥಾಪಕ ರಾಜೇಶ್ ರಾಂಪುರೆ ಮತ್ತಿತರರು ಭಾಗವಹಿಸಿದ್ದರು.

# ಪುನೀತ್ ಹುಟ್ಟುಹಬ್ಬ ಆಚರಣೆ; ರಕ್ತದಾನ ಶಿಬಿರ



**ಬೆಂಗಳೂರು;** ಶ್ರೀ ವಿನಾಯಕ ಪ್ರೆಂಡ್ಸ್ ಅಸೋಸಿಯೇಶನ್ ರಿ. ವತಿಯಿಂದ ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಹುಟ್ಟು ಹಬ್ಬದ ಅಂಗವಾಗಿ ರಕ್ತದಾನ ಶಿಬಿರವನ್ನು ಮಹಾಲಕ್ಷ್ಮೀ ಲೇಔಟ್ ನ ಅಶೋಕಪುರಂ ಸಾವಲೆಸ್ ಮುಖ್ಯ ರಸ್ತೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಶಾಸಕ ಕೆ.ಗೋಪಾಲಯ್ಯ ಪುನೀತ್ ರಾಜ್ ಕುಮಾರ್ ಪ್ರತಿಮೆಗೆ ಪುಷ್ಪಹಾರ ಅರ್ಪಿಸಿ,ನಮನ ಸಲ್ಲಿಸಿ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿದರು.

ನೂರಾರು ಮಂದಿ ರಕ್ತದಾನ ಮಾಡುವ ಮೂಲಕ ತಮ್ಮ ಅಭಿಮಾನ ಮೆರೆದರು.

ಬಿಜೆಪಿ ಮುಖಂಡರಾದ ಉಮಾಪತಿ ನಾಯ್ಡು,ಪುಟ್ಟಣ್ಣ, ಅಧ್ಯಕ್ಷ ರವಿ,ಉಪಾಧ್ಯಕ್ಷ ರಂಗನಾಥ್,ಖಚಾಂಚಿ ರಾಜು ಮತ್ತಿತರರು ಭಾಗವಹಿಸಿದ್ದರು.

# ಹೆಗ್ಗಡೆಯವರ "ಯಾಯಾತಿ"ಕಾದಂಬರಿ ಬಿಡುಗಡೆ




**ಬೆಂಗಳೂರು:** ಲೇಖಕ ಪುರುಷೋತ್ತಮ್ ಹೆಗ್ಗಡೆ ಅವರ ಮನೋವೈಜ್ಞಾನಿಕ ಕಾದಂಬರಿ "ಯಯಾತಿ" ಕಾದಂಬರಿ ಬಿಡುಗಡೆ ಸಮಾರಂಭ ರವೀಂದ್ರ ಕಲಾ ಕ್ಷೇತ್ರದಲ್ಲಿ ನಡೆಯಿತು.

ಕಾದಂಬರಿ ಬಿಡುಗಡೆಗೊಳಿಸಿ ಮಾತನಾಡಿದ ಮನೋವೈಜ್ಞಾನಿಕ ತಜ್ಞೆ ನಿಮ್ಹಾನ್ಸ್ ನ ಪ್ರಾಧ್ಯಾಪಕಿ ಡಾ.ಮಂಜುಳ, ಈ ಪುಸ್ತಕದಲ್ಲಿ ಲೇಖಕರು ಪೌರಣಿಕ ಐತಿಹಾಸಿಕ ಕಥೆಯನ್ನು ಮನೋವೈಜ್ಞಾನಿಕವಾಗಿ ಚಿತ್ರೀಕರಿಸಿದ್ದಾರೆ,ಈ ಪುಸ್ತಕ ನಮ್ಮನ್ನು ಒದಿಸಿಕೊಂಡು ಹೋಗುತ್ತದೆ. ಮನಶಾಸ್ತ್ರವನ್ನು ವಿವರಿಸುವ ಸಂದರ್ಭದಲ್ಲಿ ವಿವರಿಸಿದ್ದಾರೆ.ಒಬ್ಬ ವ್ಯಕ್ತಿಯ ನಡವಳಿಕೆಯನ್ನು ಹೇಗೆ ಅರ್ಥಮಾಡಿಕೊಳಬೇಕು ಎಂಬುದನ್ನು ಈ ಕಾದಂಬರಿ ತಿಳಿಸಲಿದೆ,ಜೀವನದ ಉದ್ದೇಶ ಏನ್ನೇಬುದನ್ನು ಅರ್ಥಮಾಡಿಕೊಳ್ಳದೇ ಗುರಿ ಸಾಧಿಸಲು ಸಾಧ್ಯವಿಲ್ಲ ಎಂಬುದು ಈ ಕಾದಂಬರಿಯ ಪ್ರಮುಖ ಸಾರಂಶವಾಗಿದೆ, ಒದಲು ಕಾದಂಬರಿ ಅತ್ಯಂತ ಆಕರ್ಷಕವಾಗಿದೆ ಎಂದು ಹೇಳಿದರು.

ಖ್ಯಾತ ವಿಮರ್ಶಕ ದಂಡಪ್ಪ ಮಾತನಾಡಿ, ಪುರುಷೋತ್ತಮ್ ದಾಸ್ ಹೆಗ್ಗಡೆ ರಾಮಾಯಣ ಬರೆದಿದ್ದಾರೆ,ಮನಃಶಾಸ್ತ್ರಕ್ಕೆ ಸಂಬಂಧಿಸಿದ ಪ್ರಸ್ತುತ ಯಾಯತಿಯನ್ನು ಬರೆದಿದ್ದಾರೆ.ಪುರಾಣಗಳನ್ನು ಆಯ್ಕೆ ಮಾಡಿಕೊಂಡು ಈ ಕಾದಂಬರಿ ರಚಿಸಿದ್ದಾರೆ. ಈ ಕಾದಂಬರಿಯಲ್ಲಿ ಶಾಸ್ತ್ರ ಸೇರಿ ಎಲ್ಲ ಅಂಶಗಳನ್ನು ಸೇರಿಸಿಕೊಂಡು ರಚನೆಯಾದ ಉತ್ತಮ ಕಾದಂಬರಿಯಾಗಿದೆ.ಈ ಕಥೆಯಲ್ಲಿ ನಿರೂಪಣೆ ಅತ್ಯದ್ಬುತವಾಗಿ ಮೂಡಿ ಬಂದಿದೆ ಎಂದರು.

ಲೇಖಕಿ ಪುರುಷೋತ್ತಮ್ ದಾಸ್ ಹೆಗ್ಗಡೆ ಮಾತನಾಡಿ,ಮನುಷ್ಯನಿಗೆ ಮುಪ್ಪು,ಸಾವಿನ ಬಗ್ಗೆ ಸಂಶಯ ಕಾಡುತ್ತಲೇ ಬಂದಿದೆ.ಇದಕ್ಕಾಗಿ ಅವರಿಗೆ ಭಯ ಕಾಡುತ್ತಲೇ ಇರುತ್ತದೆ. ಮನುಷ್ಯ ತಾನು ಸತ್ತರೂ ಪರವಾಗಿಲ್ಲ ನನ್ನ ವಂಶ ಬೆಳೆಯಬೇಕು ಎಂಬುದು ಈ ಕೃತಿಯ ಸಾರಾಂಶವಾಗಿದೆ,ಮುಪ್ಪು ಮತ್ತು ಸಾವಿನ ಬಗ್ಗೆ ಮೂನ್ನೂರಕ್ಕೂ ಅಧಿಕ ಪುಸ್ತಕಗಳು ರಚನೆಯಾಗಿವೆ ಇದನ್ನು ಗ್ಯಾರೋಂಟಾಲಜಿ ಎಂದು ಕರೆಯಲಾಗುತ್ತದೆ. ಈ ಕೃತಿಯಲ್ಲಿ ವಿವಿಧ ಪಾತ್ರಗಳ ಮನಸ್ಸು, ಪಾತ್ರವನ್ನು ಅಧ್ಯಯನ ನಡೆಸಿ ಮನೋವೈಜ್ಞಾನಿಕವಾಗಿ ತಯಾರಿಸಲಾಗಿದೆ. ಆಧುನಿಕ ಜಗತ್ತಿನಲ್ಲಿ ಯಾಯಾತಿ ಬಾರೀ ಪ್ರಮುಖ ಪಾತ್ರ ಪಡೆದುಕೊಳಲಿದೆ ಎಂದರು.

ಚಿಂತಕ,ಸಾಹಿತಿ ಡಾ.ಬಂಜಗೆರೆ ಜಯಪ್ರಕಾಶ್ ಪುಸ್ತಕ ಬಿಡುಗಡೆಯ ಅಧ್ಯಕ್ಷತೆಯನ್ನು ವಹಿಸಿದ್ದರು. ಮಾಜಿ ಸಚಿವ ಎಚ್.ಎಂ.ರೇವಣ್ಣ, ಕನಕ ಸಂಶೋಧನಾ ಸಂಸ್ಥೆಯ ಮುಖ್ಯಸ್ಥ ಕಾ.ತ.ಚಿಕ್ಕಣ್ಣ, ಸಾಹಿತಿಗಳಾದ ಲಕ್ಷ್ಮಣ್ ಕೊಡಸೆ.ದಾಮೋಧರ್ ಸೇರಿದಂತೆ ಅಪಾರ ಸಾಹಿತಿ, ಲೋಕೋಪಯೋಗಿ ಇಲಾಖೆಯ ಅಭಿಯಂತರರು ಭಾಗವಹಿಸಿದ್ದರು.

# ಕಾಡಾನೆ ದಾಳಿಗೆ ಮಹಿಳೆ ಸಾವು: ಮೃತರ ಕುಟುಂಬಕ್ಕೆ 20 ಲಕ್ಷ ಪರಿಹಾರ

**ಬೆಂಗಳೂರು:** ಹಾಸನದ ಬೇಲೂರಿನಲ್ಲಿ ಕಾಡಾನೆ ದಾಳಿಯಿಂದ ಮೃತಪಟ್ಟ ಮಹಿಳೆಯ ಕುಟುಂಬಕ್ಕೆ 20 ಲಕ್ಷ ರೂ. ಪರಿಹಾರ ನೀಡುವುದಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಘೋಷಿಸಿದರು.

ವಿಧಾನಪರಿಷತ್ ಕಲಾಪದಲ್ಲಿ ಇಂದು ಈ ಬಗ್ಗೆ ಜೆಡಿಎಸ್ ಎಂಎಲ್ ಸಿ ಸೂರಜ್ ರೇವಣ್ಣ ಪ್ರಸ್ತಾಪಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಈಶ್ವರ್ ಖಂಡ್ರೆ, ಆನೆ ಮತ್ತು ಮಾನವ ಸಂಘರ್ಷ ಇಂದು, ನಿನ್ನೆಯದಲ್ಲ. ಇದು ಹಲವು ವರ್ಷಗಳಿಂದ ನಡೆಯುತ್ತಿರುವಂತಹ ಸಂಘರ್ಷ. ಕೋವಿಡ್ ಬಳಿಕ ಹಾಸನದಲ್ಲಿ 4 ರಿಂದ 5 ಜನರು ಆನೆ ದಾಳಿಯಿಂದ ಸಾವನ್ನಪ್ಪಿದ್ದಾರೆ. ನಾವು ಪರಿಹಾರ ಕೊಡಬಹುದೇ ಹೊರತು, ಜೀವ ವಾಪಾಸ್ ತರಲು ಸಾಧ್ಯವಿಲ್ಲ ಎಂದರು.

ಹಾಸನ ಜಿಲ್ಲೆಯಲ್ಲಿ ಕಾಡಾನೆ ಹಾವಳಿ ತಡೆಗೆ ಕ್ರಮ ಕೈಗೊಳ್ಳುತ್ತೇವೆ. ಕೊಡಗು, ಹಾಸನ, ಚಿಕ್ಕಮಗಳೂರಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿದ್ದು, ಹಾಸನದ ಬೇಲೂರಿನಲ್ಲಿ ಕಾಡಾನೆ ದಾಳಿಯಿಂದ ಮೃತರಾದ ಮಹಿಳೆ ಕುಟುಂಬಕ್ಕೆ 20 ಲಕ್ಷ ರೂ> ಪರಿಹಾರ ನೀಡುತ್ತೇವೆ ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

# ಮುಂಬೈ ವಿಮಾನ ನಿಲ್ದಾಣದಲ್ಲಿ ರನ್ಯಾರಾವ್ ಮಾದರಿಯಲ್ಲಿ ಚಿನ್ನ ಸಾಗಿಸುತ್ತಿದ್ದ ಐವರ ಬಂಧನ

**ಮುಂಬೈ:** ಚಿತ್ರ ನಟಿ ರನ್ಯಾರಾವ್ ಮಾದರಿಯಲ್ಲಿ ತಮ್ಮ ದೇಹದಲ್ಲಿ ಚಿನ್ನ ಅಡಗಿಸಿಟ್ಟಿಕೊಂಡಿದ್ದ ಇಬ್ಬರನ್ನು ಇಲ್ಲಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಡೆದ ನಾಲ್ಕು ಕಾರ್ಯಾಚರಣೆಗಳಲ್ಲಿ ಬಂಧಿಸಲಾಗಿದೆ. ಕಾರ್ಯಾಚರಣೆಯಲ್ಲಿ ವಿಮಾನ ನಿಲ್ದಾಣದ ಸಿಬ್ಬಂದಿ ಸೇರಿದಂತೆ ಒಟ್ಟು ಐವರನ್ನು ಬಂಧಿಸಲಾಗಿದೆ.

ಬಂಧಿತರಿಂದ 8.47 ಕೋಟಿ ರೂಪಾಯಿ ಮೌಲ್ಯದ 10 ಕೆಜಿಗೂ ಹೆಚ್ಚು ಚಿನ್ನವನ್ನು ಮುಂಬೈ ಕಸ್ಟಮ್ಸ್ ವಶಪಡಿಸಿಕೊಂಡಿದೆ ಮತ್ತು ಮೂವರು ಖಾಸಗಿ ವಿಮಾನ ನಿಲ್ದಾಣದ ಸಿಬ್ಬಂದಿ ಸೇರಿದಂತೆ ಐವರನ್ನು ಬಂಧಿಸಲಾಗಿದೆ. ಆರೋಪಿಗಳು ತಮ್ಮ ಬಟ್ಟೆ ಮತ್ತು ಒಳ ಉಡುಪುಗಳಲ್ಲಿ ಅಮೂಲ್ಯ ಲೋಹವನ್ನು ಬಚ್ಚಿಟ್ಟಿಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಕಾರ್ಯಾಚರಣೆಯ ವಿವರಗಳನ್ನು ನೀಡಿದ ಕಸ್ಟಮ್ಸ್ ಅಧಿಕಾರಿಯೊಬ್ಬರು, ಛತ್ರಪತಿ ಶಿವಾಜಿ ಮಹಾರಾಜ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಖಾಸಗಿ ಸಿಬ್ಬಂದಿಯನ್ನು ತಡೆದರು ಮತ್ತು 2.27 ಕೋಟಿ ರೂ.ಗಳ ಮೌಲ್ಯದ 2.8 ಕೆಜಿ 24 ಕ್ಯಾರೆಟ್ ಚಿನ್ನದ ಧೂಳನ್ನು ಹೊಂದಿರುವ ಆರು ಅಂಡಾಕಾರದ ಕ್ಯಾಪ್ಸ ಲ್ಗಳನ್ನು ಅವರ ಪ್ಯಾಂಟ್ ಜೇಬಿನಲ್ಲಿ ಅಡಗಿಸಿಟ್ಟಿರುವುದು ಕಂಡುಬಂದಿದೆ ಎಂದು ಹೇಳಿದರು.

ನಂತರ ಆ ವ್ಯಕ್ತಿಯನ್ನು ಕಸ್ಟಮ್ಸ್ ಕಾಯ್ದೆಯಡಿ ಬಂಧಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.ಎರಡನೇ ವಶಪಡಿಸಿಕೊಳ್ಳುವಿಕೆಯಲ್ಲಿ, ಅಂತರರಾಷ್ಟ್ರೀಯ ನಿರ್ಗಮನ ಪ್ರದೇಶದಲ್ಲಿ ಕೆಲಸ ಮಾಡುತ್ತಿದ್ದ ಇನ್ನೊಬ್ಬ ಖಾಸಗಿ ಸಿಬ್ಬಂದಿಯನ್ನು ತಡೆಹಿಡಿಯಲಾಯಿತು.ಕಸ್ಟಮ್ಸ್ ಅಧಿಕಾರಿಗಳು 2.36 ಕೋಟಿ ರೂ.ಗಳ ಮೌಲ್ಯದ ಮೇಣದ ರೂಪದಲ್ಲಿ 2.9 ಕೆಜಿ ಶುದ್ಧ ಚಿನ್ನದ ಧೂಳನ್ನು ಏಳು ಓವಲ್ ಶಾಗಳಲ್ಲಿ ಸಂಗ್ರಹಿಸಿರುವುದನ್ನು ಪತ್ತೆ ಮಾಡಲಾಯಿತು.

# ಬಿಬಿಎಂಪಿಯಲ್ಲಿ ಆಸ್ತಿ ತೆರಿಗೆ ಸಂಗ್ರಹಿಸಲು ಗಮನ ನೀಡಿ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಸಂಗ್ರಹಿಸುವ ಕುರಿತು ಹೆಚ್ಚು ಗಮನ ನೀಡಲು ಕಂದಾಯ ವಿಭಾಗದ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್ ರವರು ವಲಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆಯ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇಂದು ನಡೆದ ವರ್ಚುವಲ್ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, 2024–25ನೇ ಆರ್ಥಿಕ ಸಾಲು ಈ ತಿಂಗಳಾಂತ್ಯಕ್ಕೆ ಪೂರ್ಣಗೊಳ್ಳುತ್ತಿದ್ದು, ಪಾಲಿಕೆಗೆ ಬಾಕಿ ಬರಬೇಕಿರುವ ಆಸ್ತಿ ತೆರಿಗೆಯನ್ನು ಕೂಡಲೆ ಸಂಗ್ರಹಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆಯ ಆಯಾ ವಲಯ ವ್ಯಾಪ್ತಿಯಲ್ಲಿ ಹೆಚ್ಚು ಆಸ್ತಿತೆರಿಗೆ ಬಾಕಿ ಉಳಿಸಿಕೊಂಡಿರುವ ಸಂಸ್ಥೆಗಳು, ಉದ್ದಿಮೆಗಳಿಗೆ ಭೇಟಿ ನೀಡಿ ಬಾಕಿ ಆಸ್ತಿ ತೆರಿಗೆಯನ್ನು ವಸೂಲಿ ಮಾಡಬೇಕು. ತಿಂಗಳಾಂತ್ಯದೊಳಗಾಗಿ ಪಾಲಿಕೆ ಗುರಿ ಇಟ್ಟಿರುವ ಆಸ್ತಿ ತೆರಿಗೆಯನ್ನು ಸಂಗ್ರಹಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು.

4,604 ಕೋಟಿ ರೂ ಸಂಗ್ರಹ: ಪಾಲಿಕೆ ವ್ಯಾಪ್ತಿಯಲ್ಲಿ 2024–25ನೇ ಸಾಲಿನಲ್ಲಿ 5,210 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹಿಸುವ ಗುರಿ ಹೊಂದಲಾಗಿದೆ.

ಈ ಪೈಕಿ ಪ್ರಸಕ್ತ ಸಾಲಿನಲ್ಲಿ 4,604 ಕೋಟಿ ರೂ. ಶೇ. 88.36 ರಷ್ಟು ಆಸ್ತಿ ತೆರಿಗೆಯನ್ನು ಸಂಗ್ರಹಿಸಲಾಗಿದೆ.

2.25 ಲಕ್ಷ ಅಂತಿಮ ಇ–ಖಾತಾ ವಿತರಣೆ: ಬಿಬಿಎಂಪಿ ವ್ಯಾಪ್ತಿಯಲ್ಲಿ ನಾಗರಿಕರಿಗೆ ಇ–ಖಾತಾ ನೀಡುವ ಪ್ರಕ್ರಿಯೆಯನ್ನು ಸಕ್ರಿಯವಾಗಿ ನಡೆಸಲಾಗುತ್ತಿದೆ. ಅದರಂತೆ ಅಕ್ಟೋಬರ್ 1 ರಿಂದ ಇ–ಖಾತಾ ಪ್ರಕ್ರಿಯೆಯನ್ನು ಜಾರಿಗೊಳಿಸಲಾಗಿದ್ದು, ಇದುವರೆಗೆ 2.25 ಲಕ್ಷ ಅಂತಿಮ ಇ–ಖಾತಾಗಳನ್ನು ಪಡೆದುಕೊಂಡಿದ್ದಾರೆ.

ಇ–ಖಾತಾ ಸೇವೆ ನೀಡಲು ಉದ್ಯಮಿಗಳಿಗೆ ಅವಕಾಶ: ನಾಗರಿಕರಿಗೆ ಮತ್ತಷ್ಟು ತ್ವರಿತಗತಿಯಲ್ಲಿ ಇ–ಖಾತಾ ಸಿಗಬೇಕೆಂಬ ದೃಷ್ಟಿಯಲ್ಲಿ ಪಾಲಿಕೆಯು ವಿನೂತನ ಕ್ರಮವನ್ನು ತೆಗೆದುಕೊಂಡಿದೆ. ಅದೇನೆಂದರೆ ಪಾಲಿಕೆ ವ್ಯಾಪ್ತಿಯಲ್ಲಿ ಯುವ/ಸ್ಥಳೀಯ ಖಾಸಗಿ ಉದ್ಯಮಿಗಳು ಪಾಲಿಕೆಯ ವೆಬ್ ಸೈಟ್ ಮೂಲಕ ನೋಂದಣಿ ಮಾಡಿಕೊಳ್ಳಬೇಕು. ಅನಂತರ ನಾಗರಿಕರಿಗೆ ಇ–ಖಾತಾ ಸೇವೆಗಳನ್ನು ನೀಡಿ ಹಣ ಗಳಿಸುವ ಸುವರ್ಣಾವಕಾಶವನ್ನು ಕಲ್ಪಿಸಲಾಗಿದೆ.

**ಯುವ/ಸ್ಥಳೀಯ ಖಾಸಗಿ ಉದ್ಯಮಿಗಳು ಪಾಲಿಕೆಗೆ ಯಾವುದೇ ಶುಲ್ಕ ಪಾವತಿಸದೆ ನೋಂದಣಿ ಮಾಡಿಕೊಂಡು ಹಣ ಗಳಿಸಬಹುದಾಗಿದೆ. ಇ–ಆಸ್ತಿ ಸೇವೆಗಳು ನೀಡಬಹುದಾದ ವಿವರಗಳು ಈ ಕೆಳಕಂಡಂತಿವೆ.**

1. ಅಂತಿಮ ಇ–ಖಾತಾಗಾಗಿ ದತ್ತಾಂಶ ನಮೂದನೆ, ಸ್ವೀಕೃತಿ ಪ್ರತಿ (ಕಪ್ಪು–ಬಿಳುಪು) ಹಾಗೂ ಇ–ಆಸ್ತಿ ಸಲ್ಲಿಸಲು ಒಟ್ಟು ವಹಿವಾಟು ಶುಲ್ಕಕ್ಕಾಗಿ ಉದ್ಯಮಿಗೆ ಪ್ರತಿ ಇ–ಖಾತಾಗೆ 45 ರೂ. ಪಾವತಿಸಬೇಕು. ಪಾಲಿಕೆಗೆ ಯಾವುದೇ ಶುಲ್ಕ ಪಾವತಿಸುವಂತಿಲ್ಲ.

2. ಆಸ್ತಿ ದಾಖಲೆಗಳು/ಗುರುತಿನ ಚೀಟಿ ದಾಖಲೆಗಳನ್ನು ಸ್ಕ್ಯಾನಿಂಗ್ ಮಾಡಿ ಬಿಬಿಎಂಪಿ ತಂತ್ರಾಂಶದಲ್ಲಿ ಅಪ್ಲೋಡ್ ಮಾಡುವುದಕ್ಕೆ ಉದ್ಯಮಿಗೆ ಪ್ರತಿ ಪುಟಕ್ಕೆ 45 ರೂ. ಪಾವತಿಸಬೇಕು. ಪಾಲಿಕೆಗೆ ಯಾವುದೇ ಶುಲ್ಕ ಪಾವತಿಸುವಂತಿಲ್ಲ.

3. ಅಂತಿಮ ಇ–ಖಾತಾ ಮುದ್ರಣಕ್ಕಾಗಿ ಉದ್ಯಮಿಗೆ ಪ್ರತಿ ಇ–ಖಾತಾಗೆ 45 ರೂ. ಪಾವತಿಸಬೇಕು.

ಪಾಲಿಕೆಗೆ ಪ್ರತಿ ಇ–ಖಾತಾಗೆ ಆನ್ ಲೈನ್ ಮೂಲಕ 125 ರೂ. ಪಾವತಿಸಬೇಕು.

4. ಇ–ಖಾತಾ ತಿದ್ದುಪಡಿ, ಮ್ಯುಟೇಷನ್ ಅಥವಾ ಯಾವುದೇ ಇತರೆ ಅರ್ಜಿ ಸಲ್ಲಿಸುವುದಕ್ಕಾಗಿ ಉದ್ಯಮಿಗೆ ಪ್ರತಿ ಇ–ಖಾತಾಗೆ 45 ರೂ. ಪಾವತಿಸಬೇಕು.

ಪಾಲಿಕೆಗೆ ಕೇವಲ ಮ್ಯುಟೇಷನ್ ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿಸುವುದು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಇ–ಖಾತಾ ಪಡೆಯಲು, ಹೊಸ ಖಾತೆ ಪಡೆಯುವ, ಇ–ಖಾತಾದಲ್ಲಿ ತಿದ್ದುಪಡಿ ಮಾಡುವ ಕುರಿತ ವೀಡಿಯೋಗಳು ಯೂಟ್ಯೂಬ್ ಲಿಂಕ್ ನಲ್ಲಿ ( https://youtube.com/@revenuebmp?si=Y00iWmhTc9-W3_8C ) ಲಭ್ಯವಿದ್ದು, ನಾಗರೀಕರು ಸದರಿ ಲಿಂಕ್ ಗೆ ಭೇಟಿ ನೀಡಿ ಅಗತ್ಯ ಮಾಹಿತಿ ಪಡೆದುಕೊಳ್ಳಬಹುದಾಗಿದೆ.

ನೋಂದಣಿ ಮಾಡಿಕೊಳ್ಳುವ ವೆಬ್‌ಸೈಟ್ ಲಿಂಕ್: https://bbmp.karnataka.gov.in/lpe/

ನೋಂದಣಿ ಮಾಡಿಕೊಳ್ಳುವ ತರಬೇತಿಯ ವೀಡಿಯೋ ಲಿಂಕ್: https://tinyurl.com/4p53vvbt

ಹೆಚ್ಚಿನ ಮಾಹಿತಿಗಾಗಿ ಆಸ್ತಿ ತೆರಿಗೆ ಸಂಗ್ರಹಿಸಿರುವ ಅಂಕಿ–ಅಂಶಗಳ ಪ್ರತಿಯನ್ನು ಲಗತ್ತಿಸಲಾಗಿದೆ.

ಮೊದಲ ಪುಟದಿಂದ

## ಖಜಾನೆ ಖಾಲಿಯಾಗಿಲ್ಲ

ಬಸವನಗೌಡ ಪಾಟೀಲ್ ಯತ್ನಾಳ್ ಅವರು ಸದನಕ್ಕೆ ದೊಡ್ಡ ಸುಳ್ಳು ಹೇಳಿದ್ದಾರೆ. ಆರ್.ಎಸ್.ಎಸ್ ಬೈಠಕ್ ನಲ್ಲಿದ್ದಾರೋ, ಸದನದಲ್ಲಿದ್ದಾರೋ ಗೊತ್ತಿಲ್ಲ. ಕೃಷ್ಣ ಭಾಗ್ಯ ಜಲ ನಿಗಮಕ್ಕೆ ಕೇಂದ್ರ ಸರ್ಕಾರ 2 ಸಾವಿರ ಕೋಟಿ ಕೊಟ್ಟಿದೆ. ಕರ್ನಾಟಕ ನೀರಾವರಿ ನಿಗಮಕ್ಕೆ 3300 ಕೋಟಿ, ವಿಶ್ವೇಶ್ವರ ಜಲನಿಗಮ ಸೇರಿ ಕರ್ನಾಟಕ ನೀರಾವರಿಗೆ ಒಟ್ಟು 10 ಸಾವಿರ ಕೋಟಿ ರೂಪಾಯಿ ರಾಜ್ಯದ ನೀರಾವರಿ ನಿಗಮಕ್ಕೆ ಕೊಟ್ಟಿದೆ ಎಂದು ಹೇಳಿದ್ದಾರೆ. ಮಾಹಿತಿ ಕೊರತೆಯೋ ಉದ್ದೇಶಪೂರ್ವಕ, ಟೀಕೆಗಾಗಿ ಹೇಳಿದ್ದಾರೋ ಗೊತ್ತಿಲ್ಲ. ವಾಸ್ತವ ಏನೆಂದರೆ 24–1–2025 ರಂದು ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೆ ಸ್ಕೀಂ ಆಫ್ ಸ್ಪೆಶಲ್ ಅಸಿಸ್ಟೆನ್ಸ್ ಕೊಟ್ಟಿದ್ದು, 50 ವರ್ಷಗಳ ಕಾಲ ಬಡ್ಡಿ ರಹಿತವಾಗಿ ವಿಶೇಷ ನೆರವು ನೀಡಿದೆ. ಮುಳವಾಡ ಏತ ನೀರಾವರಿಗೆ 200 ಕೋಟಿ, ಮಹಾಲಕ್ಷ್ಮಿ ಮಲಪ್ರಭಾ ಯೋಜನೆಗೆ 200, ಭದ್ರಾ ಮೇಲ್ದಂಡೆ, 300 ಒಟ್ಟು 1030 ಕೋಟಿ ಕೊಟ್ಟಿದ್ದಾರೆ. ಮಾಹಿತಿ ಕೊರತೆಯಿದ್ದರೆ ಸರಿಯಾಗಿ ಪಡೆದು ಮಾತನಾಡಿ. ಇದು ಸಂಪೂರ್ಣ ಸುಳ್ಳು ಮಾಹಿತಿ ಎಂದು ಮುಖ್ಯಮಂತ್ರಿಗಳು ಹೇಳಿದರು.

## ನಾಲ್ವರ ಬಂಧನ

ಹೈದರಾಬಾದ್‌ನ ಕಿಂಗ್‌ಪಿನ್‌ವೊಬ್ಬರ ಅಣತೆಯಂತೆ ಆರೋಪಿಗಳು ರಾಯಚೂರಿನಲ್ಲಿ ಖೋಟಾ ನೋಟು ತಯಾರಿಕೆ ಮತ್ತು ಮಾರಾಟ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

## ಚೀಟಿ ಕುರಿತ ಚರ್ಚೆಗೆ ಸವಾಲು

ಚರ್ಚೆಯನ್ನು ಕೋರಿದ್ದಾರೆ.

ನಾಲ್ಕು ದಿನಗಳ ವಿರಾಮದ ನಂತರ ಸಂಸತ್ತು ಮತ್ತೆ ಕೆಲಸಕ್ಕೆ ಮರಳುತ್ತದೆ. ರಚನಾತ್ಮಕ ವಿರೋಧ ಪಕ್ಷವು ಪ್ರಜಾಪ್ರಭುತ್ವದ ತಿರುಳಿನಲ್ಲಿರುವ ವಿಷಯವನ್ನು ಚರ್ಚಿಸಲು ಬಯಸುತ್ತದೆ. ಸರ್ಕಾರ ಸಿದ್ಧವಾಗಿದೆಯೇ ಎಂದು ಅವರು ಕೇಳಿದ್ದಾರೆ.ಹಲವಾರು ವಿರೋಧ ಪಕ್ಷಗಳು ಸಂಸತ್ತಿನಲ್ಲಿ ಎಪಿಕ್ ಸಂಖ್ಯೆ ನಕಲು ವಿಷಯದ ಬಗ್ಗೆ ಚರ್ಚೆಗೆ ಒತ್ತಾಯಿಸುತ್ತಿದ್ದರೆ, ದಕ್ಷಿಣದ ಪಕ್ಷಗಳು ಡಿಲಿಮಿಟೇಶನ್ ವಿಷಯದ ಬಗ್ಗೆ ಚರ್ಚೆಯನ್ನು ಕೋರಿವೆ. ಮೂಲವೊಂದರ ಪ್ರಕಾರ, ಚರ್ಚೆಯನ್ನು ಯಾವ ನಿಯಮದ ಅಡಿಯಲ್ಲಿ ನಡೆಸಬೇಕು ಎಂಬುದಕ್ಕೆ ತಾವು ಹೊಂದಿಕೊಳ್ಳುತ್ತೇವೆ ಎಂದು ವಿರೋಧ ಪಕ್ಷಗಳು ತಿಳಿಸಿವೆ.

## ಶಸ್ತ್ರಾಸ್ತ್ರ: ವ್ಯಕ್ತಿ ಬಂಧನ

ನಗರವನ್ನು ತಲುಪಲು ಹೇಟ್ ಬಜಾರೆ ಎಕ್ಸ್ ಪ್ರೆಸ್‌ನಲ್ಲಿ ಬಂದಿದ್ದ, ಆತನಿಂದ ಕನಿಷ್ಠ ಆರು ಸುಧಾರಿತ ಬಂದೂಕುಗಳು ಮತ್ತು ಒಂದು ಗುಂಡು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಸೀಲ್ದಾ ಮಾರ್ಗದ ಮೂಲಕ ಶಸ್ತ್ರಾಸ್ತ್ರ ಕಳ್ಳಸಾಗಣೆ ಸಾಧ್ಯತೆಯ ಬಗ್ಗೆ ನಮಗೆ ಮಾಹಿತಿ ಇತ್ತು. ನಮ್ಮ ಅಧಿಕಾರಿಗಳು ಜಾಗರೂಕರಾಗಿದ್ದರು. ಜಾಗರೂಕರಾಗಿದ್ದರು ಮತ್ತು ಸರಿಯಾದ ಶೋಧದ ನಂತರ, ವಶಪಡಿಸಿಕೊಂಡ ನಂತರ ಈ ವ್ಯಕ್ತಿಯನ್ನು ಬಂಧಿಸಲಾಯಿತು. ನಾವು ಅವನನ್ನು ಪ್ರಶ್ನಿಸುತ್ತಿದ್ದೇವೆ ಎಂದು ಅಧಿಕಾರಿ ಹೇಳಿದರು.

## ಗುಂಡಿನ ಚಕಮಕಿ

ನಡೆಸಿದ್ದಾರೆ. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆಯೂ ದಾಳಿ ಮಾಡಿದೆ. ಎರಡು–ಮೂರು ಮಂದಿ ಉಗ್ರರು ಅಡಗಿರುವ ಮಾಹಿತಿ ಇದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಭಾರತೀಯ ಸೇನೆ, ಜಮ್ಮು ಮತ್ತು ಕಾಶ್ಮೀರ ಪೊಲೀಸರು ಮತ್ತು ವಿಶೇಷ ಕಾರ್ಯಾಚರಣೆ ಗುಂಪು (ಎಸ್‌ಒಜಿ) ಜಂಟಿಯಾಗಿ ಶೋಧ ನಡೆಸುತ್ತಿದೆ.ಗುಂಡಿನ ದಾಳಿ ನಡೆಸುತ್ತಿರುವ ಪ್ರದೇಶವನ್ನು ಸಂಪೂರ್ಣವಾಗಿ ಅಧಿಕಾರಿಗಳು ಮುಚ್ಚಿದ್ದು, ಯಶಸ್ವಿ ಕಾರ್ಯಾಚರಣೆಗಾಗಿ ಮತ್ತಷ್ಟು ಭದ್ರತಾ ಪಡೆಗಳನ್ನು ನಿಯೋಜಿಸಲಾಗಿದೆ. ಗುಂಡಿನ ಚಕಮಕಿ ಇನ್ನೂ ಮುಂದುವರೆದಿದೆ. ಪರಿಸ್ಥಿತಿಯ ಮೇಲೆ ವಿಶೇಷ ನಿಗಾವಹಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

## ದೆಹಲಿಯಲ್ಲಿ ಹೊಸ ಕ್ರಮ

ಮಾ. 8ರ ಮಹಿಳಾ ದಿನದಂದು ನಗರ ಪೊಲೀಸ್ ಆಯುಕ್ತ ಸಂಜಯ್ ಅರೋರಾ ಅವರು ಇಂಥದ್ದೊಂದು ಕ್ರಮವನ್ನು ಜಾರಿಗೊಳಿಸಿದ್ದಾರೆ. ಆಯುಕ್ತರ ಆದೇಶದ ಪ್ರಕಾರ, ತಂಡಗಳಲ್ಲಿ ತರಬೇತಿ ಹೊಂದಿದ ಸದಸ್ಯರು ಇದ್ದು, ಅಪರಾಧಗಳನ್ನು ತಡೆಗಟ್ಟುವುದು ಹಾಗೂ ನೈಜ ಸಮಯದಲ್ಲಿ ಅಂತಹ ಪರಿಸ್ಥಿತಿಗಳಿಗೆ ತಕ್ಷಣವೇ ಪ್ರತಿಕ್ರಿಯಿಸಲಿದ್ದಾರೆ.

ದೆಹಲಿಯ ಪ್ರತಿ ಜಿಲ್ಲೆಯಲ್ಲೂ ಕನಿಷ್ಠ ಎರಡು ಈವ್ ಟೀಸಿಂಗ್ ವಿರೋಧಿ ತಂಡ ನೇಮಿಸಲಾಗುವುದು. ಇವರನ್ನು ಜಿಲ್ಲಾ ಮಹಿಳಾ ಅಪರಾಧ ವಿಭಾಗದ ಸಹಾಯಕ ಪೊಲೀಸ್ ಆಯುಕ್ತರು (ಎಸಿಪಿ) ಮೇಲ್ವಿಚಾರಣೆ ಮಾಡಲಿದ್ದಾರೆ.

ಪ್ರತಿ ತಂಡದಲ್ಲಿ ಒಬ್ಬ ಇನ್ಸ್‌ಪೆಕ್ಟರ್, ಒಬ್ಬ ಸಬ್ ಇನ್ಸ್‌ಪೆಕ್ಟರ್, ಸಹಾಯಕ ಸಬ್ ಇನ್ಸ್‌ಪೆಕ್ಟರ್, ಹೆಡ್ ಕಾನ್ಸ್‌ಟೇಬಲ್ ಮತ್ತು ಕಾನ್ಸ್‌ಟೇಬಲ್ ಶ್ರೇಣಿಯ ನಾಲ್ವರು ಮಹಿಳಾ ಮತ್ತು ಐವರು ಪುರುಷ ಅಧಿಕಾರಿಗಳು ಇರುತ್ತಾರೆ. ಹೆಚ್ಚುವರಿಯಾಗಿ ವಿಶೇಷ ಸಿಬ್ಬಂದಿ ಅಥವಾ ಎಎಟಿಎಸ್ ಸಹಾಯವನ್ನೂ ಒದಗಿಸಲಾಗುತ್ತದೆ.ಮಹಿಳೆಯರ ಮೇಲಿನ ಅಪರಾಧಗಳಿಗೆ 'ಹಾಟ್‌ಸ್ಪಾಟ್'ಗಳೆಂದು ಗುರುತಿಸಲಾದ ಪ್ರದೇಶದಲ್ಲಿ ಮೊದಲು ಈ ತಂಡ ಗಮನಹರಿಸುತ್ತದೆ. ಇಂತಹ ಸ್ಥಳಗಳ ಪಟ್ಟಿಯನ್ನು ಸಂಗ್ರಹಿಸುವ ಡಿಸಿಪಿ, ಕನಿಷ್ಠ ಎರಡು ಸೂಕ್ಷ್ಮ ಪ್ರದೇಶದಲ್ಲಿ ತಮ್ಮ ಸಿಬ್ಬಂದಿ ಪ್ರತಿನಿತ್ಯ ಗಸ್ತು ತಿರುಗಲು ಸೂಚಿಸುತ್ತಾರೆ.ಗಸ್ತು ನಡೆಸುವ ತಂಡ ಸಾಮಾನ್ಯ ಉಡುಪಿನಲ್ಲಿ ಕಾರ್ಯ ನಿರ್ವಹಿಸುತ್ತದೆ. ಸಾರ್ವಜನಿಕ ಸಾರಿಗೆ ಹಾಗೂ ದೆಹಲಿ ಸಾರಿಗೆ ನಿಗಮದ ಚಾಲಕರು ಮತ್ತು ಪ್ರಯಾಣಿಕರೊಂದಿಗೆ ಸಮನ್ವಯ ಸಾಧಿಸಿ, ಕಿರುಕುಳದಂತಹ ಘಟನೆಗಳನ್ನು ವರದಿ ಮಾಡುತ್ತದೆ. ಸಂತ್ರಸ್ತರು ಯಾವುದೇ ಮುಜುಗರಕ್ಕೆ ಒಳಗಾಗದಂತೆ ಇವರು ನೋಡಿಕೊಳ್ಳಲಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಈ ಹೊಸ ಕ್ರಮದ ಮೂಲಕ ದೆಹಲಿ ಪೊಲೀಸರು ರಾಜಧಾನಿಯಲ್ಲಿ ಮಹಿಳೆಯರಿಗೆ ಸುರಕ್ಷಿತ ವಾತಾವರಣ ಸೃಷ್ಟಿಸುವ ಗುರಿ ಹೊಂದಿದ್ದಾರೆ.

## ಪ್ರತಿಭಟನೆ ಅನಿವಾರ್ಯ

ಏರಿಸಿದ್ದಾರೆ. ಮೆಟ್ರೋ ಅಧಿಕಾರಿಗಳ ಬಂಡತನ ಎಲ್ಲೆ ಮೀರಿದೆ. ಕನ್ನಡಿಗರ ಅಸ್ಮಿತೆಯ ವಿಷಯದಲ್ಲಿ ಸರ್ಕಾರವು ಮಧ್ಯಪ್ರವೇಶ ಮಾಡಲೇಬೇಕಾಗಿದೆ. ಇಂತಹ ಕನ್ನಡ ವಿರೋಧಿ ನೇಮಕಾತಿ ಅಧಿಸೂಚನೆಯನ್ನು ಕೂಡಲೇ ಹಿಂಪಡೆದುಕೊಳ್ಳಬೇಕು. ಇದಕ್ಕಾಗಿ 15 ದಿವಸಗಳ ಗಡುವನ್ನು ಸಹ ನೀಡುತ್ತಿದ್ದೇವೆ. ಇಲ್ಲದಿದ್ದಲ್ಲಿ ಮೆಟ್ರೋ ಸಂಸ್ಥೆಯ ವಿರುದ್ಧ ತೀವ್ರ ಪ್ರತಿಭಟನೆಗೆ ಇಳಿಯಬೇಕಾಗುತ್ತದೆ ಎಂದು ಮುಖ್ಯಮಂತ್ರಿ ಚಂದ್ರು ಎಚ್ಚರಿಸಿದ್ದಾರೆ.

## ಕೇಂದ್ರ ಅನುಮೋದನೆ

ಆಗಿದೆ. ಆಗಸ್ಟ್ 23,2023 ರಂದು ಚಂದ್ರನ ದಕ್ಷಿಣ ಧ್ರುವದಲ್ಲಿ ಲ್ಯಾಂಡರ್ ವಿಕ್ರಮ್ ಯಶಸ್ವಿಯಾಗಿ ಸಾಫ್ಟ್–ಲ್ಯಾಂಡಿಂಗ್ ನೊಂದಿಗೆ ಚಂದ್ರಯಾನ–3 ಮಿಷನ್ ಅನ್ನು ಇಸ್ರೋ ಯಶಸ್ವಿಯಾಗಿ ಪ್ರಾರಂಭಿಸಿತು. ಈಗ ಮತ್ತೊಂದು ಸಾಧನೆಗೆ ಮುಂದಾಗಿದ್ದೇವೆ ಎಂದರು.

## ಬಗ್ಗೆ ಎಚ್ಚರಿಕೆ ವಹಿಸಿ

ಬಹಳ ನೋವುಂಟಾಗಿದೆ. ಮೃತ ವಿದ್ಯಾರ್ಥಿಯ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಮತ್ತೆ ಇಂಥ ಘಟನೆಗಳು ಮರುಕಳಿಸದಿರಲಿ ಎಂದು ಹೇಳಿದ್ದಾರೆ.

ಘಟನೆ ಬಗ್ಗೆ ಸಂಬಂಧಿತ ಅಧಿಕಾರಿಗಳಿಂದ ಮಾಹಿತಿ ಪಡೆದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಚಿಕಿತ್ಸೆ ಕೊಡಿಸಬೇಕೆಂದು ಸೂಚಿಸಿರುವುದಾಗಿ ಅವರು ತಿಳಿಸಿದ್ದಾರೆ.

## ನಡೆಯುತ್ತಿದೆಯಾ ಅಕ್ರಮ?

ನಿಗದಿ ಮಾಡಿಕೊಂಡಿದ್ದಾರೆ ಎಂದು ಆಪಾದಿಸಿದ್ದಾರೆ.ಈ ಬಗ್ಗೆ ಪರಿಶೀಲನೆಯಲ್ಲಿರುವುದಾಗಿ ಹಿಂದೆ ಜಲಸಂಪನ್ಮೂಲ ಸಚಿವರಾಗಿದ್ದವರೂ ಸಹ ಹೇಳಿದ್ದರಾದರೂ ಯಾವುದೂ ಇದೂವರೆಗೆ ಕಾರ್ಯರೂಪಕ್ಕೆ ಬಂದಿಲ್ಲ.ಯಾವುದೇ ತನಿಖೆಯಾಗಿಲ್ಲ.ಅಲ್ಲದೇ ಲೋಕಾಯುಕ್ತಕ್ಕೂ ಆರ್‌ಟಿಐ ಕಾರ್ಯಕರ್ತರು ಹಾಕಿದ್ದರೂ ಪ್ರಯೋಜನವಾಗಿಲ್ಲ ಎಂಬ ಅಳಲು ನೊಂದವರದ್ದಾಗಿದೆ. Stenographer ಅಂದರೆ ಕನ್ನಡ ಮತ್ತು ಇಂಗ್ಲಿಷ್ ಭಾಷೆಯಲ್ಲಿ ಜೂನಿಯರ್ ಸೀನಿಯರ್ ಎರಡರಲ್ಲೂ ಉತ್ತೀಣರಾಗಿರಬೇಕು.. ಆದರೆ ಕರ್ನಾಟಕ ನೀರಾವರಿ ನಿಗಮದಲ್ಲಿ ಪಿಯುಸಿ ಮುಗಿಸಿ ಮೊದಲನೇ ವರ್ಷದ ಇಂಗ್ಲಿಷ್ ಸ್ಟೆನೋ ಮಾಡಿರುವವರು ಮತ್ತು ಔರಿಜಟಿ ಗಟಿುತಜಢುಣಥಿ ಮುಕ್ತ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾಭ್ಯಾಸ ಮಾಡಿರುವವರು ಸಹ ಜಿಪಿಎ ಆಗಿರುತ್ತಾರೆ..

ವಿಪರ್ಯಾಸ ಎಂದರೆ ಮುಕ್ತ ವಿಶ್ವವಿದ್ಯಾಲಯಗಳಲ್ಲಿ ಪದವಿ ಪಡೆದವರನ್ನು ನೌಕರಿಗಾಗಲಿ ಅಥವಾ ಮುಂಬಡ್ತಿಗಾಗಲಿ ಪರಿಗಣನೆ ಮಾಡಬೇಕೇ ಬೇಡವೇ ಎಂಬ ಬಗ್ಗೆ ಯುಜಿಸಿ ಇವರು ಸುಪ್ರೀಂಕೋರ್ಟ್ ನಲ್ಲಿ ದಾವೆ ಸಲ್ಲಿಸಿರುತ್ತಾರಾದರೂ ಇಲ್ಲಿಯವರೆಗೂ ಅಂತಿಮ ಆದೇಶ ಬಂದಿರುವುದಿಲ್ಲ.

ಇಲ್ಲಿಯವರೆಗೆ ನಾನಾ ರೀತಿಯ ಕಾರಣ ಮತ್ತು ಸುಳ್ಳು ಹೇಳಿ ಬಡ್ತಿ ಪಡೆದವರನ್ನು ಕೆಲಸದಿಂದ ವಜಾಗೊಳಿಸಿ, ಇಲ್ಲಿಯವರೆಗೆ ಪಡೆದ ಸವಲತ್ತುಗಳನ್ನು ಕಿತ್ತುಹಾಕಿ ಅವರುಗಳು ಅಕ್ರಮವಾಗಿ ಪಡೆದ ಎಲ್ಲವನ್ನು ಸರ್ಕಾರ ಹಿಂಪಡೆಯಬೇಕು.

ಅನ್ಯಾಯಕ್ಕೊಳಗಾದ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ನಿಯಮಾನುಸಾರ ವೇತನ ನಿಗದಿ ಮಾಡಿ ಮುಂಬಡ್ತಿ ನೀಡಬೇಕೆಂದು ನೊಂದ ಸಿಬ್ಬಂದಿ ನೌಕರರ ಮತ್ತು ಅಧಿಕಾರಿಗಳ ಆಗ್ರಹವಾಗಿದೆ.

2007ರಲ್ಲಿ one time absorption ಮಾಡುವಾಗ ವಿದ್ಯಾರ್ಹತೆ, ಅನುಭವ, ವಯಸ್ಸು ಇತರೆ ಪ್ರಮಾಣ ಪತ್ರಗಳನ್ನು ಪರಿಶೀಲನೆ ಮಾಡಿರುವುದಿಲ್ಲ ನಂತರ ಉಕಂ.. ಜಿಪಿಎ ಹುದ್ದೆಯನ್ನು ಸರ್ಕಾರದ ಸಚಿವಾಲಯದಲ್ಲಿ ಹಿರಿಯ ಐಎಎಸ್ ಅಧಿಕಾರಿಗಳ ಆಪ್ತಶಾಖೆಯಲ್ಲಿ ಶೀಘ್ರ ಲಿಪಿ ಕೆಲಸ ಮಾಡುವವರಿಗೆ ಮಾತ್ರ ನೀಡಲಾಗುತ್ತಿತ್ತು ಆದರೆ 150 ನಿಗಮ ಮಂಡಳಿಗಳಲ್ಲಿ ಇಲ್ಲದೆ ಇರುವ ಜಿಪಿಎ ಹುದ್ದೆಯು ಕರ್ನಾಟಕ ನೀರಾವರಿ ನಿಗಮಕ್ಕೆ ಮಾತ್ರ ಹೇಗೆ ಬಂತು ಇದು ತನಿಖೆಯಾಗಬೇಕಾಗಿದೆ.. ಈ ಅಕ್ರಮಗಳ ಹಿಂದೆ ಇರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳಬೇಕಾಗಿದೆ

# 2ಎ ಮೀಸಲಾತಿ ದೊರಕಿಸಿಕೊಡಲು ಅಗತ್ಯ ಕ್ರಮ: ಪ್ರದೀಪ್ ಈಶ್ವರ್

**ಚಿಕ್ಕಬಳ್ಳಾಪುರ:** ಉದ್ಯೋಗದಲ್ಲಿಯೂ ಸಮುದಾಯಕ್ಕೆ 2ಎ ಮೀಸಲಾತಿ ದೊರಕಿಸಿ ಕೊಡುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಕ್ರಮವಹಿಸುವಂತಾಗಲು ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದರು.



ಅವರು ನಗರದ ಶ್ರೀ ಯೋಗಿ ನಾರೇಯಣ ದೇವಾಲಯದ ಆವರಣದಲ್ಲಿ ಜಿಲ್ಲಾಡಳಿತ ಹಾಗೂ ಸಮುದಾಯದ ವತಿಯಿಂದ ಆಯೋಜಿಸಿದ್ದ "ಶ್ರೀ ಯೋಗಿ ನಾರೇಯಣ ಯತೀಂದ್ರ ಜಯಂತಿ"ಯ (ಕೈವಾರ ತಾತಯ್ಯನವರ) ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಲಿಜ ಸಮುದಾಯಕ್ಕೆ ಜನಸಂಖ್ಯೆ ಆಧಾರದಲ್ಲಿ 2ಎ ಮೀಸಲಾತಿ ನೀಡುವುದು ನ್ಯಾಯವಾಗಿದೆ. ಈ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಪಟ್ಟು ಮೀಸಲಾತಿಯನ್ನು ದೊರಕಿಸಿಕೊಡಲು ಎಲ್ಲಾ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತೇನೆ. ಈ ಸಂಬಂಧ ಈಗಾಗಲೇ ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೂ ಸಹ ತಂದಿದ್ದೇನೆ. ಮೀಸಲಾತಿ ಸಿಗುವ ಎಲ್ಲಾ ಸಾಧ್ಯತೆಗಳಿವೆ ಎಂದು ಭರವಸೆ ನೀಡಿದರು.

ಸಮುದಾಯದ ಅಭಿವೃದ್ಧಿಗಾಗಿ ಜಿಲ್ಲಾ ಕೇಂದ್ರದಲ್ಲಿ ಸಮುದಾಯ ಭವನ ನಿರ್ಮಿಸಲು ಸರ್ಕಾರ ಜಾಗ ನೀಡಿದೆ, ಸಮುದಾಯದವರ ಸಹಕಾರ ಮತ್ತು ಸರ್ಕಾರದ ಅನುದಾನ ಪಡೆದು ಸಮುದಾಯ ಭವನವನ್ನು ನಿರ್ಮಿಸಲಾಗುವುದು. ರಾಜಕೀಯವಾಗಿ ಮತ್ತು ಶೈಕ್ಷಣಿಕವಾಗಿ ಸಮುದಾಯದವರು ಮುಂದೆ ಬರಲು ಪ್ರಯತ್ನಿಸಬೇಕು. ಸಮಾಜಕ್ಕೆ ಸಮುದಾಯದಿಂದ ಒಳ್ಳೆಯ ಕೊಡುಗೆ ನೀಡುವಂತಹ ಆಸ್ತಿಯಾಗಿ ಎಲ್ಲರೂ ಬೆಳೆಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ವಕೀಲರಾದ ಎಸ್‌ಎನ್ ಅಶ್ವಥ್ ನಾರಾಯಣ ಅವರು ಕೈವಾರ ತಾತಯ್ಯನವರ ಜೀವನ ಚರಿತ್ರೆ ಹಾಗೂ ಅವರ ವಿಚಾರಧಾರೆಗಳ ಕುರಿತು ತಿಳಿಸಿಕೊಟ್ಟರು.

ಕಾರ್ಯಕ್ರಮಕ್ಕೂ ಮುನ್ನ ನಗರದಲ್ಲಿ ಕೈವಾರ ತಾತಯ್ಯನವರ ಹೂವಿನ ಪಲ್ಲಕ್ಕಿಗಳೊಂದಿಗೆ ಅದ್ದೂರಿ ಮೆರವಣಿಗೆಯನ್ನು ನಡೆಸಲಾಯಿತು. ಮೆರವಣಿಗೆಯು ವಾಪಸಂದ್ರದ ಶ್ರೀ ರಂಗನಾಥ ಸ್ವಾಮಿ ದೇವಾಲಯದಿಂದ ಚಾಲನೆಗೊಂಡು ಬಿಬಿ ರಸ್ತೆಯ ಮೂಲಕ ಶ್ರೀ ಯೋಗಿ ನಾರೇಯಣ ಯತೀಂದ್ರರ ದೇವಾಲಯದವರೆಗೆ ಮೆರವಣಿಗೆ ಸಾಗಿತು. ಜಾನಪದ ಕಲಾತಂಡಗಳು ಮೆರವಣಿಗೆಗೆ ವಿಶೇಷ ಮೆರುಗು ನೀಡಿದವು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ನಗರಸಭೆ ಉಪಾಧ್ಯಕ್ಷ ನಾಗರಾಜ್.ಜೆ, ಜಿಲ್ಲಾ ಪಂಚಾಯತ್ ಕಾರ್ಯದರ್ಶಿ ಅತಿಕ್ ಪಾಷಾ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಮಂಜುನಾಥ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ರವಿಕುಮಾರ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ, ನಗರ ಸಭೆ ಸದಸ್ಯರಾದ ನರಸಿಂಹಮೂರ್ತಿ, ಅಂಬರೀಷ್, ಗೋಪಿ,ಅಣ್ಣಮ್ಮ, ಸಮುದಾಯದ ಮುಖಂಡರಾದ ಪಿ.ಮಂಜುನಾಥ್, ವೆಂಕಟನಾರಾಯಣಪ್ಪ,ಗಡ್ಡಂ ನಾಗರಾಜು, ಡ್ಯಾನ್ಸ್ ಶ್ರೀನಿವಾಸ್, ಮುಸ್ಟೂರು ಶಶಿ, ನಾಗಭೂಷಣ್, ಜಿ.ವಿ. ಮಂಜುನಾಥ್, ಮೊಬೈಲ್ ಬಾಬು,ಅನು ಆನಂದ್,ಲೋಕೇಶ್, ಎಸ್ ಎನ್ ಅಶ್ವಥ್ ನಾರಾಯಣ್, ಕೂಪೇಂದ್ರ, ಬಿಜೆಪಿ ಮುರಳಿ, ಶಂಕರ, ಸಮುದಾಯದ ಸದಸ್ಯರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ

ಚಿಕ್ಕಬಳ್ಳಾಪುರ: ರಾಜ್ಯದಲ್ಲಿಯೇ ಪ್ರತಿಷ್ಠಿತ ಭೂ ಅಭಿವೃದ್ಧಿ ಎಂಬ ಖ್ಯಾತಿಗೆ ಒಳಗಾಗಿರುವ ಚಿಕ್ಕಬಳ್ಳಾಪುರ ಪಿಎಲ್‌ಡಿ ಬ್ಯಾಂಕಿನ ಮುಂದಿನ ಅವಧಿಗೆ ನೂತನ ಅಧ್ಯಕ್ಷರಾಗಿ ಗಂಗರೇಕಾಲುವೆ ಪ್ರಸಾದ್ ಪುನರಾಯ್ಕೆಯಾಗಿದ್ದರೆ ಪೆರೇಸಂದ್ರದ ಎಸ್ಸಿ ಮೀಸಲು ಕ್ಷೇತ್ರದ ಪಿ.ಎನ್.ರಾಮಪ್ಪ ಅವರು ಉಪಾಧ್ಯಕ್ಷರಾಗಿ ಅವಿರೋದ ಆಯ್ಕೆಯಾಗಿ ಪದಗ್ರಹಣ ಮಾಡಿದರು.



ಇತ್ತೀಚೆಗೆ ನಡೆದಿದ್ದ ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಹನ್ನೊಂದು ಸ್ಥಾನಗಳನ್ನು ತನ್ನದಾಗಿಸಿಕೊಂಡಿದ್ದ ಬಿಜೆಪಿ ಜೆಡಿಎಸ್ ಮೈತ್ರಿಕೂಟವು ಅಧ್ಯಕ್ಷ ಉಪಾಧ್ಯಕ್ಷ ಸ್ಥಾನಗಳನ್ನು ಅವಿರೋದವಾಗಿ ಆಯ್ಕೆ ಮಾಡಿಕೊಳ್ಳುವಲ್ಲಿಯೂ ಯಶಸ್ವಿಯಾಗಿವೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದರೂ ಇಲ್ಲಿ ಮಾತ್ರ ವಿರೋದ ಪಕ್ಷದಲ್ಲಿದೆ.ಹೀಗಾಗಿ ಸರಕಾರದ ಬೆಂಬಲದಲ್ಲಿ ತಡೆಯಾಜ್ಞೆ ತರುಬಹುದೆಂಬ ಭೀತಿಯಲ್ಲಿದ್ದ ಎನ್‌ಡಿಎ ಬೆಂಬಲಿತ ನಿರ್ದೇಶಕರಿಗೆ ಯಾವ ತಡೆಯೂ ಇಲ್ಲದೆ ಸುಸೂತ್ರವಾಗಿ ಚುನಾವಣೆ ನಡೆದು ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಗಳೆರಡೂ ಅವಿರೋಧವಾಗಿ ಆಯ್ಕೆಯಾಗುವಂತೆ ಆಯಿತು. ಎನ್‌ಡಿಎ ಮೈತ್ರಿಕೂಟದಲ್ಲಿ ಬಿಜೆಪಿಯ 10 ಮಂದಿ ಜೆಡಿಎಸ್‌ನ 1ಸದಸ್ಯರಿದ್ದು ಒಟ್ಟು 12 ಸದಸ್ಯಬಲದ ಪಿಎಲ್‌ಡಿ ಬ್ಯಾಂಕಿನಲ್ಲಿ ಸಂಸದ ಡಾ.ಕೆ,ಸುಧಾಕರ್ ಬೆಂಬಲಿತರು ಅಧಿಕಾರಕ್ಕೇರಿದ್ದಾರೆ. ಬಿಜೆಪಿ ಪಕ್ಷದ ಬೆಂಬಲಿತ ಸದಸ್ಯರೇ ಅಧ್ಯಕ್ಷ ಉಪಾಧ್ಯಕ್ಷರಾಗಿದ್ದಾರೆ.

ಅದರಂತೆ ಅಧ್ಯಕ್ಷರಾಗಿ ಗಂಗರೇಕಾಲುವೆ ಪ್ರಸಾದ್ 2ನೇ ಬಾರಿಗೆ ಪುನರಾಯ್ಕೆಯಾಗಿದ್ದರೆ ಉಪಾಧ್ಯಕ್ಷ ಸ್ಥಾನಕ್ಕೆ ಪೆರೇಸಂದ್ರ ಎಸ್ಸಿ ಮೀಸಲು ಕ್ಷೇತ್ರದ ರಾಮಪ್ಪ ಮೊದಲ ಬಾರಿಗೆ ಅವಿರೋದವಾಗಿ ಆಯ್ಕೆ ಮಾಡಲಾಯಿತು.

ಈ ವೇಳೆ ಮಾತನಾಡಿದ ನೂತನ ಅಧ್ಯಕ್ಷ ಪ್ರಸಾದ್ ಕಳೆದ ಬಾರಿ ಬ್ಯಾಂಕ್ ಗಳಿಸಿದ್ದ ಲಾಭದ ಹಣವನ್ನು ಷೇರುದಾರರಿಗರ ಬೋನಸ್ ರೂಪದಲ್ಲಿ ಹಂಚಿಕೆ ಮಾಡಿ ರಾಜ್ಯಕ್ಕೆ ಮಾದರಿಯಾಗಿತ್ತು.ನಮಗೂ ಹಿಂದೆ ಇದ್ದ ಅಧ್ಯಕ್ಷರು ಹೈಟೆಕ್ ಕಟ್ಟಡ ನಿರ್ಮಾಣಕ್ಕೆ ಶ್ರಮವಹಿಸಿದ್ದರು. ಕಾಳೆಗೌಡರು ಸಹ ಅಭಿವೃದ್ಧಿಗೆ ಶ್ರಮವಹಿಸಿದ್ದಾರೆ. ನನಗೆ ಕೊನೆ ಹಂತದಲ್ಲಿ ಅಧಿಕಾರ ಸಿಕ್ಕಿತ್ತು.ಇರುವಷ್ಟು ಕಾಲದಲ್ಲಿಯೇ ಉತ್ತಮವಾಗಿ ಕೆಲಸ ಮಾಡಿದ್ದೇನೆ.ಎರಡನೇ ಅವಧಿಗೆ ಕೂಡ ನನ್ನನ್ನೇ ಆರಿಸುವ ಮೂಲಕ ಸಂಸದ ಸುಧಾಕರ್ ಆಶೀರ್ವಾದ ಮಾಡಿದ್ದಾರೆ.ಈ ಅವಧಿಯಲ್ಲಿ ಎಲ್ಲಾ ಸದಸ್ಯರ ಬೆಂಬಲದಿಂದ ಉತ್ತಮವಾಗಿ ಕೆಲಸ ಮಾಡುಕೊಂಡು ಹೋಗಲಾಗುವುದು ಎಂದರು.

ಕೆ.ವಿ.ನಾಗರಾಜ್ ಮಾತನಾಡಿ ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರ ಚುನಾವಣೆ ವೇಳೆ ಕಾಂಗ್ರೆಸ್ ಏನೇನೋ ಮಾಡಿ ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಲು ಪ್ರಯತ್ನಿಸಿದರು. ಆದರೆ ಒಂದೇ ಒಂದು ಸ್ಥಾನಕ್ಕೆ ತೃಪ್ತಿ ಪಟ್ಟರು.ಆ ಸ್ಥಾನಕ್ಕೆ ಚುನಾವಣೆ ನಡೆದಿದ್ದರೆ ಅದು ಕೂಡ ಎನ್.ಡಿ.ಎ ಪಾಲಾಗುತ್ತಿತ್ತು.ಅಧ್ಯಕ್ಷ ಉಪಾಧ್ಯಕ್ಷರ ಚುನಾವಣೆಗೂ ತಡೆ ತರಲು ಪ್ರಯತ್ನ ನಡೆಸಿ ವಿಫಲರಾದರು. ಇದರ ನಡುವೆ ಇಂದು ನಡೆದ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಎನ್‌ಡಿಎ ಬೆಂಬಲಿತರು ಆಯ್ಕೆಯಾಗಿದ್ದು ಸಂತೋಷದ ವಿಷಯ. ಇಬ್ಬರು ಚುನಾಯಿತರು ಎಲ್ಲರ ಸಹಕಾರದೊಂದಿಗೆ ಬ್ಯಾಂಕನ್ನು ಅಭಿವೃದ್ಧಿಯತ್ತ ಸಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ಇನ್ನು ನೂತನ ಚುನಾಯಿತರಿಗೆ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಕೇಶವರೆಡ್ಡಿ, ಮರಳಕುಂಟೆ ಕೃಷ್ಣಮೂರ್ತಿ, ನಗರಸಭೆ ಅಧ್ಯಕ್ಷ ಗಜೇಂದ್ರ, ಎಂ.ಎಫ್.ಸಿ ನಾರಾಯಣಸ್ವಾಮಿ,ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ನಾಗೇಶ್, ಕಾಳೆ ಗೌಡ, ಗಿರೀಶ್ ಹರಿಸ್ಥಳ, ಗಂಗರೇಕಾಲುವೆ ಮೂರ್ತಿ, ಟಿಎಪಿಸಿಎಂಎಸ್ ಮಾಜಿ ಉಪಾಧ್ಯಕ್ಷ ಈರಾಂಜಿನಪ್ಪ, ಬಾಗೇಪಲ್ಲಿ ಜೆಡಿಎಸ್ ಮುಖಂಡರಾದ ಹರಿನಾಥ್ ರೆಡ್ಡಿ ಮತ್ತು ಇತರರು ಶುಭಕೋರಿದರು.

## ಜಿಲ್ಲಾಡಳಿತ,ಪೊಲೀಸರು ದಲಿತ ಸಂಘಟನೆಗಳ ಕ್ಷಮೆ ಯಾಚಿಸಬೇಕು

**ಶಿಡ್ಲಘಟ್ಟ:** ಶಾಂತಿಯುತವಾಗಿ ಪಾದಯಾತ್ರೆ ಮೂಲಕ ಬೆಂಗಳೂರಿಗೆ ಹೊರಟ್ಟಿದ್ದ ದಲಿತ ಪರ ಹೋರಾಟಗಾರರನ್ನು ಬಲವಂತವಾಗಿ ಬಂಧಿಸುವ ಮೂಲಕ ಹೋರಾಟ ಹತ್ತಿಕ್ಕುವ ಕೆಲಸ ಮಾಡಿದ ಜಿಲ್ಲಾಡಳಿತ ಹಾಗೂ ಪೊಲೀಸರು ಈ ಕೂಡಲೇ ದಲಿತ ಸಂಘಟನೆಗಳ ಕ್ಷಮೆ ಯಾಚಿಸಬೇಕು ಎಂದು ಮಾನವ ಹಕ್ಕುಗಳು ಹಾಗೂ ಮಾಧ್ಯಮ ಸಂಘಟನೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಕೆ.ಎಸ್. ಅರುಣ್‌ಕುಮಾರ್ ಒತ್ತಾಯಿಸಿದ್ದಾರೆ.



ಬೆಂಗಳೂರಿನ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ಪಾದಯಾತ್ರೆ ಮೂಲಕ ಚಿಂತಾಮಣಿಯಿಂದ ತೆರಳುತ್ತಿದ್ದ ದಲಿತ ಸಂಘಟನೆಗಳ ಒಕ್ಕೂಟದ ಸದಸ್ಯರು, ಮುಖಂಡರನ್ನು ತಾಲ್ಲೂಕಿನ ಎಚ್. ಕ್ರಾಸ್ ನಲ್ಲಿ ಪೊಲೀಸರು ಶುಕ್ರವಾರ ಬಂಧಿಸಿದ್ದನ್ನು ವಿರೋಧಿಸಿ ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಚಿಂತಾಮಣಿಯ ಸರ್ಕಾರಿ ಶಾಲೆಯೊಂದರ ಆವರಣದಲ್ಲಿ ಹಲವು ತಿಂಗಳಿಂದ ಲೋಕಾರ್ಪಣೆಗೊಳ್ಳದ ಡಾ.ಅಂಬೇಡ್ಕರ್ ಪುತ್ಥಳಿಗೆ ಕೊಳಕು ಬಟ್ಟೆ ಸುತ್ತಿದ್ದು, ಪ್ರತಿಮೆಯನ್ನು ಕೂಡಲೇ ಅನಾವರಣಗೊಳಿಸುವಂತೆ ಒತ್ತಾಯಿಸಿ ದಲಿತ ಸಂಘಟನೆಗಳು ಹಮ್ಮಿಕೊಂಡಿದ್ದ ಪಾದಯಾತ್ರೆ ತಡೆದು ದೌರ್ಜನ್ಯ ಎಸಗಿರುವುದು ಖಂಡನೀಯ ಹಾಗು ಇದು ಮಾನವಹಕ್ಕುಗಳ ಉಲ್ಲಂಘನೆಯಾಗಿದೆ,ಈ ಕೂಡಲೇ ಸಂಬಂಧಪಟ್ಟವರು ಕ್ಷಮೆ ಯಾಚಿಸಬೇಕು ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಾನವ ಹಕ್ಕುಗಳು ಹಾಗೂ ಮಾಧ್ಯಮ ಸಂಘಟನೆಯ ತಾಲ್ಲೂಕು ಅಧ್ಯಕ್ಷ ಬಿ.ಸಿ.ಕಿರಣ್‌ಕುಮಾರ್, ನಗರ ಘಟಕದ ಅಧ್ಯಕ್ಷ ಪ್ರಕಾಶ್, ಕಾರ್ಯದರ್ಶಿ ಮಂಜುನಾಥ್ ಸಂಘಟನಾ ಕಾರ್ಯದರ್ಶಿ ವೇಣುಗೋಪಾಲ್ ಮುಂತಾದವರು ಹಾಜರಿದ್ದರು.

## ನಗರ ಆಶ್ರಯ ಸಮಿತಿ ನೂತನ ಸದಸ್ಯರಿಗೆ ಶಾಸಕರಿಂದ ಅಭಿನಂದನೆ

ಮಾಲೂರು: ಪಟ್ಟಣದ ಪುರಸಭಾ ಕಛೇರಿಯಲ್ಲಿ ನಡೆದ ಆಶ್ರಯ ಸಮಿತಿ ಸಭೆಯಲ್ಲಿ ಶಾಸಕ ಕೆ ವೈ ನಂಜೇಗೌಡರು ನೂತನವಾಗಿ ನಗರ ಆಶ್ರಯ ಸಮಿತಿ ಸದಸ್ಯರಾಗಿ ಕೆ. ದಿನೇಶ್ ಗೌಡ, ಮಂಜುನಾಥ್ (ಜಾಕಿ), ಕವಿತಾ ಚಲಪತಿ, ತಬ್ರಿಜ್ ಖಾನ್ ರವರು ನೇಮಕವಾದವರನ್ನು ಅಭಿನಂಧಿಸಿದರು.

ಈ ಸಮಯದಲ್ಲಿ ತಾಲ್ಲೂಕು ದಂಡಾಧಿಕಾರಿ ಎಂ ವಿ ರೂಪ , ಪುರಸಭಾ ಅಧ್ಯಕ್ಷೆ ಕೋಮಲ ನಾರಾಯಣ್ , ಉಪಾಧ್ಯಕ್ಷೆ ವಿಜಯಲಕ್ಷ್ಮಿ ಕೃಷ್ಣಪ್ಪ , ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಪುರಸಭಾ ಮುಖ್ಯಾಧಿಕಾರಿ ಎ.ಬಿ.ಪ್ರದೀಪ್ ಕುಮಾರ್ , ಸಿ.ಡಿ.ಮಂಜುನಾಥ್,ಹಾಗೂ ಜನಪ್ರತಿನಿಧಿಗಳು, ಮುಖಂಡರು,



# ರಕ್ತದಾನ ಶಿಬಿರ, ಅನ್ನದಾನ ಕಾರ್ಯಕ್ರಮ



**ಬಳ್ಳಾರಿ:** ಡಾಕ್ಟರ್ ಪುನೀತ್ ರಾಜಕುಮಾರ್ 50ನೇ ವರ್ಷದ ಜನ್ಮದಿನದ ಅಂಗವಾಗಿ ಮುತ್ತುರಾಜ್ ಗೆಳೆಯರ ಬಳಗ ಹಾಗೂ ಯುವ ಸಾಮ್ರಾಜ್ಯ ಬಳ್ಳಾರಿ ಇವರ ವತಿಯಿಂದ ನಗರದ ಹೊಸ ಬಸ್ ನಿಲ್ದಾಣ ಎದುರುಗಡೆ ಇರುವ ಅಪ್ಪು ಹೋಟೆಲ್‌ನಲ್ಲಿ ಸ್ವಾಮಿ ವಿವೇಕಾನಂದ ರಕ್ತ ಬಂಡಾರ ಸಹಯೋಗದೊಂದಿಗೆ ಮೂರನೇ ವರ್ಷದ ರಕ್ತದಾನ ಶಿಬಿರ ಮತ್ತು ಅನ್ನದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಮಾತನಾಡಿದ ಗುಗ್ರಹಟ್ಟಿ ಮನೋಜ್ ಪುನೀತ್ ರಾಜ್‌ಕುಮಾರ್ ಹುಟ್ಟುಹಬ್ಬದ ದಿನವನ್ನು ಸ್ಫೂರ್ತಿ ದಿನ ಎಂದು ಸರ್ಕಾರ ಘೋಷಿಸಿದೆ. ಅದರಂತೆ ಸ್ಫೂರ್ತಿಯ ಚಿಲುಮೆ ಅಪ್ಪು ನೆನಪಲ್ಲಿ ರಾಜ್ಯದೆಲ್ಲೆಡೆ ಅಭಿಮಾನಿಗಳು ತಮ್ಮಿಷ್ಟ ಬಂದಂತೆ ಹುಟ್ಟುಹಬ್ಬ ಆಚರಿಸುತ್ತಿದ್ದಾರೆ.ಅನ್ನದಾನ,ಉಚಿತ ಆರೋಗ್ಯ ತಪಾಸಣೆ, ರಕ್ತದಾನ ಶಿಬಿರ, ವ್ಯಾಪಾರ ವಹಿವಾಟು ಸೇರಿದಂತೆ ಅನೇಕ ಕಾರ್ಯಕ್ರಮಗಳು ನಡೆಯಲಿದೆ. ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪ್ಪು ಹೋಟೆಲ್ ಮಾಲೀಕರಾದ ವಿರುಪಾಕ್ಷಿ ಮಾತನಾಡಿ,ಪುನೀತ್ ರಾಜ್‌ಕುಮಾರ್ ಇದ್ದಿದ್ದರೇ ಹೇಗೆಲ್ಲಾ ಅದ್ದೂರಿಯಾಗಿ ಹುಟ್ಟುಹಬ್ಬ ಆಚರಿಸಬೇಕು ಎಂದು ಫ್ಯಾನ್ಸ್ ಅಂದುಕೊಂಡಿದ್ದರೋ ಅದರಂತೆಯೇ ಅದ್ದೂರಿಯಾಗಿಯೇ ಆಚರಿಸಲಾಗುತ್ತಿದೆ.ಅಪ್ಪು ಕುಟುಂಬಸ್ಥರ ಜೊತೆ ಆಪ್ತರು ನಟ–ನಟಿಯರು ಅಭಿಮಾನಿಗಳು ವಿಶೇಷವಾಗಿ ಬಳ್ಳಾರಿಯ ಮುತ್ತುರಾಜ್ ಗೆಳೆಯರ ಬಳಗದ ಮತ್ತು ಯುವ ಸಾಮ್ರಾಜ್ಯದ ನಗುಮೊಗದ ಅರಸನ ಹುಟ್ಟುಹಬ್ಬಕ್ಕೆ ಕಳೆ ತುಂಬಲಿದ್ದಾರೆ.ಜೊತೆಗಿರದ ಈ ಯುವರತ್ನನನ್ನು ಕರುನಾಡು ಎಂದೆಂದಿಂಗೂ ಜೀವಂತವಾಗಿಸಿಕೊಂಡಿದೆಎಂದು ಹೇಳಿದರು

ಈ ಸಂದರ್ಭದಲ್ಲಿ ಅಪ್ಪು ಅಭಿಮಾನಿಗಳಾದ ಪವನ್, ರಣಧೀರ, ಸಂದೀಪ್, ಮಹೇಶ್, ಕೃಷ್ಣ,ಹನುಮಂತ ಅಜ್ಜಪ್ಪ, ಅಭಿ, ಬೆಳಗಲ್ ವೆಂಕಟೇಶ್ ಸೇರಿದಂತೆ ಇನ್ನಿತರರಿದ್ದರು.

> ಅಭಿಮಾನಿಗಳ ಆರಾಧ್ಯ ದೈವ ಪುನೀತ್‌ರಾಜ್ ಕುಮಾರ್‌ಗೆ 50ನೇ ವರ್ಷದ ಹುಟ್ಟುಹಬ್ಬದ ಸಂಭ್ರಮ.ಬಾರದ ಲೋಕಕ್ಕೆ ಹೋಗಿದ್ದರೂ ಅಪ್ಪು ಅಭಿಮಾನಿಗಳ ಪ್ರೀತಿ, ವಿಶ್ವಾಸ, ಹುಟ್ಟು ಹಬ್ಬ ಆಚರಿಸುವ ಉತ್ಸಾಹ ಕಿಂಚಿತ್ತೂ ಕಮ್ಮಿಯಾಗಿಲ್ಲ.
>
> **(ಮುತ್ತುರಾಜ್ ಗೆಳೆಯರ ಬಳಗದ ಸದಸ್ಯ ಗೌರೀಶ್ ಗುಗ್ಗರಹಟ್ಟಿ)**

> ಜೊತೆಗಿರದ ಜೀವವನ್ನು ಜೀವಂತವಾಗಿಸಿ ಕೊಂಡ ಅಭಿಮಾನಿಗಳು ರಾತ್ರಿಯಿಂದಲೇ ರಾಜ್ಯಾದ್ಯಂತ ಹುಟ್ಟುಹಬ್ಬ ಆಚರಣೆಯಲ್ಲಿ ತೊಡಗಿದ್ದಾರೆ.ಅದೆಷ್ಟು ವರ್ಷ ಕಳೆದರೂ ಸಹ ಅಪ್ಪು ಇಲ್ಲ ಎನ್ನುವುದನ್ನು ಅಭಿಮಾನಿಗಳು ಜೀರ್ಣಿಸಿಕೊಳ್ಳಲಾರರು.ಅಂದು ಕಣ್ಮುಂದಿದ್ದ ಅಪ್ಪು, ಈಗ ಕಣ್ಮುಂದಿನ ದೇವರಾಗಿದ್ದಾರೆ ಎಂಬುದು ನಮ್ಮ ನಂಬಿಕೆಯಾಗಿದೆ.ಅದರಂತೆ ಅವರ 50ನೇ ವರ್ಷದ ಹುಟ್ಟುಹಬ್ಬವನ್ನು ಅಭಿಮಾನಿಗಳು ಭಾರಿ ಅದ್ದೂರಿಯಾಗಿ ಆಚರಿಸುತ್ತಿದ್ದಾರೆ.
>
> **(ಮುತ್ತುರಾಜ್ ಗೆಳೆಯರ ಬಳಗದ ಅಧ್ಯಕ್ಷ ಗೋಪಾಲ ಹೊನ್ನಳ್ಳಿ)**

# ‘ಅಖಂಡ ಕರ್ನಾಟಕ ಬಂದ್’ ಮಾ.22ಕ್ಕೆ ವಾಟಾಳ್ ನಾಗರಾಜ್ ಕರೆ



**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ ಕಚೇರಿ ಮುಂದೆ ವಾಟಾಳ್ ನಾಗರಾಜ್‌ರವರ ನೇತೃತ್ವದಲ್ಲಿ ಪ್ರತಿಭಟನೆ ಹಾಗೂ ಕಪ್ಪು ಬಾವುಟ ಪ್ರದರ್ಶಿಸಿದರು.

ಜಿಲ್ಲೆಯಲ್ಲಿ ಪರಭಾಷಿಗರ ದಾಳಿ ನಿಲ್ಲಬೇಕು, ಕನ್ನಡಿಗರಿಗೆ ಉದ್ಯೋಗ ದೊರಕಬೇಕು ಹಾಗೂ ಎಂ.ಇ.ಎಸ್. ಪುಂಡಾಟಿಕೆ ವಿರುದ್ಧ ಪ್ರತಿಭಟನೆ ಹಾಗೂ ಕಪ್ಪು ಬಾವುಟ ಪ್ರದರ್ಶನ ಮಾಡಿ ಚಾಲಕರಿಗೆ ಶಕ್ತಿ ತುಂಬಲು ಮಾರ್ಚ್ 22ರಂದು ಕರ್ನಾಟಕ ರಾಜ್ಯ ಬಂದ್ ಮಾಡಲಾಗುವುದು ಎಂದು ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ತಿಳಿಸಿದರು.

ಕನ್ನಡ ಒಕ್ಕೂಟದ ಅಧ್ಯಕ್ಷ ವಾಟಾಳ್ ನಾಗರಾಜ್ ರವರ ನೇತೃತ್ವದಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಕಚೇರಿ ಮುಂಭಾಗದಲ್ಲಿ ನಡೆದ ಎಂ.ಇ.ಎಸ್. ಪುಂಡಾಟಿಕೆ ವಿರುದ್ಧ ಪ್ರತಿಭಟನೆ ಹಾಗೂ ಕಪ್ಪು ಬಾವುಟ ಪ್ರದರ್ಶಿಸಿ ಮೂಲಕ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ನಂತರ ಸುದ್ದಿಗೋಷ್ಠಿಗಾರರೊಂದಿಗೆ ಮಾತನಾಡಿ, ಮಾರ್ಚ್ 22 ರಂದು ’ಅಖಂಡ ಕರ್ನಾಟಕ ಬಂದ್’ ಇದರ ಅಂಗವಾಗಿ ಹಲವು ಕರ್ನಾಟಕದ ಬೇಡಿಕೆಗಳಾದ ಕಲ್ಯಾಣ ಕರ್ನಾಟಕ ಅಭಿವೃದ್ಧಿಯಾಗಬೇಕು. ಇಡೀ ರಾಜ್ಯದ ಗಡಿನಾಡುಗಳಲ್ಲಿ ಚಿಕ್ಕಬಳ್ಳಾಪುರ ಗಡಿ ಭಾಗವಾಗಿದ್ದು ಅದು ಬೆಳವಣಿಗೆಯಾಗಬೇಕು. ಎಂ.ಇ.ಎಸ್. ನಿಷೇಧ ಮಾಡಬೇಕು. ಕನ್ನಡ ಕಂಡಕ್ಟರ್ ಮೇಲೆ ಹಲ್ಲೆ ಮಾಡಿದವರಿಗೆ ಕಠಿಣ ಶಿಕ್ಷೆಯಾಗಬೇಕು. ಮೇಕೆದಾಟು ಯೋಜನೆ ಆಗಲೇಬೇಕು. ಕರ್ನಾಟಕದಲ್ಲಿ ಪರಭಾಷಾ ದಬ್ಬಾಳಿಕೆ ನಿಲ್ಲಬೇಕು. ಕರ್ನಾಟಕದಲ್ಲಿ ಪರಭಾಷಾ ಚಿತ್ರಗಳ ಬಹಿಷ್ಕಾರವಾಗಬೇಕು ಎಂದು ಬೇಡಿಕೆಗಳು ಇಟ್ಟರು. ಈ ವೇಳೆ ಕರವೇ ಉಪಾಧ್ಯಕ್ಷ ಟಿಪ್ಪೇನಹಳ್ಳಿ ನಾರಾಯಣಸ್ವಾಮಿ, ಜಿಲ್ಲಾ ಕನ್ನಡ ಒಕ್ಕೂಟದ ಸದ್ಯಸರು ಹಾಗೂ ಪ್ರಮುಖ ಮುಖಂಡರು ಮತ್ತು ಮತ್ತಿತರರು ಹಾಜರಿದ್ದರು.

# ಭಕ್ತರು ಹುಂಡಿಗೆ ಹಾಕಿದ ಹಣದಿಂದ 5 ಸ್ವಚ್ಛತಾ ವಾಹನ ಕೊಡುಗೆ

ಮಾಲೂರು: ಶ್ರೀಮಾರಿಕಾಂಬ ದೇವಾಲಯ ಟ್ರಸ್ಟ್ ವತಿಯಿಂದ ಭಕ್ತರು ಹುಂಡಿಗೆ ಹಾಕಿದ ಹಣದಿಂದ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯವಾದುದು ಎಂದು ಜಿಲ್ಲಾಧಿಕಾರಿ ಡಾ. ರವಿಕುಮಾರ್ ಹೇಳಿದರು.



ಶ್ರೀಕ್ಷೇತ್ರ ಶ್ರೀ ಮಾರಿಕಾಂಬ ದೇವಾಲಯ ವತಿಯಿಂದ ಪುರಸಭಾ ಕಾರ್ಯಾಲಯಕ್ಕೆ 5 ಸ್ವಚ್ಛತಾ ವಾಹನಗಳನ್ನು ಹಸ್ತಾಂತರಿಸುವ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ ರವಿಕುಮಾರ್ ಶಾಸಕ ಕೆ ವೈ ನಂಜೇಗೌಡ ಅವರು ಪುರಸಭೆ ಅಧ್ಯಕ್ಷರು ಹಾಗೂ ಮುಖ್ಯ ಧಿಕಾರಿಗಳಿಗೆ ಸ್ವಚ್ಛತಾ ವಾಹನ ಗಳ ಕೀ ಗಳನ್ನು ಹಸ್ತಾಂತರ ಮಾಡಿ ಮಾತನಾಡಿದರು

ಪಟ್ಟಣದ ಸ್ವಚ್ಛತೆಗಾಗಿ ಸ್ವಚ್ಛತ ವಾಹನಗಳು ಪುರಸಭೆಗೆ ಹಸ್ತಾಂತರಿಸಿದ ಮಾರಿಕಾಂಬ ಟ್ರಸ್ಟಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದವರು ಇಲ್ಲಿನ ಟ್ರಸ್ಟಿನವರು ಕೆರೆಯ ನೀರು ಕೆರೆಗೆ ಚೆಲ್ಲು ಎಂಬಂತೆ ಭಕ್ತಾದಿಗಳು ಹುಂಡಿಗೆ ಹಾಕುವ ಹಣವನ್ನು ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಮಾರಿಕಾಂಬಾದೇವಿಯು ಶಕ್ತಿ ದೇವತೆಯಾಗಿದ್ದು ಇಲ್ಲಿನ ಎಲ್ಲಾ ಜನರನ್ನು ಆ ದೇವತೆ ಕಾಪಾಡಲಿ ಎಂದರು.

ಇಲ್ಲಿನ ಶಾಸಕರು ಜನಾನುರಾಗಿ ಈ ಕ್ಷೇತ್ರದ ಅಭಿವೃದ್ಧಿಗೆ ಸಾರ್ವಜನಿಕ ಕೆಲಸಗಳು ಮಾಡುವ ರೀತಿ ಮತ್ತೊಬ್ಬ ಶಾಸಕರಿಗೆ ಅನುಕರಣೆಯವಾಗಿದೆ ಅಭಿವೃದ್ಧಿಯ ಗುರಿಯನ್ನು ಇಟ್ಟುಕೊಂಡು ಸರ್ಕಾರದ ಹಂತದಲ್ಲಿ ಶಕ್ತಿಮೀರಿ ಅನುದಾನಗಳನ್ನು ತರುತ್ತಿದ್ದಾರೆ ಮಾಲೂರು ಪಟ್ಟಣವನ್ನು ಮಾದರಿ ಪಟ್ಟಣವನ್ನಾಗಿಸಲು ಕನಸನ್ನು ನನಸಾಗಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ ಇಲ್ಲಿನ ಪುರಸಭೆಯು ಕೆಲವೇ ದಿನಗಳಲ್ಲಿ ನಗರ ಸಭೆಯಾಗಿ ಪರಿವರ್ತನೆ ಯಾಗಲಿದ್ದು ಈಗಾಗಲೇ ಪ್ರಸ್ತಾವನೆ ಸರ್ಕಾರದ ಹಂತದಲ್ಲಿದೆ ಇಡೀ ಜಿಲ್ಲೆಯಲ್ಲಿ ವೇಗವಾಗಿ ಬೆಳೆಯುತ್ತಿರುವ ಮಾಲೂರು ಪಟ್ಟಣವು ಅಭಿವೃದ್ಧಿಯಲ್ಲಿ ಪರ್ವ ಕಾಣುತ್ತಿದೆ ಇದರ ಅನುಕೂಲ ಜನರಿಗೆ ಆಗಲಿ ಉತ್ತಮ ಸೌಕರ್ಯಗಳನ್ನು ನೀಡುತ್ತಿರುವ ಪುರಸಭೆ ಮತ್ತಷ್ಟು ಸವಲತ್ತುಗಳನ್ನು ಒದಗಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿ ಎಂದು ಹೇಳಿದರು.

ಶಾಸಕ ಕೆ ವೈ ನಂಜೇಗೌಡ ಮಾತನಾಡಿ, ಪಟ್ಟಣದಲ್ಲಿ ಕಸದ ವಿಲೇವಾರಿ ಮಾಡುವುದು ಪುರಸಭೆಗೆ ಕಷ್ಟವಾಗಿತ್ತು ಮಾರಿಕಾಂಬ ಟ್ರಸ್ಟಿನ್ ಅವರ ಬಳಿ ಸ್ವಚ್ಛತ ವಾಹನಗಳು ನೀಡಲು ಮನವಿ ಮಾಡಲಾಗಿತ್ತು ಅದರಂತೆ 50 ಲಕ್ಷ ವೆಚ್ಚದ 5 ಸ್ವಚ್ಛತಾ ವಾಹನಗಳು ಪುರಸಭೆಗೆ ನೀಡಿರುವುದು ಸ್ವಾಗತ ಬೆಳವಣಿಗೆಯಾಗಿದೆ

ಅಧಿಕಾರ ಶಾಶ್ವತವಲ್ಲ ನಮಗೆ ಸಿಕ್ಕ ಅವಕಾಶಗಳು ಬಳಸಿಕೊಂಡು ಸಮಾಜದಲ್ಲಿ ಶಾಶ್ವತವಾದ ಕುರುಹುಗಳು ನೀಡಿದರೆ ನಾವು ಇಲ್ಲದಿದ್ದರೂ ಸಹ ಅವು ಶಾಶ್ವತವಾಗಿರುತ್ತದೆ.

ರಾಜಕಾರಣದಲ್ಲಿ ಹಣ ಮಾಡಲು ಸಾಧ್ಯವಿಲ್ಲ ತಾಳ್ಮೆ ಇದ್ದರೆ ಕ್ಷೇತ್ರದ ಅಭಿವೃದ್ಧಿ ಕನಸು ಕಾಣುವ ಮೂಲಕ ಯಶಸ್ಸು ಕಾಣಬಹುದಾಗಿದೆ ಸರ್ಕಾರದ ಸಚಿವರು ಮುಖ್ಯಮಂತ್ರಿಗಳು ವಿಶ್ವಾಸಕ್ಕೆ ಪಡೆದು ತಾಲೂಕಿಗೆ ಇಂಡಸ್ಟ್ರಿಯಲ್ ಕಾರಿಡಾರ್ ರಸ್ತೆಯನ್ನು ಮಂಜೂರು ಮಾಡಿಸಿದ್ದು ತಾಲೂಕಿನಲ್ಲಿ 200100 ಕೋಟಿ ರೂಗಳಷ್ಟು ರಸ್ತೆ ಅಭಿವೃದ್ಧಿಯಾಗಲಿದೆ.

ರಾಜ್ಯದಲ್ಲಿ ಇತ್ತೀಚೆಗೆ ನಡೆದ ಬಜೆಟ್ ನಲ್ಲಿ ಸರ್ಕಾರಿ ಆಸ್ಪತ್ರೆಗೆ ಅನುದಾನ ಮೀಸಲಿಡಿಸಿ ಬಿಡುಗಡೆ ಮಾಡಿದ್ದಾರೆ ಅಲ್ಲದೆ ಶಿವಾರಪಟ್ಟಣ ಅಭಿವೃದ್ಧಿಗೂ ಸಹ ಅನುದಾನ ನೀಡಿದ್ದು ಜಿಲ್ಲೆಗೆ ಎಂಟು ಅವಕಾಶಗಳು ಬಜೆಟ್ ನಲ್ಲಿ ಅನುಮೋದನೆ ದೊರೆತಿದೆ ಇದು ಇತಿಹಾಸ ಪುಟಗಳಲ್ಲಿ ದಾಖಲೆ ಮಾಡುವಂಥದ್ದು,

ನಗರ ಯೋಜನಾ ಪ್ರಾಧಿಕಾರ ಅನುದಾನ ಬಳಸಿಕೊಂಡು ಪಟ್ಟಣದಲ್ಲಿ 35 ಕೋಟಿ ರೂಗಳ ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿ ಪ್ರಗತಿಯಲ್ಲಿದ್ದು, ಪಟ್ಟಣದಲ್ಲಿ 20 ಕೋಟಿ ರೂಗಳಲ್ಲಿ ಸುಸಜ್ಜಿತ ಬಸ್ ನಿಲ್ದಾಣ ಮಂಜೂರು ಮಾಡಲಾಗುವುದು

ಒಳ್ಳೆಯ ಕೆಲಸಗಳು ಮಾಡಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳು ಹಾಗೂ ಯೋಚನೆಗಳು ಕಾರ್ಯರೂಪಕ್ಕೆ ತರಲು ಅಧಿಕಾರಿಗಳು ಉತ್ತಮ ರೀತಿಯಲ್ಲಿ ಕೆಲಸ ಮಾಡಿದರೆ ರಾಜಕಾರಣಿಗಳಿಗೂ ಹೆಸರು ಬರುತ್ತದೆ ಅದೇ ರೀತಿ ಸವಲತ್ತುಗಳು ಸಹ ಕಟ್ಟ ಕಡೆಯ ವ್ಯಕ್ತಿಗೂ ತಲುಪುತ್ತದೆ

ಪ್ರಸ್ತುತ ಪಟ್ಟಣದ ಪುರಸಭೆಗೆ 40,00,000 ಗಳ ಕಂಪ್ರೆಸ್ ವಾಹನ ಹಾಗೂ ಯುಜಿಡಿ ಜೆಟ್ ಜನರೇಟಿಂಗ್ 30 ಲಕ್ಷ ರೂಗಳಿಗೆ ಜಿಲ್ಲಾಧಿಕಾರಿಗಳು ಅನುಮೋದನೆ ನೀಡಿದ್ದಾರೆ.

ಪಟ್ಟಣದ ನಿರ್ಗತಿಕರಿಗೆ ಆಶ್ರಯ ಯೋಜನೆ ಅಡಿ ನಿವೇಶನಗಳು ನೀಡಲು ಮೂರು ಬಡಾವಣೆಗಳು ಅಭಿವೃದ್ಧಿಯ ಪ್ರಗತಿಯಲ್ಲಿದ್ದು ಮುಂಬರುವ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ನಿವೇಶನ ರೈತ ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ವಿತರಿಸಲಾಗುವುದು

ಪಟ್ಟಣ ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದ್ದು ಪಟ್ಟಣದ ಜನತೆಗೆ ಮೂಲಭೂತ ಸೌಲತ್ತುಗಳನ್ನು ಒದಗಿಸಲು ಕಷ್ಟಕರವಾಗಿದ್ದರಿಂದ ನಗರಸಭೆಯನ್ನಾಗಿಸಲು ಪುರಸಭೆಯಿಂದ ಪ್ರಸ್ತಾಪ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಗೆ ಕಳುಹಿಸಲಾಗಿತ್ತು ಜಿಲ್ಲಾಧಿಕಾರಿಗಳು ಪ್ರಸ್ತಾವನೆಯನ್ನು ಸರ್ಕಾರಕ್ಕೆ ರವಾನಿಸಿದ್ದು ಶೀಘ್ರದಲ್ಲಿಯೇ ಪುರಸಭೆಯು ನಗರಸಭೆಯಾಗಿ ಮೇಲ್ದರ್ಜೆಗೆ ಸರ್ಕಾರ ಏರಿಸಲಿದೆ ಎಂದರು.

ತಶೀಲ್ದಾರ್ ಎಂ ವಿ ರೂಪ, ಪುರಸಭೆ ಅಧ್ಯಕ್ಷೆ ಕೋಮಲ ನಾರಾಯಣ ಉಪಾಧ್ಯಕೆ ವಿಜಯ ಲಕ್ಷ್ಮಿ ಸ್ಥಾಯಿ ಸಮಿತಿಯ ಅಧ್ಯಕ್ಷ ಎ ರಾಜಪ್ಪ, ಮಾರಿಕಾಂಬ ಟ್ರಸ್ಟ್ ಅಧ್ಯಕ್ಷ ಪಿ ವೆಂಕಟೇಶ್, ಪುರಸಭೆ ಸದಸ್ಯರುಗಳಾದ ಆರ್ ವೆಂಕಟೇಶ್ , ಎನ್.ವಿ.ಮುರಳೀಧರ್, ಮಂಜುನಾಥ್, ಪರಮೇಶ್ ಇಮ್ತಿಯಾಜ್ ಖಾನ್ ವಿಜಯ ಲಕ್ಷ್ಮಿ ಜಾಕೀರ್ ಖಾನ್, ಇಂತಿಯಾಜ್, ಮುಖ್ಯಾ ಧಿಕಾರಿ ಎ ಬಿ ಪ್ರದೀಪ್ ಟ್ರಸ್ಟಿನ ಸದಸ್ಯರುಗಳಾದ ತಬಲ ನಾರಾಯಣಪ್ಪ, ಪಂಚೆ ನಂಜುಂಡಪ್ಪ, ಆರ್ ಕೃಷ್ಣಪ್ಪ, ಟೈಲರ್ ಅಂಜಿ, ಮಂಜು, ಕೆ ಪಿ ಸಿ ಸಿ ಸದಸ್ಯ ಸೋಮಶೇಖರ್, ಕ ಸಾ ಪ ಅಧ್ಯಕ್ಷ ಎಂ ವಿ ಹನುಮಂತಯ್ಯ, ಯುವ ಕಾಂಗ್ರೇಸ್ ಅಧ್ಯಕ್ಷ ತನ್ವೀರ್, ಪುರಸಭೆ ಆರೋಗ್ಯ ಶಾಖೆಯ ಅಭಿಯಂತರೆ ಶಾಲಿನಿ, ಹಿರಿಯ ಆರೋಗ್ಯಾ ಧಿಖಾರಿ ಶ್ರೀನಿವಾಸ್, ಕಿರಿಯ ಆರೋಗ್ಯಾಧಿಕಾರಿ ರಾಜಣ್ಣ ಸೇರಿದಂತೆ ಮುಂತಾದವರು ಹಾಜರಿದ್ದರು.

# ಅಂಬೇಡ್ಕರ್ ಭವನ ನಿರ್ಮಾಣ ನನ್ನ ಕನಸು



ಶಿಡ್ಲಘಟ್ಟ : ಏಪ್ರಿಲ್–14ರಂದು "ಅಂಬೇಡ್ಕರ್ ಭವನ" ಸೇರಿದಂತೆ "ಗುರು ಭವನ" ಹಾಗೂ "ಸರ್ಕಾರಿ ನೌಕರರ ಭವನ" ಮೂರು ಭವನಗಳ ಗುದ್ದಲಿಪೂಜೆ ನೆರವೇರಿಸಲಾಗುವುದು ಅಂಬೇಡ್ಕರ್ ಭವನ ನಿರ್ಮಾಣ ನನ್ನ ಕನಸು, ಅದು ಯಾವ ರೀತಿ ನಿರ್ಮಾಣವಾಗಲಿದೆ ಎನ್ನುವುದು ಕಾರ್ಯಕ್ರಮದ ವೇದಿಕೆಯಲ್ಲಿ ಬೃಹತ್ ಪರದೆಯಲ್ಲಿ ವೀಕ್ಷಿಸುವ ವ್ಯವಸ್ಥೆ ಮಾಡಲಾಗುವುದು ಎಂದು ಶಾಸಕರಾದ ಬಿ.ಎನ್. ರವಿಕುಮಾರ್ ತಿಳಿಸಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಡಾ. ಬಾಬು ಜಗಜೀವನರಾಂ ಹಾಗೂ ಡಾ.ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆಯಲ್ಲಿ ಬಾಗವಹಿಸಿ ಅವರು ಮಾತನಾಡಿದರು.

ನಮ್ಮ ದೇಶದ ಜನತೆ ನೆಮ್ಮದಿಯಿಂದ ಬದುಕು ಸಾಗಿಸಲು ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನವೇ ಕಾರಣ ಅಂತಹ ಮಹಾತ್ಮರ ಜಯಂತಿಯನ್ನು ಎಲ್ಲರೂ ಅರ್ಥಪೂರ್ಣವಾಗಿ ಆಚರಿಸಿದಾಗ ಮಾತ್ರ ಅವರಿಗೆ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಹೇಳಿದರು.

ನಗರದಲ್ಲಿ ಸುಮಾರು 10 ಕೋಟಿ ರೂ. ಗಳ ವೆಚ್ಚದ ಸುಸಜ್ಜಿತ ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಏ.14ರಂದು ಭೂಮಿಪೂಜೆ ನೆರವೇರಿಸುವ ಮೂಲಕ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುವುದು ಪ್ರತಿಯೊಬ್ಬರೂ ಸ್ವಯಂಪ್ರೇರಿತರಾಗಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸಂವಿದಾನ ಶಿಲ್ಪಿ ಅಂಬೇಡ್ಕರ್ ಅವರ ಆಶಯದಂತೆ ಸರ್ಕಾರದ ಪ್ರತಿಯೊಂದು ಯೋಜನೆಯ ಲಾಭವನ್ನು ಅರ್ಹರಿಗೆ ತಲುಪಿಸಬೇಕೆಂಬ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ ಎಂದರು.

ಈಗಾಗಲೇ ಅಂಬೇಡ್ಕರ್ ಭವನ ನಿರ್ಮಾಣಕ್ಕಾಗಿ ನಿರ್ಮಿತಿ ಕೇಂದ್ರದಲ್ಲಿ 4 ಕೋಟಿ ರೂ.ಗಳು ಮೀಸಲಿಡಲಾಗಿದ್ದು, ಬಾಬು ಜಗಜೀವನ್ ರಾಮ್ ಭವನ ನಿರ್ಮಾಣ ಮಾಡಲು 1 ಎಕರೆ ಜಮೀನು ಕೊಡಿಸುವ ಭರವಸೆ ನೀಡಿದರು.

ನಗರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕೆ 10 ಕೋಟಿ ರೂ.ಗಳ ಯೋಜನೆ ರೂಪಿಸಲಾಗಿದ್ದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಸಂಸದರ ನಿಧಿಯಿಂದ 50 ಲಕ್ಷ , ರೂ.ಗಳು, ಸಂಸದ ಎಂ.ಮಲ್ಲೇಶ್ ಬಾಬು 50 ಲಕ್ಷ ರೂ.ಗಳು, ಎಂಎಲ್‌ಸಿ ಇಂಚರ ಗೋವಿಂದರಾಜು 50 ಲಕ್ಷ ರೂ.ಗಳು , ಶಾಸಕರ ಅನುದಾನದಲ್ಲಿ 50 ಲಕ್ಷ ರೂ.ಗಳು ನೀಡಲಿದ್ದೇವೆ ಎಂದರು.

ಸಭೆಯಲ್ಲಿದ್ದ ಬಹುತೇಕ ಮುಖಂಡರು ಬಾಬು ಜಗಜೀವನರಾಂ ಜಯಂತಿ ಹಾಗೂ ಡಾ.ಬಿ.ಆರ್.ಅಬೇಡ್ಕರ್ ಜಯಂತಿಯನ್ನು ಪ್ರತ್ಯೇಕವಾಗಿ ಮಾಡಬೇಕು ಎಂದು ಸಲಹೆ ನೀಡಿದ ಹಿನ್ನೆಲೆಯಲ್ಲಿ ತಾಲ್ಲೂಕು ಕಚೇರಿಯಲ್ಲಿ ಸಾಂಕೇತಿಕವಾಗಿ ಎರಡೂ ಜಯಂತಿಗಳನ್ನು, ಪ್ರತ್ಯೇಕವಾಗಿ ಮಾಡಲಾಗುತ್ತದೆ,ಆದರೂ ಇನ್ನೊಂದು ಬಾರಿ ಏ.14 ರಂದು ಎರಡೂ ಜಯಂತಿಯನ್ನು ಒಂದೇ ದಿನ ಆಚರಿಸಲು ಸಹಕರಿಸುವಂತೆ ಅವರು ಮನವಿ ಮಾಡಿದರು.

ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಬೇಕು,ತಾಲ್ಲೂಕು ಮಟ್ಟದ ಎಲ್ಲಾ ಸರ್ಕಾರಿ ನೌಕರರು ಕಡ್ಡಾಯವಾಗಿ ಜಯಂತಿಯಲ್ಲಿ ಪಾಲ್ಗೊಳ್ಳುವಂತೆ ತಹಸೀಲ್ದಾರ್ ಹಾಗೂ ತಾಲ್ಲೂಕು ಪಂಚಾಯತಿ ಇಒಗೆ ಶಾಸಕರಾದ ಬಿ.ಎನ್. ರವಿಕುಮಾರ್ ಸೂಚಿಸಿದರು.

ಜತೆಗೆ ತಾಲ್ಲೂಕಿನಾದ್ಯಂತ ಪ್ರತಿಯೊಬ್ಬ ಮುಖಂಡರು, ನಾಗರಿಕರು ಪಕ್ಷಾತೀತವಾಗಿ ಭಾಗವಹಿಸಿ ಅಂಬೇಡ್ಕರ್ ಜಯಂತಿಯಲ್ಲ ಭಾಗವಹಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಬಿ.ಎನ್.ಸ್ವಾಮಿ, ತಾಲ್ಲೂಕು ಪಂಚಾಯತಿ ಇಒ. ಹೇಮಾವತಿ, ಸರ್ಕಾರಿ ನೌಕರರ ಸಂಘದ ರಾಜ್ಯ ಕಾರ್ಯದರ್ಶಿ ಕೆ.ಎನ್.ಸುಬ್ಬಾರೆಡ್ಡಿ, ಆರಕ್ಷಕ ವೃತ್ತ ನಿರೀಕ್ಷಕ ಶ್ರೀನಿವಾಸ್, ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ಬಂಕ್ ಮುನಿಯಪ್ಪ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ಜಿಲ್ಲಾ ಜಾಗೃತಿ ಸಮಿತಿ ಸದಸ್ಯ ಮೇಲೂರು ಮಂಜುನಾಥ್, ಮುಖಂಡರಾದ ತಾದೂರು ರಘು, ಗಂಜಿಗುಂಟೆ ನರಸಿಂಹಮೂರ್ತಿ, ಸಿ.ವಿ.ಲಕ್ಷ್ಮಣರಾಜು ಮತ್ತಿತರರು ಹಾಜರಿದ್ದರು.

# ಚುನಾವಣೆಯಲ್ಲಿ ಕೆ.ಎಲ್ ನಾಗರಾಜು ತಂಡಕ್ಕೆ ಗೆಲುವು



**ನಾಗಮಂಗಲ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಕೆಪಿಟಿಸಿಎಲ್ ನೌಕರರ ಸಂಘದ ಮೂರು ವರ್ಷಗಳ ಅವಧಿಗೆ ಪ್ರಾಥಮಿಕ ಪ್ರತಿನಿಧಿಗಳ ಆಯ್ಕೆಗೆ ನಡೆದ ಸ್ಥಳೀಯ ಸಮಿತಿಯ ಚುನಾವಣೆಯಲ್ಲಿ ಕೆ.ಎಲ್ ನಾಗರಾಜು ತಂಡವು ಭರ್ಜರಿ ಗೆಲುವು ಸಾಧಿಸಿದೆ.

ನಾಗರಾಜು ನೇತೃತ್ವದ ತಂಡ ಮೇಲ್ಮೈ ಸಾಧಿಸಿ 8 ಸ್ಥಾನಗಳಲ್ಲಿ ಗೆಲುವು ಸಾಧಿಸಿದರೆ, ಶ್ರೀನಿವಾಸ್ ನೇತೃತ್ವದ ತಂಡ ಕೇವಲ ಎರಡು ಸ್ಥಾನಗಳಲ್ಲಿ ತೃಪ್ತಿ ಗೊಂಡಿದೆ.

ಓಟ್ಟು 10 ನಿರ್ದೇಶಕರ ಆಯ್ಕೆಗಾಗಿ ಸಂಘದ ಕಚೇರಿಯಲ್ಲಿ ನಡೆದ ಚುನಾವಣೆಯಲ್ಲಿ ನಾಗರಾಜು ತಂಡ 8 ಸ್ಥಾನಗಳಲ್ಲಿ ಗೆದ್ದು ಬೀಗಿದರೆ,, ಶ್ರೀನಿವಾಸ್ ತಂಡ ಕೇವಲ ಎರಡು ಸ್ಥಾನಕ್ಕೆ ತೃಪ್ತಿ ಪಟ್ಟಿ ಕೊಂಡಿತು.

ನಾಗರಾಜ ತಂಡದಲ್ಲಿ ಅಶೋಕ್ ಎ.ಟಿ (ಮೇಲ್ವಿಚಾರಕ ಚಿಣ್ಯ ಶಾಖೆ) 55 ಮತಗಳು, ದೇವರಾಜು ಕೆ (ದಫ್ತರಿ, ವಿಭಾಗೀಯ ಕಚೇರಿ) 51 ಮತಗಳು, ಗಿರೀಶ್ ಬಿ.ಟಿ (ಸಹಾಯಕ ಮಾರ್ಗದಾಳು, ದೇವಲಾಪುರ ಶಾಖೆ) 48 ಮತಗಳು, ಹರೀಶ್ ಕೆ.ಸಿ (ಮಾರ್ಗದಾಳು,ಕಾ ಮತ್ತು ಘಟಕ ನಾಗಮಂಗಲ) 54 ಮತಗಳು, ಮಹೇಶ್ ಪಿ.ಸಿ (ಮಾರ್ಗದಾಳು ಕಾ ಮತ್ತು ಪಾ. ಘಟಕ ನಾಗಮಂಗಲ) 50 ಮತಗಳು, ಮಂಜೇಗೌಡ ಕೆ.ಎಸ್ (ಮಾರ್ಗದಾಳು ಕಾ ಮತ್ತು ಪಾ. ಘಟಕ ನಾಗಮಂಗಲ) 54 ಮತಗಳು, ಮಂಜುನಾಥ (ಮಾರ್ಗದಾಳು ಕಾ ಮತ್ತು ಪಾ. ಘಟಕ ನಾಗಮಂಗಲ) 47 ಮತಗಳು, ಶ್ರೀನಿವಾಸ ಎನ್ (ಮಾರ್ಗದಾಳು ಚಿಣ್ಯ ಶಾಖೆ.) 50 ಮತಗಳು, ಸ್ವಾಮಿ ಎಸ್ (ಸಹಾಯಕ ವಿಭಾಗೀಯ ಕಚೇರಿ) 51 ಮತಗಳು, ಉಮೇಶ ಎಂ (ಕಿರಿಯ ಮಾರ್ಗದಾಳು ದೇವಲಾಪುರ ಶಾಖೆ) 37 ಮತಗಳು ಪಡೆದು ಜಯಗಳಿಸಿರುತ್ತಾರೆ.

ಶ್ರೀನಿವಾಸ ತಂಡದಿಂದ ರವಿಕುಮಾರ್ (ಮಾಪಕ ಓದುಗ ನಾಗಮಂಗಲ) 49 ಮತಗಳು, ಶ್ರೀನಿವಾಸ್ ವಿ (ಸ್ಟೇಷನ್ ಯಂತ್ರಕರ್ಮಿ ದರ್ಜೆ–1 ನಾಗಮಂಗಲ) 54 ಮತಗಳು ಪಡೆದು ಜಯಗಳಿಸಿರುತ್ತಾರೆ.

ನಾಗಮಂಗಲ ಚುನಾವಣೆ ಅಧಿಕಾರಿಯಾಗಿ ಮೇಲುಕೋಟೆ ಮಂಜುನಾಥ್ ಕಾರ್ಯನಿರ್ವಹಿಸಿ ನಾಗರಾಜ್ ತಂಡ ಜಯಭೇರಿ ಬಾರಿಸಿದೆ ಎಂದು ಘೋಷಣೆ ಮಾಡಿದರು.

ನೂತನವಾಗಿ ಆಯ್ಕೆಯಾದ ಎಲ್ಲ ಪ್ರತಿನಿಧಿಗಳಿಗೆ ಕೆಪಿಟಿಸಿಎಲ್ ಸಮಿತಿ ವತಿಯಿಂದ ಸನ್ಮಾನಿಸಲಾಯಿತು.ನಂತರ ಮಾತನಾಡಿದ ಅಭ್ಯರ್ಥಿಗಳು ನಮ್ಮ ಗೆಲುವಿಗೆ ಸಹಕರಿಸಿದ ಕೆಪಿಟಿಸಿಎಲ್ ನೌಕರರು ಹಾಗೂ ಸಹೋಉದ್ಯೋಗಳಿಗೆ ಧನ್ಯವಾದಗಳು ಅರ್ಪಿಸ್ತೇವೆ ಎಂದರು. ಸಹಕರಿಸಿದ ಎಲ್ಲಾ ನೌಕರರಿಗೆ ಪ್ರಾಮಾಣಿಕವಾಗಿ ಸಂಘದ ಅಭಿವೃದ್ಧಿಗೆ ಶ್ರಮಿಸಲಾಗುತ್ತದೆ ಹಾಗೂ ಶಕ್ತಿಮೀರಿ ಸಹಾಯ ಮಾಡುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಎಂ.ಗೋವಿಂದರಾಜು ಉಪಾಧ್ಯಕ್ಷರು ಕೆ.ವಿ. ಪ್ರ.ನಿ.ನಿ ಮೈಸೂರು, ಹೇಮಂತ್ ಕಿಲಾರ ಕೇಂದ್ರ ಸಮಿತಿ ಸದಸ್ಯರು ಮಂಡ್ಯ, ಶಿವಕುಮಾರ್ ಕಿರಿಯ ಇಂಜಿನಿಯರ್ ವಿದ್ಯುತ್ ಮಂಡ್ಯ, ನಾಗರಾಜು ಕೆ ಎಲ್ ಕೇಂದ್ರ ಸಮಿತಿ ಸದಸ್ಯರು ನಾಗಮಂಗಲ, ಅನಿಲ್ ಕುಮಾರ್ ನಿರ್ದೇಶಕರು ಸಹಕಾರ ಸಂಘ ಮಂಡ್ಯ ಪಿ.ಜೆ ರವಿ ಕುಮಾರ್, ಕೆ ಶಿವಕುಮಾರ್, ಎಸ್ ಜಿ ದಿಲೀಪ್, ಟಿ.ಕೆ ದೇವರಾಜು, ಬಿ.ಕೆ ಗೋಪಾಲ್, ಬಾಲು ಕೆ ಆರ್ ಹಾಗೂ ಅಧಿಕಾರಿಗಳು ನೌಕರರು ಹಾಜರಿದ್ದರು.

# ಸಮರ್ಪಕವಾದ ವಿದ್ಯುತ್ ನೀಡದೆ ಜಿಲ್ಲಾದ್ಯಂತ ಬೆಳೆ ನಷ್ಟ



**ಮುಳಬಾಗಿಲು:** ತಾಲ್ಲೂಕಿನಲ್ಲಿರುವ ಕೃಷಿ ಪಂಪ್ ಸೆಟ್‌ಗಳಿಗೆ ಗುಣಮಟ್ಟದ 10 ತಾಸು ವಿದ್ಯುತ್ ನೀಡಿ ನಿರಂತರ ಜ್ಯೋತಿ 24 ಗಂಟೆ ಗ್ರಾಮೀಣ ಪ್ರದೇಶಗಳಿಗೆ ನೀಡಿ, ವಿದ್ಯಾರ್ಥಿಗಳ ಪರೀಕ್ಷಾಗಳಿಗೆ ತೊಂದರೆಯಾಗದ ರೀತಿ ಕ್ರಮ ವಹಿಸಬೇಕೆಂದು ರೈತ ಸಂಘದಿಂದ ಬೆಸ್ಕಾಂ ಸಹಾಯಕ ನಿರ್ದೇಶಕರಾದ ರಮೇಶ್ ರವರ ಮುಖಾಂತರ ಇಂಧನ ಮಂತ್ರಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ಜಿಲ್ಲಾದ್ಯಂತ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದಿರುವಂತಹ ಬೆಳೆಯನ್ನು ರಕ್ಷಣೆ ಮಾಡಿಕೊಳ್ಳಬೇಕಾದರೆ ಕುಟುಂಬ ಸಂಸಾರವನ್ನು ಬಿಟ್ಟು ಕಾಡಾನೆಗಳ ಹಾವಳಿಯಲ್ಲೂ ಕೃಷಿ ಪಂಪ್‌ಸೆಟ್‌ಗಳ ಬಳಿ ರಾತ್ರಿವೇಳೆ ಕಾವಲು ಕಾಯಬೇಕಾದ ಪರಿಸ್ಥಿತಿ ಇದೆ. ಅಲ್ಲಿನ ರೈತರ ಕಷ್ಟವನ್ನು ಅರಿತು ವಿದ್ಯುತ್ ನೀಡುವಲ್ಲಿ ಬೆಸ್ಕಾಂ ಅಧಿಕಾರಿಗಳು ವಿಫಲವಾಗಿದ್ದಾರೆ ಕೇಳಿದರೆ ಹಿರಿಯ ಅಧಿಕಾರಿಗಳ ಮೇಲೆ ನೆಪ ಹೇಳಿ ರೈತರ ಜೀವನದ ಜೊತೆ ಚೆಲ್ಲಾಟವಾಡುತ್ತಿದ್ದಾರೆಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಅವ್ಯವಸ್ಥೆ ವಿರುದ್ಧ ಆಕ್ರೋಷ ವ್ಯಕ್ತ ಪಡಿಸಿದರು.

ಲಕ್ಷಾಂತರ ರೂಪಾಯಿ ಖಾಸಗಿ ಬಂಡವಾಳ ಹಾಕಿ ಬೆಳೆದಿರುವ ಬೆಳೆಗಳು ಕೈಗೆ ಬರುವ ಸಮಯದಲ್ಲಿ ಸಮರ್ಪಕವಾದ ವಿದ್ಯುತ್ ನೀಡದೆ ಬೆಳೆ ನಷ್ಟ ಒಂದು ಕಡೆಯಾದರೆ ಮತ್ತೊಂದು ಕಡೆ ರೋಗಗಳು ನಿಯಂತ್ರಣಕ್ಕೆ ಬಾರದೆ ಬೆಲೆ ಕುಸಿತದಿಂದ ಕಂಗಾಲಾಗಿರುವ ಟೆಮೊಟೋ ಹೂ, ಮತ್ತಿತರ ವಾಣಿಜ್ಯ ಬೆಳೆಗಳಿಗೆ ಬೆಸ್ಕಾಂ ಅಧಿಕಾರಿಗಳೇ ರೈತ ವಿರೋಧಿಗಳಾಗಿದ್ದಾರೆ. ಕಾರ್ಖಾನೆಗಳಿಗೆ ಶ್ರೀಮಂತರ ಖಾಸಗಿ ಕಾರ್ಯಕ್ರಮಗಳಿಗೆ ವಿದ್ಯುತ್ ನೀಡಲು ಯಾವುದೇ ಲೋಡ್‌ಷೆಡ್ಡಿಂಗ್ ಇರುವುದಿಲ್ಲ. ರೈತರಿಗೆ ವಿದ್ಯಾರ್ಥಿಗಳಿಗೆ ವಿದ್ಯುತ್ ನೀಡಬೇಕಾದರೆ ಬೆಸ್ಕಂ ಅಧಿಕಾರಿಗಳಿಗೆ ಪ್ರತಿ ವರ್ಷ ರೈತರು ಬೆಳೆದ ಅನ್ನ ತಿಂದು ರೈತರಿಗೆ ಗುಣಮಟ್ಟದ ವಿದ್ಯುತ್ ನೀಡಲು ಸಾಧ್ಯವಾಗದೆ ಇದ್ದರೆ, ಇನ್ನು ಬೆಸ್ಕಂ ಇಲಾಖೆ ಇದ್ದು ಪ್ರಯೋಜನವೇನೆಂದು ಪ್ರಶ್ನೆ ಮಾಡಿದರು.

ಜಿಲ್ಲಾ ಕಾರ್ಯಾಧ್ಯಕ್ಷ ಹೆಬ್ಬಣಿ ಆನಂದರೆಡ್ಡಿ ಮಾತನಾಡಿ, ಬೇಸಿಗೆಯಲ್ಲಿ ವಿದ್ಯುತ್ ಕಡಿತ ಮಾಡಿ ರೈತರು ಬೆಳೆದ ಬೆಳೆಯನ್ನು ನಾಶ ಮಾಡಿದರೆ ಬೆಸ್ಕಾಂ ಅಧಿಕಾರಿಗಳಿಗೆ ರೈತರ ಹೆಸರಿನಲ್ಲಿ ವಿದ್ಯುತ್ ಉಳಿಸಿದೆ ಎಂದು, ಚಿನ್ನದ ಪಥಕ ಕೊಡುತ್ತಾರೆಯೇ ಎಂದು ಪ್ರಶ್ನೆ ಮಾಡುವ ಜೊತೆಗೆ ರೈತರ ಮೇಲೆ ಗೌರವ ಇದ್ದರೆ, ಬೆಸ್ಕಂ ಅಧಿಕಾರಿಗಳು ಗುಣಮಟ್ಟದ ವಿದ್ಯುತ್ ನೀಡಿ ರೈತರ ಬೆಳೆ ರಕ್ಷಣೆ ಮಾಡಬೇಕೆಂದು ಒತ್ತಾಯಿಸಿದರು.

1 ಎಕರೆ ಬೆಳೆ ಬೆಳೆಯಬೇಕಾದರೆ ಕನಿಷ್ಠ ಹದಗೆಟ್ಟಿರುವ ಕೃಷಿ ಕ್ಷೇತ್ರದ ಬೆಲೆ ಏರಿಕೆಯಲ್ಲಿ 2 ರಿಂದ 3 ಲಕ್ಷ ಬಂಡವಾಳ ಸುರಿಯಬೇಕಾಗುತ್ತಿದೆ. ಆದರೂ ಬೆಳೆ ಸಮೃದ್ಧವಾಗಿ ಬಂದು ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗುವ ಭರವಸೆಯಲ್ಲಿರುವ ರೈತರಿಗೆ ಬೆಸ್ಕಂ ಅದಿಕಾರಿಗಳ ಬೇಜವಾಬ್ದಾರಿಯಿಂದ ಗುಣಮಟ್ಟದ ವಿದ್ಯುತ್ ಇಲ್ಲದೆ ಕಣ್ಣು ಮುಂದೆಯೇ ಬೆಳೆ ಬಿಸಲಿಗೆ ಒಣಗಿ ಕೈಗೆ ಬರುವ ಅದಾಯ ಮಣ್ಣುಪಾಲಾಗುತ್ತಿದೆ. ಆದರೂ ಅಧಿಕಾರಿಗಳು ಕೈಗಾರಿಕೋದ್ಯಮಗಳಿಗೆ ನೀಡುವ ಬೆಲೆ ರೈತರಿಗೆ ನೀಡುತ್ತಿಲ್ಲವೆಂದರು.

ಟಿ.ಸಿ. ಬದಲಾವಣೆಯಿಂದ ಹಿಡಿದು ಕಂಬಗಳ ಬಂದಲಾವಣೆ ಹಾಗೂ ಸರ್ಕಾರದಿಂದ ರೈತರಿಗೆ ನಿರಂತರ ಜ್ಯೋತಿ ಹಾಗೂ ಇಲಾಖೆಯ ಅಭಿವೃದ್ಧಿಗೆ ಬರುವ ಅನುದಾನ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಒಳ ಒಪ್ಪಂದದಿಂದ ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿ ಕೋಟಿ ಕೊಟಿ ಹಣವನ್ನು ಲೂಟಿ ಮಾಡುತ್ತಿದ್ದಾರೆ. ಅವ್ಯವಸ್ತೆಯನ್ನು ಸರಿಪಡಿಸಲು ಅಧಿಕಾರಿಗಳು ವಿಫಲವಾಗಿದ್ದಾರೆಂದು ಆರೋಪ ಮಾಡಿದರು.

ಕೃಷಿ ಪಂಪ್‌ಸೆಟ್‌ಗಳಿಗೆ ಗುಣಮಟ್ಟದ 10 ತಾಸು ವಿದ್ಯುತ್ ನೀಡಿ, ನಿರಂತರ ಜ್ಯೋತಿಯಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ರಾತ್ರಿವೇಳೆ 12 ತಾಸು ವಿದ್ಯುತ್ ನೀಡಬೇಕು. ವಿದ್ಯುತ್ ನೀಡುವ ಮುಖಾಂತರ ರೈತರ ಕಷ್ಟದ ಬೆವರಿನ ಬೆಳೆಯನ್ನು ರಕ್ಷಣೆ ಮಾಡಬೇಕಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಹಾಯಕ ಕಾರ್ಯಪಾಲಕ ಅಭಿಯಂತರರ ರಮೇಶ್ ರವರು ಇಂಧನ ಸಚಿವರ ಆದೇಶದಂತೆ ಕೃಷಿ ಪಂಪ್‌ಸೆಟ್‌ಗಳಿಗೆ 7 ತಾಸು ವಿದ್ಯುತ್ ನೀಡುತ್ತಿದ್ದೇವೆ. ರಾತ್ರಿವೇಳೆ ಸಿಂಗಲ್ ವಿದ್ಯುತ್ ನೀಡುವ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆ ಹರಿಸುವ ಭರವಸೆಯನ್ನು ನೀಡಿದರು.

ಮನವಿ ನೀಡುವಾಗ ಜಿಲ್ಲಾಧ್ಯಕ್ಷ ಈಕಂಬಳ್ಳಿ ಮಂಜುನಾಥ, ಪಾರುಕ್‌ಪಾಷ, ರಾಜೇಶ್, ಬಂಗಾರಿ ಮಂಜು, ಭಾಸ್ಕರ್, ಸುನಿಲ್‌ಕುಮಾರ್, ಶ್ರೀನವಾಸ್, ಜುಬೇರ್‌ಪಾಷ, ತಾ.ಅಧ್ಯಕ್ಷ ಯಲುವಳ್ಳಿ ಪ್ರಭಾಕರ್, ಮಂಗಸಂದ್ರ ತಿಮ್ಮಣ್ಣ, ಗಿರೀಶ್, ಅಂಬ್ಲಿಕಲ್ ಮಂಜುನಾಥ, ಪದ್ಮಘಟ್ಟ ಧರ್ಮ, ನಂಗಲಿ ನಾಗೇಶ್, ವೇಣು, ಕೇಶವ, ಮುಂತಾದವರು ಇದ್ದರು.

# ದಿಬ್ಬೂರಹಳ್ಳಿಯಿಂದ ಶಿಡ್ಲಘಟ್ಟದವರೆಗೆ ಕಾಲ್ನಡಿಗೆ ಜಾಥಾ




**ಶಿಡ್ಲಘಟ್ಟ:** ಜೀತ ವಿಮುಕ್ತರಿಗೆ ಭೂಮಿ, ವಸತಿ ಮತ್ತು ಸಮಗ್ರ ಪುನರ್ವಸತಿ ಸವಲತ್ತುಗಳಿಗಾಗಿ ಆಗ್ರಹಿಸಿ ದಿಬ್ಬೂರಹಳ್ಳಿಯಿಂದ ಶಿಡ್ಲಘಟ್ಟದವರೆಗೆ ಮಾ.19 ರಂದು ಕಾಲ್ನಡಿಗೆ ಜಾಥಾ ಹಮ್ಮಿಕೊಂಡಿದ್ದೇವೆ ಎಂದು ಜೀವಿಕ–ಜೀತ ವಿಮುಕ್ತಿ ಕರ್ನಾಟಕ ಸಂಘಟನೆ ತಾಲ್ಲೂಕು ಸಂಚಾಲಕ ಪಿ.ಶ್ರೀನಿವಾಸ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲಿ 7500 ಮಂದಿ ಜೀತದಿಂದ ಬಿಡುಗಡೆಗೊಂಡಿದ್ದಾರೆ ಆದರೆ ಸರ್ಕಾರವು ಇವರಿಗೆ ಇದುವರೆಗೆ ಯಾವುದೇ ಪುನರ್ವಸತಿ ಸೌಲಭ್ಯ ಕಲ್ಪಿಸಿಲ್ಲ ಎಂದು ದೂರಿದರು.

ತಾಲ್ಲೂಕಿನಲ್ಲಿ 2008 ರಲ್ಲಿ 8 ಮಂದಿ, 2010 ರಲ್ಲಿ 19 ಮಂದಿ ,2018 –19 ನೇ ಸಾಲಿನಲ್ಲಿ 432 ಮಂದಿ ಜೀತದಿಂದ ಬಿಡುಗಡೆ ಹೊಂದಿದ್ದಾರೆ,ಇವರಿಗೆ ಪಾರ್ಕಸ್ ನಿಧಿ, ಮಾಸಾಶನ ಹೊರತು ಪಡಿಸಿ ಕಾನೂನು ಪ್ರಕಾರ ಯಾವುದೇ ಸೌಲಭ್ಯ ಮತ್ತು ಪುನರ್ವಸತಿ ಕಲ್ಪಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಜೀತದಿಂದ ಬಿಡುಗಡೆ ಆಗಿರುವವರಿಗೆ ಕನಿಷ್ಠ 2 ಎಕರೆ ಜಮೀನು ನೀಡಬೇಕು,ಆದರೆ ಅವರಿಗೆ ಯಾವುದೇ ಅನುಕೂಲ ಕಲ್ಪಿಸಿಲ್ಲ,ಪ್ರಸ್ತುತ ಅವರು ಕೂಲಿ ಕಾರ್ಮಿಕರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ ಸರ್ಕಾರ ಮತ್ತು ಜಿಲ್ಲಾಡಳಿತದ ನಿರ್ಲಕ್ಷ್ಯವನ್ನು ಖಂಡಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷ ಗೊಲ್ಲಹಳ್ಳಿನರಸಿಂಹಪ್ಪ,ಮುನಿರಾಜು, ಮುನಿಯಪ್ಪ, ಮತ್ತಿತರರು ಹಾಜರಿದ್ದರು.

# ವಿವಿಧ ಪೂಜಾ ಕಾರ್ಯಗಳೊಂದಿಗೆ ಜಾತ್ರಾ ಮಹೋತ್ಸವಕ್ಕೆ ತೆರೆ



**ನಾಗಮಂಗಲ:** ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಜಾತ್ರಾ ಮಹೋತ್ಸವ 15. ಶನಿವಾರ 10.30 ಗಂಟೆಗೆ ಶ್ರೀ ಕ್ಷೇತ್ರ ಆದಿಚುಂಚನಗಿರಿ ಜಾತ್ರಾ ಮಹೋತ್ಸವದ ಅಂತಿಮ ದಿನ ವಿವಿಧ ಕಾರ್ಯಕ್ರಮಗಳೊಂದಿಗೆ ಜಾತ್ರಾ ಮಹೋತ್ಸವ ಸಂಪನ್ನಗೊಂಡಿತು.

ತಾಲೂಕಿನ ಶ್ರೀ ಕ್ಷೇತ್ರ ಆದಿಚುಂಚನಗಿರಿಯಲ್ಲಿ ಜಾತ್ರಾ ಮಹೋತ್ಸವದ ಕೊನೆಯ ದಿನದಂದು ಧರ್ಮಧ್ವಜಾವರೋಹಣ ಮತ್ತು ಬಿಂದು ಸರೋವರದಲ್ಲಿ ಅವಭೃತ ಸ್ನಾನ ಹಾಗೂ ಮಹಾಭಿಷೇಕ ಪೂಜಾ ಕಾರ್ಯಕ್ರಮದಲ್ಲಿ ಪರಮಪೂಜ್ಯ ಮಹಾಸ್ವಾಮೀಜಿಯವರು ದಿವ್ಯಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಈ ಕಾರ್ಯಕ್ರಮದಲ್ಲಿ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು, ಗಣ್ಯರು, ಮತ್ತು ಜಾತ್ರಾ ಮಹೋತ್ಸವಕ್ಕೆ ಆಗಮಿಸಿರುವ ಸದ್ಭಕ್ತರು ಉಪಸ್ಥಿತರಿದ್ದರು.

# ನನ್ನಪ್ಪ ಬದುಕಿನ ಶಕ್ತಿಯಾದರೆ, ನನ್ನಮ್ಮ ನಮ್ಮ ಬಾಳಿನ ಉಸಿರು



ಚಿಕ್ಕಬಳ್ಳಾಪುರ: ಮಕ್ಕಳ ಪಾಲಿಗೆ ಅಪ್ಪ ಅಮ್ಮನೇ ನಿಜವಾದ ದೇವರು ಎಂಬುದು ಸುಳ್ಳಲ್ಲ. ಮೋಟಪ್ಪ ಹೆಸರಿನ ನನ್ನಪ್ಪ ನಾವು 5 ಮಂದಿ ಮಕ್ಕಳ ಬದುಕಿನ ಶಕ್ತಿಯಾದರೆ, ಸಹನಾಮೂರ್ತಿ ತಾಯಿ ಕರಗಮ್ಮ ನಮ್ಮ ಬಾಳಿನ ಉಸಿರಾಗಿದ್ದಾರೆ ಎಂದು ಪತ್ರಕರ್ತ ಹಾಗೂ ಉಪನ್ಯಾಸಕ ಮುನಿರಾಜು. ಎಂ ಅರಿಕೆರೆ ತಿಳಿಸಿದರು.

ಶಿಡ್ಲಘಟ್ಟ ತಾಲೂಕಿನ ಚೀಮಂಗಲ ಸರಕಾರಿ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್ಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ತಂದೆಯ ಹೆಸರಿನಲ್ಲಿ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆನಗದು ಬಹುಮಾನ ನೀಡಿ ಪುರಸ್ಕರಿಸಿ ಪ್ರೋತ್ಸಾಹಿಸಿದ ನಂತರ ಅವರು ಮಾತನಾಡಿದರು.

ನಮ್ಮ ತಂದೆತಾಯಿ ಶಾಲೆಯ ಮುಖ ನೋಡಿದವರಲ್ಲ. ಅವರಿವರ ಮನೆಯಲ್ಲಿ ಜೀತಗಾರಿಕೆ ಕೆಲಸ ಮಾಡಿಕೊಂಡು, ನಂತರದಲ್ಲಿ ಕೂಲಿ ನಾಲಿ ಮಾಡಿದರೂ ನಾನು ನನ್ನ ತಂಗಿ ತಮ್ಮ ಮೂರು ಮಕ್ಕಳನ್ನು ಉನ್ನತ ಶಿಕ್ಷಣದವರೆಗೆ ಓದಿಸಿ ಉದ್ಯೋಗ ಪಡೆಯುವಂತೆ ಮಾಡಿದ್ದಾರೆ. ಇವರ ಋಣವನ್ನು ತೀರಿಸುವ ಸಣ್ಣ ಪ್ರಯತ್ನವೇ ಈ ಪ್ರತಿಭಾ ಪುರಸ್ಕಾರ. 570 ಅಂಕಗಳಿಸಿದ ರೇವಂತ್,456 ಅಂಕಗಳಿಸಿದ ನಯನ,450 ಅಂಕಗಳಿಸಿದ ಜಯಶ್ರೀ ಇವರನ್ನು ಸನ್ಮಾನಿಸುವ ಮೂಲಕ ತಂದೆಯನ್ನೇ ಸನ್ಮಾನಿಸಿದ ಭಾವ ನನ್ನಲ್ಲಿ ಮೂಡಿದೆ ಎಂದರು. ಚೆನ್ನಾಗಿ ಓದಿ ಒಳ್ಳೆಯ ಅಂಕಗಳಿಸಿದರೆ,ಇಲ್ಲವೇ ಉದ್ಯೋಗಕ್ಕೆ ಸೇರಿ ಕೈತುಂಬ ಸಂಬಳ ಪಡೆದಾಕ್ಷಣ ಶಿಕ್ಷಣಕ್ಕೆ ಸಾರ್ಥಕತೆ ಬರುವುದಿಲ್ಲ.ಇವೆಲ್ಲದರ ಜತೆಗೆ ಕಷ್ಟದಲ್ಲಿ ಓದುವ ವಿದ್ಯಾರ್ಥಿಗಳನ್ನು ಗುರ್ತಿಸಿ ಓದಿಗೆ ನೆರವು ನೀಡುವುದು,ತಂದೆ ತಾಯಿ, ಗುರುಹಿರಿಯರಿಗೆ ಗೌರವ ಕೊಡುವುದೇ ನಿಜವಾದ ಶಿಕ್ಷಣವಾಗಿದೆ.ನೀವೆಲ್ಲಾ ಇದನ್ನು ತಪ್ಪದೆ ಪಾಲಿಸಿ ಎಂದರು.

ಗುರುಗಳ ಮಾರ್ಗದರ್ಶನ ಮತ್ತು ಸತತ ಪರಿಶ್ರಮವೇ ಸಾಧನೆಯ ಕೀಲಿಕೈ. ಸರಕಾರಿ ಶಾಲೆಗಳಲ್ಲಿ ಪ್ರತಿಭಾವಂತ ಬೋಧಕವರ್ಗವಿದೆ. ಇವರ ಗರಡಿಯಲಿ ಓದಿರುವ ಸಾಕಷ್ಟು ಮಕ್ಕಳು ಇಂದು ಉನ್ನತವಾದ ಸ್ಥಾನಮಾನಗಳನ್ನು ಅಲಂಕರಿಸಿದ್ದಾರೆ. ಹೀಗಾಗಿ ಶೈಕ್ಷಣಿಕ ಉನ್ನತಿ ಯೊಂದಿಗೆ ಬದುಕಿನಲ್ಲಿ ಮಾನವೀಯ ಮೌಲ್ಯಗಳಿಗೂ ಜೀವತುಂಬಬೇಕಿದೆ ಎಂದು ಕಿವಿ ಮಾತು ಹೇಳಿದರು.

ಮುಖ್ಯೋಪಾಧ್ಯಾಯ ಶಿವಶಂಕರ್ ಮಾತನಾಡಿ ಎಸ್‌ಎಸ್‌ಎಲ್‌ಸಿ ಎಂಬುದು ವಿದ್ಯಾರ್ಥಿಗಳ ಬದುಕಿಗೆ ತಿರುವು ನೀಡುವ ಹಂತವಾಗಿದೆ.ನಿರಂತರ ಕಲಿಕೆ, ಕಲಿತಿದ್ದರ ಪುನರ್ಮನನ,ಗುಂಪು ಚರ್ಚೆ,ಮೌನಓದು,ಕಠಿಣ ವಿಷಯಗಳ ಬಗ್ಗೆ ಗುರುಗಳಿಂದ ಪರಿಹಾರ ಕಂಡುಕೊಂಡು ನಿರಾಳವಾಗುವುದು,ಪರೀಕ್ಷೆಯ ದಿನ ಅಗತ್ಯ ಸಲಕರಣೆಗಳೊಂದಿಗೆ ಒಂದು ಗಂಟೆ ಮುಂಚೆಯೇ ಕೇಂದ್ರಕ್ಕೆ ತೆರಳುವುದು, ಸಾವಧಾನವಾಗಿ ಪರೀಕ್ಷೆ ಬರೆಯುವ ಬಗ್ಗೆ ತಿಳಿಸಿಕೊಟ್ಟರಲ್ಲದೆ ನಿಮ್ಮ ಬದುಕು ಉಜ್ವಲವಾಗಲಿ ಎಂದು ಹಾರೈಸಿದರು.

ತಾಲೂಕು ಪಂಚಾಯಿತಿ ಮಾಜಿ ಸದಸ್ಯ,ಸಮಾಜ ಸೇವಕ ಜಿ.ಮುನಿರಾಜು ಮಾತನಾಡಿ ಹುಟ್ಟಿದ ಮೇಲೆ ಸಾಯಲೇ ಬೇಕು. ಸಾಯುವ ಮೊದಲು ಸಾಧನೆ ಮಾಡಿ ಸಾಯೋಣ.ಅಂಬೇಡ್ಕರ್ ಅಬ್ದುಲ್ ಕಲಾಂ,ಲತಾಮಂಗೇಶ್ಕರ್ ಬದುಕು ನಿಮಗೆ ದಾರಿದೀಪವಾಗಲಿ.ಪರೀಕ್ಷೆಗೆ ಹೆದರಿ ಸಾಯುವುದಕ್ಕಿಂತ ಇದ್ದು ಜಯಿಸುವುದೇ ನಿಜವಾದ ಸಾಧನೆಯಾಗಲಿದೆ.ನಿಮ್ಮ ಗುರುಗಳು ನಿಮ್ಮ ಮೇಲಿಟ್ಟುರುವ ವಿಶ್ವಾಸ, ಉತ್ತಮ ಫಲಿತಾಂಶಕ್ಕಾಗಿ ಹಾಕಿರುವ ಶ್ರಮ ವ್ಯರ್ಥವಾಗದಂತೆ ನೋಡಿಕೊಳ್ಳಿ,ನಿಮ್ಮ ಸಾಧನೆ ನಿಮಗಷ್ಟೇ ಅಲ್ಲದೆ ಶಾಲೆಗೆ ಗೌರವತರುವಂತಾಗಲಿ ಎಂದು ಹಾರೈಸಿದರು. ಗಣಿತ ಶಿಕ್ಷಕ ಶಿವಕುಮಾರ್, ಸಿಆರ್‌ಪಿ ಹೇಮಲತಾ, ಶಿಕ್ಷಕರ ಸಂಘದ ಅಧ್ಯಕ್ಷೆ ಸರಸ್ವತಮ್ಮ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಎದುರಿಸುವ ಸರಳ ವಿಧಾನಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ನಿಲಯಪಾಲಕ ಮಲ್ಲಿಕಾರ್ಜುನ, ಸ್ಥಳೀಕ ಉತ್ತಮಚಂದ್ ಮಾತನಾಡಿದರು.

ತಾಟಪರ್ತಿ ಮುನಿಯಪ್ಪ ಮಾತನಾಡಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ90ಕ್ಕಿಂತ ಹೆಚ್ಚಿನ ಅಂಕಗಳಿಸುವ ಎಲ್ಲಾ ವಿದ್ಯಾರ್ಥಿಗಳಿಗೆ ತಲಾ 5ಸಾವಿರ ನಗದು ಬಹುಮಾತ ನೀಡುವುದಾಗಿ ಘೋಷಣೆ ಮಾಡಿದರು.

ಇದೇ ವೇಳೆ ನವೋದಯ ವಸತಿ ಶಾಲೆಯ ಮುಖ್ಯ ಶಿಕ್ಷಕ ಸತ್ಯನಾರಾಯಣ್ ಅವರನ್ನು ಸನ್ಮಾನಿಸಲಾಯಿತು. ಶಾಲೆಗೆ ಶೇ 100 ಹಾಜರಾತಿಯುಳ್ಳ 6 ವಿದ್ಯಾರ್ಥಿಗಳು, ರಾಜ್ಯಮಟ್ಟದ ಪೂರ್ವಸಿದ್ಧತಾ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ 3 ಮಂದಿ ವಿದ್ಯಾರ್ಥಿಗಳನ್ನು ಕೂಡ ಸನ್ಮಾನಿಸಲಾಯಿತು. ಇದೇ ವೇಳೆ ಪ್ರವೇಶ ಪತ್ರ ಹಾಗೂ ಪರೀಕ್ಷಾ ಸಲಕರಣೆಗಳನ್ನು ಕೂಡ ವಿದ್ಯಾರ್ಥಿಗಳಿಗೆ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಉಮೇಶ್,ದೇವಪ್ಪನಗುಡಿ ಪ್ರೌಢಶಾಲೆಯ ಶಿಕ್ಷಕಿ ಮಂಜುಳ, ಶಿಕ್ಷಕರಾದ ಶ್ರೀನಿವಾಸ್, ಪ್ರದೀಪ್, ಮತ್ತಿತರರು ಇದ್ದರು.

# ಕ್ರೀಡಾ ಸಾಧಕರಿಗೆ ಉದ್ಯೋಗ ಮೀಸಲಾತಿ: ಕ್ರಾಂತಿಕಾರಕ ಹೆಜ್ಜೆ

**ತುಮಕೂರು:** ರಾಜ್ಯ ಸರ್ಕಾರವು ಅಂತರರಾಷ್ಟ್ರೀಯ ಮಟ್ಟದಲ್ಲಿ ಕ್ರೀಡಾ ಸಾಧನೆಗೈದ ಕ್ರೀಡಾಪಟುಗಳಿಗೆ ಸರ್ಕಾರಿ ನೌಕಾರಿಯಲ್ಲಿ ಉದ್ಯೋಗ ಮೀಸಲಾತಿ ನೀಡುವುದು ಕ್ರೀಡಾಪಟುಗಳಿಗೆ ಪ್ರೇರಕ ಶಕ್ತಿಯಾಗಿದೆ. ಇದರಿಂದ ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಿನ ಸಾಧನೆ ಮಾಡಲು ಉತ್ತೇಜನ ದೊರೆದಂತಾಗಿದೆ ಎಂದು ಕ್ರೀಡಾ ಕ್ಷೇತ್ರದಲ್ಲಿ ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿ ವಿವಿಧ ಇಲಾಖೆಗಳಲ್ಲಿ ನೌಕರಿ ಪಡೆದಿರುವ ಅಂತಾರಾಷ್ಟ್ರೀಯ ಹಾಕಿ ಕ್ರೀಡಾಪಟು ನಿಕ್ಕಿನ್ ತಿಮ್ಮಯ್ಯ, ಕಬಡ್ಡಿ ಕ್ರೀಡಾಪಟು ಎನ್.ಉಷಾರಾಣಿ, ಏಷ್ಯನ್ ಗೇಮ್ಸ್ ವಿಜೇತೆ ಓ.ಸುಷ್ಮಿತಾ ಪವಾರ್, ಅಥ್ಲೆಟಿಕ್ಸ್ ಕ್ರೀಡಾ ಸಾಧಕರಾದ ರಕ್ಷಿತಾ ರಾಜು, ವಿ.ರಾಧಾ ಹಾಗೂ ಎಂ.ಎಸ್. ಶರತ್ ಹಾಗೂ ವಿಶೇಷಚೇತನ ಕ್ರೀಡಾಪಟುಗಳ ಅಥ್ಲೆಟಿಕ್ಸ್ ತರಬೇತಿದಾರ ರಾಹುಲ್ ಬಾಲಕೃಷ್ಣ ಅವರು ಮುಖ್ಯಮಂತ್ರಿಗಳಿಗೆ ಪತ್ರ ಬರೆದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ತಮ್ಮ ಕ್ರೀಡಾ ಸಾಧನೆಯನ್ನು ಗುರುತಿಸಿ ರಾಜ್ಯ ಸರ್ಕಾರವು ಸರ್ಕಾರಿ ನೌಕರಿಯನ್ನು ನೀಡುವ ಮೂಲಕ ಕ್ರಾಂತಿಕಾರಕ ಹೆಜ್ಜೆಯನ್ನಿಟ್ಟಿದೆ ಎಂದು ಸರ್ಕಾರದಿಂದ ದೊರೆತಿರುವ ಪ್ರೋತ್ಸಾಹದ ಬಗ್ಗೆ ಕ್ರೀಡಾ ಕ್ಷೇತ್ರದಲ್ಲಿ ಅಂತರಾಷ್ಟ್ರೀಯ ಮಟ್ಟದ ವಿಜೇತರಾಗಿ ರಾಜ್ಯ ಹಾಗೂ ರಾಷ್ಟ್ರಕ್ಕೆ ಕೀರ್ತಿ ತಂದಿರುವ ರಾಜ್ಯದ ಕ್ರೀಡಾಪಟುಗಳು ಹಂಚಿಕೊಂಡಿರುವ ಮೆಚ್ಚುಗೆಯ ಮಾತುಗಳನ್ನು ಲೇಖನ ರೂಪದಲ್ಲಿ ನೀಡಲಾಗಿದೆ.



**ನಿಕ್ಕಿನ್ ತಿಮ್ಮಯ್ಯ:** ಕೊಡಗು ಜಿಲ್ಲೆ ವಿರಾಜಪೇಟೆ ಚಂಬೆಬೆಳ್ಳೂರಿನ ನಿಕ್ಕಿನ್ ತಿಮ್ಮಯ್ಯ ಅವರು ಗ್ರಾಮೀಣ ಪ್ರದೇಶದಿಂದ ಬಂದ ನಾನು ಹಾಕಿ ಕ್ರೀಡೆಯಲ್ಲಿ ಅಂತರರಾಷ್ಟ್ರೀಯ ಮಟ್ಟದ ಸಾಧನೆ ಮಾಡಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಬೆನ್ನೆಲುಬಾಗಿ ನಿಂತಿದೆ. ಸರ್ಕಾರವು ಪ್ರತಿಯೊಂದು ಕ್ರೀಡಾ ಸಾಧನೆಗೂ ನಗದು ಪ್ರಶಸ್ತಿ ನಿಗಧಿಪಡಿಸಿರುವುದು ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚು ಸಾಧನೆ ಮಾಡಲು ಪ್ರೇರಕವಾಗಿದೆ. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕ್ರೀಡಾಪಟುಗಳಿಗೆ ಶೇ.2ರಷ್ಟು ಹಾಗೂ ಪೊಲೀಸ್ ಇಲಾಖೆಯಲ್ಲಿ ಶೇ.3ರಷ್ಟು ಉದ್ಯೋಗ ಮೀಸಲಾತಿ ನೀಡಿರುವುದು ಕ್ರಾಂತಿಕಾರಕ ಹೆಜ್ಜೆಯಾಗಿದೆ.

ಏಷ್ಯನ್ ಗೇಮ್ಸ್–2014 ಮತ್ತು ಕಾಮನ್ ವೆಲ್ತ್ ಗೇಮ್ಸ್–2014ರಲ್ಲಿ ಪದಕ ವಿಜೇತ ಭಾರತ ತಂಡದ ಭಾಗವಾಗಿದ್ದ ನನಗೆ ರಾಜ್ಯ ಸರ್ಕಾರದ ಅಬಕಾರಿ ಇಲಾಖೆ ಉಪಾಧೀಕ್ಷಕರ ಹುದ್ದೆಗೆ ನೇಮಕಾತಿ ಅವಕಾಶ ನೀಡಿರುವುದು ಅತ್ಯಾನಂದ ತಂದಿದೆ ಎಂದು ಹೇಳುವ ಮೂಲಕ ಉತ್ತಮ ಅವಕಾಶ ನೀಡಿದ ರಾಜ್ಯ ಸರ್ಕಾರಕ್ಕೆ ಕೃತಜ್ಞತೆ ಸೂಚಿಸಿದ್ದಾರೆ.



**ಉಷಾರಾಣಿ ಎನ್.:** ಯಶವಂತಪುರ ನಿವಾಸಿ ಅಂತರಾಷ್ಟ್ರೀಯ ಕಬಡ್ಡಿ ಕ್ರೀಡಾಪಟು ಉಷಾರಾಣಿ ಅವರು ತಮ್ಮ ಕ್ರೀಡಾ ಸಾಧನೆಯಿಂದ ಪೊಲೀಸ್ ಇಲಾಖೆಯಲ್ಲಿ ಕಾನ್ಸ್‌ಟೇಬಲ್ ಹುದ್ದೆಯಿಂದ ಸಬ್ ಇನ್ಸ್‌ಪೆಕ್ಟರ್ ಹುದ್ದೆಗೆ ಬಡ್ತಿ ದೊರೆತಿದೆ.

2017ರ ಧಾರವಾಡದಲ್ಲಿ ನಡೆದ ರಾಜ್ಯ ಒಲಂಪಿಕ್ಸ್‌ನಲ್ಲಿ ಒಲಂಪಿಕ್ಸ್/ ಪ್ಯಾರಾಲಿಂಪಿಕ್ಸ್, ಏಷ್ಯನ್ ಗೇಮ್ಸ್, ಕಾಮನ್‌ವೆಲ್ತ್ ಗೇಮ್ಸ್‌ಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಎ–ಬಿ ವೃಂದದ ಹುದ್ದೆ ನೀಡಲಾಗುವುದು ಎಂದು ರಾಜ್ಯದ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ಘೋಷಿಸಿದಂತೆ 2024ರ ಆಗಸ್ಟ್ 3ರಂದು ಸಿದ್ಧರಾಮಯ್ಯ ಅವರು ನನಗೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಹಾಯಕ ನಿರ್ದೇಶಕರ ಹುದ್ದೆಯ ನೇಮಕಾತಿ ಪತ್ರ ನೀಡಲಾಗಿದೆ. ಸರ್ಕಾರವು ಕ್ರೀಡಾ ಸಾಧಕರಿಗೆ ನೀಡಿರುವ ಉದ್ಯೋಗ ಮೀಸಲಾತಿ ಸೌಲಭ್ಯದಿಂದ ರಾಜ್ಯದ ಕ್ರೀಡಾಪಟುಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ.

**ಓ.ಸುಷ್ಮಿತಾ ಪವಾರ್** : ಏಷ್ಯನ್ ಗೇಮ್ಸ್ ಕಬಡ್ಡಿ ಚಿನ್ನದ ಪದಕ ವಿಜೇತರು ಹಾಗೂ ಬಿ. ವೃಂದದ ಗೆಜೆಟೆಡ್ ಹುದ್ದೆಗೆ ಆಯ್ಕೆಯಾಗಿರುವ ಸುಷ್ಮಿತಾ ಪವಾರ್ ಅವರು ತಮ್ಮ ಅಭಿಪ್ರಾಯದಲ್ಲಿ ಪೊಲೀಸ್ ಇಲಾಖೆಯಲ್ಲಿ ಮುಖ್ಯ ಪೇದೆಯಾಗಿ ಕಾರ್ಯ ನಿರ್ವಹಿಸುತ್ತಿದ್ದ ನಾನು 2014ರಲ್ಲಿ ದಕ್ಷಿಣ ಕೊರಿಯಾ ಇಂಚನ್‌ನಲ್ಲಿ ನಡೆದ ಏಷ್ಯನ್ ಗೇಮ್ಸ್‌ನಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿ ಚಿನ್ನದ ಪದಕ ಗಳಿಸಿದ್ದೇನೆ. 2014ರಲ್ಲಿ ಏಕಲವ್ಯ ಪ್ರಶಸ್ತಿ, ಕೆಂಪೇಗೌಡ ಪ್ರಶಸ್ತಿ, ಮುಖ್ಯಮಂತ್ರಿಗಳ ಪದಕ, ಕೆಓಎ ಪ್ರಶಸ್ತಿ ಹಾಗೂ 2024ರಲ್ಲಿ ಕರ್ನಾಟಕ ಸಂಭ್ರಮ–50 ಸುವರ್ಣ ಮಹೋತ್ಸವ ಪ್ರಶಸ್ತಿಗೆ ಭಾಜನಳಾಗಿರುತ್ತೇನೆ. ರಾಜ್ಯ ಸರ್ಕಾರದ ಈ ಉತ್ತೇಜನ ಇದೇ ರೀತಿಯಲ್ಲಿ ಮುಂದಿನ ಯುವ ಕ್ರೀಡಾಪಟುಗಳಿಗೆ ದೊರೆಯಬೇಕು. ಏಷ್ಯನ್ ಗೇಮ್ಸ್ ವಿಜೇತಳಾದಾಗ 25ಲಕ್ಷ ರೂ.ಗಳ ನಗದು ಬಹುಮಾನ ನೀಡಿ ರಾಜ್ಯ ಸರ್ಕಾರವು ಪ್ರೋತ್ಸಾಹ ನೀಡಿದೆಯಲ್ಲದೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಸಹಾಯಕ ನಿರ್ದೇಶಕರಾಗಿ ಕಾರ್ಯ ನಿರ್ವಹಿಸಲು ಅನುವು ಮಾಡಿಕೊಟ್ಟಿದೆ ಎಂದು ಹೇಳುವ ಮೂಲಕ ಸರ್ಕಾರಕ್ಕೆ ಧನ್ಯವಾದ ಅರ್ಪಿಸಿದ್ದಾರೆ.


**ರಕ್ಷಿತಾ ರಾಜು:** ಚಿಕ್ಕ ಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕು ಬಾಳೂರುಗುಡ್ಡನಹಳ್ಳಿಯ ಅಂಧ ಅಂತರಾಷ್ಟ್ರೀಯ ಕ್ರೀಡಾಪಟು ಹಾಗೂ ಪ್ಯಾರಾ ಒಲಂಪಿಯನ್ ರಕ್ಷಿತಾ ರಾಜು ಅವರು ನನ್ನ ರಾಷ್ಟ್ರ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾ ಸಾಧನೆಯನ್ನು ಗುರುತಿಸಿ ಅಂತರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಅವಕಾಶ ನೀಡಲಾಗಿದೆ. 2018ರಲ್ಲಿ ಜಕಾರ್ತದಲ್ಲಿ ಜರುಗಿದ ಪ್ಯಾರಾ ಏಷಿಯನ್ ಗೇಮ್ಸ್ ಹಾಗೂ 2019ರ ಜೂನಿಯರ್ ವರ್ಲ್ಡ್ ಚಾಂಪಿಯನ್ ಶಿಪ್‌ನಲ್ಲಿ ಚಿನ್ನದ ಪದಕ ಪಡೆದಿದ್ದೇನೆ.



2023ರ ಚೀನಾ ದೇಶದ ಹ್ಯಾಂಗ್ಝೋನಲ್ಲಿ ನಡೆದ ಪ್ಯಾರಾ ಏಷಿಯನ್ ಗೇಮ್ಸ್‌ನಲ್ಲಿ ಚಿನ್ನದ ಪದಕ ಲಭಿಸಿದ್ದಕ್ಕೆ ಸರ್ಕಾರವು 25ಲಕ್ಷ ರೂ. ಬಹುಮಾನ ನೀಡಿ ಗೌರವಿಸಿದೆಯಲ್ಲದೆ, ಪ್ಯಾರಿಸ್ ಒಲಂಪಿಕ್ಸ್‌ನಲ್ಲಿ ಭಾಗವಹಿಸಲು ತರಬೇತಿಗಾಗಿ 25ಲಕ್ಷ ರೂ.ಗಳ ಪ್ರೋತ್ಸಾಹಧನವನ್ನು ನೀಡಿದೆ. 2024ರ ಪ್ಯಾರಿಸ್ ಪ್ಯಾರಾ ಒಲಂಪಿಕ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿರುವುದು ನನ್ನ ಜೀವನದ ಹೆಮ್ಮೆಯ ಕ್ಷಣವಾಗಿದೆ.


ರಾಜ್ಯ ಸರ್ಕಾರವು ಒಲಂಪಿಕ್ಸ್/ಪ್ಯಾರಾ ಒಲಂಪಿಕ್ಸ್ ಪದಕ ವಿಜೇತರಿಗೆ ಎ–ವೃಂದದ ಹುದ್ದೆಗಳನ್ನು ನೀಡುತ್ತಿರುವುದು ನನಗೆ ಮುಂದಿನ ಒಲಂಪಿಕ್ಸ್‌ನಲ್ಲಿ ಪದಕ ಗೆಲ್ಲಲು ಸ್ಫೂರ್ತಿಯಾಗಿದೆ ಎಂದು ಸರ್ಕಾರದ ಬಗ್ಗೆ ಬಣ್ಣನೆಯ ಮಾತುಗಳನ್ನು ಹೇಳಿದ್ದಾರೆ.

**ವಿ. ರಾಧಾ:** ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ಬೊಮ್ಮಸಮುದ್ರದ ಅಂಧ ಅಂತರ ರಾಷ್ಟ್ರೀಯ ಕ್ರೀಡಾಪಟು ವಿ.ರಾಧಾ ಅವರು ತಮ್ಮ ಮಾತುಗಳಲ್ಲಿ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತಾ, 2017ರ ದುಬೈನಲ್ಲಿ ನಡೆದ ಯೂತ್ ಏಷ್ಯನ್ ಗೇಮ್ಸ್‌ನಲ್ಲಿ ಬೆಳ್ಳಿಪದಕ ಹಾಗೂ 2018ರಲ್ಲಿ ಜಕಾರ್ತದಲ್ಲಿ ನಡೆದ ಪ್ಯಾರಾ ಏಷ್ಯನ್ ಗೇಮ್ಸ್‌ನಲ್ಲಿ ಬೆಳ್ಳಿ ಹಾಗೂ ಕಂಚಿನ ಪದಕ ಪಡೆದಿರುತ್ತೇನೆ. ಪದಕಗಳನ್ನು ಪಡೆದ ನನಗೆ ಪ್ಯಾರಿಸ್ ಒಲಂಪಿಕ್ಸ್‌ನಲ್ಲಿ ಭಾಗವಹಿಸಲು ತರಬೇತಿಗಾಗಿ 25ಲಕ್ಷ ರೂ. ಪ್ರೋತ್ಸಾಹಧನವನ್ನು ಸಹ ನೀಡಲಾಗಿದೆ. ಗ್ರಾಮೀಣ ಪ್ರದೇಶದಿಂದ ಬಂದ ನನ್ನ ಕ್ರೀಡಾ ಸಾಧನೆ ಗುರುತಿಸಿ ಕಾರ್ಮಿಕ ಇಲಾಖೆಯಲ್ಲಿ ಬಿ–ವೃಂದದ ಕಾರ್ಮಿಕ ಅಧಿಕಾರಿಯಾಗಿ ಸೇವೆ ಸಲ್ಲಿಸಲು ಅವಕಾಶ ನೀಡಿದ ಸರ್ಕಾರಕ್ಕೆ ಧನ್ಯವಾದಗಳನ್ನು ಅರ್ಪಿಸಿದ್ದಾರೆ.



**ಎಂ.ಎಸ್. ಶರತ್:** ತುಮಕೂರು ಜಿಲ್ಲೆ ತಿಪಟೂರು ತಾಲ್ಲೂಕು ಮಾಕನಹಳ್ಳಿಯ ಅಂಧ ಅಂತರರಾಷ್ಟ್ರೀಯ ಕ್ರೀಡಾಪಟು 2019ರಲ್ಲಿ ಸ್ವಿಡ್ಜರ್ಲೆಂಡ್‌ನಲ್ಲಿ ನಡೆದ ಜೂನಿಯರ್ ಪ್ಯಾರಾ ಅಥ್ಲೆಟಿಕ್ಸ್ ವಿಶ್ವ ಚಾಂಪಿಯನ್ ಶಿಪ್‌ನಲ್ಲಿ ಚಿನ್ನದ ಪದಕ, 2023ರ ಚೀನಾದ ಹ್ಯಾಂಗ್ಝೋನಲ್ಲಿ ನಡೆದ ಪ್ಯಾರಾ ಏಷಿಯನ್ ಗೇಮ್ಸ್‌ನಲ್ಲಿ 1500 ಮೀಟರ್ ಅಥ್ಲೆಟಿಕ್ಸ್‌ನಲ್ಲಿ ಬೆಳ್ಳಿಪದಕ ವಿಜೇತನಾದ ನನ್ನ ಕ್ರೀಡಾ ಸಾಧನೆ ಆಧರಿಸಿ 2024ರ ಆಗಸ್ಟ್ 3ರಂದು ಮುಖ್ಯ ಮಂತ್ರಿ ಸಿದ್ಧರಾಮಯ್ಯ ಅವರು ಸಹಕಾರ ಲೆಕ್ಕ ಪರಿಶೋಧನಾ ಇಲಾಖೆಯ ಸಹಾಯಕ ನಿರ್ದೇಶಕ ಹುದ್ದೆಗೆ ನೇಮಕಾತಿ ನೀಡಿ ಉದ್ಯೋಗಾವಕಾಶ ಕಲ್ಪಿಸಿದ್ದಾರೆ. ವಿಶೇಷ ಚೇತನರ ಸಬಲೀಕರಣಕ್ಕಾಗಿ ಸರ್ಕಾರ ಇಟ್ಟಿರುವ ಹೊಸ ಹೆಜ್ಜೆ ದೇಶಕ್ಕೆ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

**ತರಬೇತುದಾರ ರಾಹುಲ್ ಬಾಲಕೃಷ್ಣ**



ಬೆಂಗಳೂರು ರಾಜರಾಜೇಶ್ವರಿ ನಗರದ ರೈಲ್ವೆ ಇಲಾಖೆ ತರಬೇತುದಾರರಾದ ರಾಹುಲ್ ಬಾಲಕೃಷ್ಣ ಅವರು 2016 ರಿಂದ ವಿಶೇಷ ಚೇತನ ಕ್ರೀಡಾಪಟುಗಳಿಗೆ 1500 ಮೀಟರ್ ಮಧ್ಯಮ ದೂರದ ಓಟದಲ್ಲಿ ತರಬೇತಿ ನೀಡುತ್ತಿದ್ದಾರೆ. ಇವರು ತರಬೇತಿ ನೀಡಿರುವ ಕು.ರಕ್ಷಿತಾ ರಾಜು, ರಾಧಾ ವಿ., ಎಂ.ಎಸ್. ಶರತ್ ಕ್ರೀಡಾಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ್ದಾರೆ.

ಸರ್ಕಾರದ ದೈಹಿಕ ಸಶಕ್ತರೊಂದಿಗೆ ವಿಶಿಷ್ಟಚೇತನರನ್ನು ಸಮಾನವಾಗಿ ಗುರುತಿಸಿ ನಗದು ಪುರಸ್ಕಾರ, ಉದ್ಯೋಗಾವಕಾಶಕ್ಕೆ ಪರಿಗಣಿಸುತ್ತಿರುವುದು ಅಭಿನಂದನೀಯ. ವಿಶಿಷ್ಟಚೇತನ ಕ್ರೀಡಾಪಟುಗಳಿಗೆ ವಿವಿಧ ರೀತಿಯಲ್ಲಿ ಪ್ರೋತ್ಸಾಹ ನೀಡುತ್ತಿರುವ ರಾಜ್ಯ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ.

## ಧ್ರುವ ಆಸರೆ ಫೌಂಡೇಶನ್ ವತಿಯಿಂದ ಪರೀಕ್ಷಾ ಪ್ಯಾಡ್,ಪೆನ್ನು ವಿತರಣೆ



**ಬಳ್ಳಾರಿ:** ತಾಲೂಕಿನ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಕಕ್ಕ ಬೇವಿನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಧ್ರುವ ಆಸರೆ ಫೌಂಡೇಶನ್ ವತಿಯಿಂದ ಸಂಸ್ಥಾಪಕ ಅಧ್ಯಕ್ಷರಾದ ಎಂ.ಜಿ. ಕನಕ ಅವರ ನೇತೃತ್ವದಲ್ಲಿ ಶಾಲೆಯ ಮುಖ್ಯ ಶಿಕ್ಷಕಿಯಾದ ವಿ.ಶೇಷಮ್ಮ ಮತ್ತು ಶಿಕ್ಷಕರುಗಳ ಸಮ್ಮುಖದಲ್ಲಿ ಕಕ್ಕ ಬೇವಿನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 1ನೇ ತರಗತಿಯಿಂದ 7ನೇ ತರಗತಿಯ 250 ಶಾಲಾ ಮಕ್ಕಳಿಗೆ ಉಚಿತವಾಗಿ ಪರೀಕ್ಷಾ ಪ್ಯಾಡ್ (ಇಥಚಿಟ ಕಚಿಜ) ಮತ್ತು ಪೆನ್ನುಗಳನ್ನು ವಿಚಾರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಎಂ.ಜಿ ಕನಕ ಅವರು ಮಾತನಾಡಿ ನಾನು ಯಾವುದೇ ಸಂಘ ಸಂಸ್ಥೆಗಳಲ್ಲಿ ಹುದ್ದೆಗಳನ್ನು ಪಡೆಯದೆ ಸುಮಾರು 15 ವರ್ಷದಿಂದ ಇಲ್ಲಿಯವರೆಗೆ ಸಮಾಜ ಸೇವೆ ಮಾಡುತ್ತಾ ಮತ್ತು ಹಲವಾರು ಕೆಲಸಗಳನ್ನು ಮಾಡಿರುವೆ, ಈಗ ನಾನು ಚಲನಚಿತ್ರ ನಟ ಧ್ರುವ ಸರ್ಜಾ ಅವರ ಅಭಿಮಾನಿಯಾಗಿ ಅವರ ಹೆಸರಿನಲ್ಲಿ ಅದು ಬಳ್ಳಾರಿಯಲ್ಲಿ ಧ್ರುವ ಆಸರೆ ಫೌಂಡೇಶನ್ ಎಂಬ ಸಂಸ್ಥೆಯನ್ನು ಕಟ್ಟಿಕೊಂಡು ಸಮಾಜ ಸೇವೆಯಲ್ಲಿ ಮುಂದಾಗಿದ್ದೇನೆ, ಇನ್ನಷ್ಟು ಸಮಾಜ ಸೇವೆ ಮತ್ತು ಕೆಲಸ ಕಾರ್ಯಗಳನ್ನು ಮಾಡಲು ಆ ದೇವರು ನನಗೆ ಶಕ್ತಿ ಕೊಡಲಿ ಎಂದು ದೇವರಲ್ಲಿ ಬೇಡಿಕೊಂಡು ಇಂಥ ಒಂದು ಸಣ್ಣ ಪುಟ್ಟ ಕಾರ್ಯಕ್ರಮಗಳನ್ನು ಮಾಡುತ್ತಿದ್ದೇನೆ, ನೀವೆಲ್ಲರೂ ಚೆನ್ನಾಗಿ ಓದಿ ಮುಂದಿನ ದಿನಗಳಲ್ಲಿ ಈ ದೇಶದ ಪ್ರಜೆಗಳಾಗಬೇಕು ಯಾವ ವ್ಯಕ್ತಿಯನ್ನು ದ್ವೇಷಿಸದೆ ಪ್ರೀತಿಯಿಂದ ಮಾತನಾಡಿಸುತ್ತಾ ಒಂದಿಷ್ಟು ಸಮಾಜಸೇವೆ ಮಾಡುವಲ್ಲಿ ತಾವು ಕೂಡ ಮುಂದಾಗಬೇಕು ಎಂದು ಎಂದು ಪರೀಕ್ಷಾ ಪ್ಯಾಡ್ ಮತ್ತು ಪೆಣ್ಣುಗಳ ವಿತರಣಾ ಕಾರ್ಯಕ್ರಮದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಧ್ರುವ ಆಸರೆ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರಾದ ಎಂಜಿ.ಕನಕ, ಉಮರ್ ಫಾರೂಕ್, ಶಾಲೆಯ ಮುಖ್ಯ ಶಿಕ್ಷಕಿಯಾದ ವಿ.ಶೇಷಮ್ಮ, ಕೆ.ಎಸ್. ಜೆ ಯೂನಿಯನ್ ಜಿಲ್ಲಾಧ್ಯಕ್ಷರು ಹಾಗೂ ವರದಿಗಾರರಾದ ರಮೇಶ ಎನ್ ಎರುಗುಡಿ, ಅಮರಾಪುರ ಗ್ರಾಮ ಪಂಚಾಯತಿ ಸದಸ್ಯರಾದ ಲಕ್ಷ್ಮಿ ರೆಡ್ಡಿ, ರುದ್ರಪ್ಪ, ಲಕ್ಷ್ಮಮ್ಮ, ಕಿರೀಟಪ್ಪ, ಅಹಿಂದ ಆಟೋ ಚಾಲಕ ಘಟಕದ ಅಧ್ಯಕ್ಷ ಆಪ್ತಮಿತ್ರ ಭಾಷಾ, ರಾಮಕೃಷ್ಣ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಗುರು ಶಾಂತಪ್ಪ, ಶಾಲೆಯ ಶಿಕ್ಷಕರಾದ ಹೇಮಲತಾ, ಸುಧಾ, ಪರಿಮಳ, ಮೌನೇಶ್ವರಿ, ಚಂದ್ರಶೇಖರ, ಗ್ರಾಮದ ಮುಖಂಡರಾದ ಬೆಳ್ಳಿ ಸೋಮಲಿಂಗ, ಬಿಕೆ ಲಕ್ಷ್ಮಣ, ಹನುಮಂತರೆಡ್ಡಿ ಸೇರಿದಂತೆ ಶಾಲೆಯ ಮಕ್ಕಳು ಊರಿನ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸಿಸಿ ರಸ್ತೆ ಕಟ್ಟಡಗಳ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ

ಮಾಲೂರು: ತಾಲೂಕಿನ ಹುಂಗೇನಹಳ್ಳಿ ಗ್ರಾಪಂ ವ್ಯಾಪ್ತಿಯಲ್ಲಿ 25 ಕೋಟಿ ರೂಗಳ ವೆಚ್ಚದಲ್ಲಿ ಗ್ರಾಮಗಳ ರಸ್ತೆಗಳ ಅಭಿವೃದ್ಧಿ ಸೇರಿದಂತೆ ಗ್ರಾಮಗಳಲ್ಲಿ ಸಿಸಿ ರಸ್ತೆ ಕಟ್ಟಡಗಳ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಶಾಸಕ ಕೆ ವೈ ನಂಜೇಗೌಡ ಹೇಳಿದರು.



ತಾಲೂಕಿನ ಮಾಲೂರು ಕೋಲಾರ ಮುಖ್ಯ ರಸ್ತೆಯಿಂದ ಚವ್ವೇನಹಳ್ಳಿ ಗ್ರಾಮದ ವರೆಗಿನ 1.2 ಇಟ ರಸ್ತೆಯನ್ನು ಮುಖ್ಯಮಂತ್ರಿಗಳ ವಿಶೇಷ ಅನುದಾನ 40 ಲಕ್ಷ ರೂಗಳ ವೆಚ್ಚದಲ್ಲಿ ಕೈಗೊಂಡಿರುವ ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು.

ಇಲ್ಲಿನ ಸಭೆನಲ್ಲಿ ಗ್ರಾಮಕ್ಕೆ ಈಗಾಗಲೇ 10 ಲಕ್ಷ ಸಿಸಿ ರಸ್ತೆಗೆ ಮಸೀದಿಗೆ 5 ಲಕ್ಷ ಗ್ರಾಮದಲ್ಲಿ ಮತ್ತೆ ಸಿಸಿ ರಸ್ತೆಗಳ ಅಭಿವೃದ್ಧಿಗೆ 10 ಲಕ್ಷ ರೂಗಳು ನೀಡಲಾಗಿದೆ. ಹುಂಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೊಡ್ಡಕಡ್ತೂರು ಚವ್ವೇನಹಳ್ಳಿ, ಮಲ್ಲಿಯಪನಹಳ್ಳಿ ಸೇರಿದಂತೆ ಇನ್ನಿತರೆ ಗ್ರಾಮಗಳ ಅಭಿವೃದ್ಧಿಗೆ ಈಗಾಗಲೇ 25 ಕೋಟಿ ರೂಗಳ ಅನುದಾನವನ್ನು ನೀಡಲಾಗಿದೆ ಮುಖ್ಯ ರಸ್ತೆಗಳ ಅಭಿವೃದ್ಧಿ ಹೊರೆತುಪಡಿಸಿ ತಾಲೂಕಿನಲ್ಲಿ ಗ್ರಾಮಾಂತರ ರಸ್ತೆಗಳ ಅಭಿವೃದ್ಧಿಗೆ 60 ಕೋಟಿ ರೂಗಳನ್ನು ನೀಡಲಾಗಿದ್ದು 25 ಕೋಟಿ ರೂಗಳು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ 10 ಕೋಟಿ ರೂಗಳನ್ನು ಮತ್ತೆ ಮುಖ್ಯಮಂತ್ರಿಗಳು ನೀಡಿದ್ದು ಪ್ರಸ್ತುತ ಬಜೆಟ್ ನಲ್ಲಿ ಸಹ ಗ್ರಾಮಾಂತರ ರಸ್ತೆಗಳ ಅಭಿವೃದ್ಧಿಗೆ 62 ಕಿಲೋಮೀಟರ್ ಅಭಿವೃದ್ಧಿಗೆ ಅನುದಾನವನ್ನು ನೀಡಿದ್ದಾರೆ ಹುಂಗೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಮುಖಂಡರ ಮನವಿ ಮೇರೆಗೆ ರಸ್ತೆಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದೆ. ಈಗಾಗಲೇ ಇಂಡಸ್ಟ್ರಿಯಲ್ ಕಾರಿಡಾರ್ ರಸ್ತೆಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು ಏಪ್ರಿಲ್ 19ಕ್ಕೆ ಟೆಂಡರ್ ತೆರೆಯಲಾಗುವುದು ಈ ರಸ್ತೆಯು ನಾಲ್ಕು ಪತದ ರಸ್ತೆಯಾಗಿದೆ ರಾಜ್ಯದಲ್ಲಿ ನಮ್ಮದೇ ಆದ ಕಾಂಗ್ರೆಸ್ ಪಕ್ಷದ ಸರ್ಕಾರ ಆಡಳಿತದಲ್ಲಿರುವುದರಿಂದ ತಾಲೂಕಿಗೆ ಹೆಚ್ಚಿನ ಅನುದಾನಗಳನ್ನು ತಂದು ತಾಲೂಕನ್ನು ಅಭಿವೃದ್ಧಿಯ ಪಥದತ್ತ ಕೊಂಡಯ್ಯಲಾಗುತ್ತಿದೆ ಎಂದರು. ಈ ಸಂದರ್ಭದಲ್ಲಿ ಹುಂಗೇನಹಳ್ಳಿ ಗ್ರಾಪಂ ಅಧ್ಯಕ್ಷ ನಾರಾಯಣ ರೆಡ್ಡಿ ಉಪಾಧ್ಯಕ್ಷೆ ಗೌರಮ್ಮ, ಸದಸ್ಯರಾದ ಲಿಂಗಾಪುರ ಕೃಷ್ಣಪ್ಪ , ಮಂಜುನಾಥ್ ರೆಡ್ಡಿ, ಯೋಜನಾ ಪ್ರಾಧಿಕಾರ ಸದಸ್ಯರಾದ ಮಂಜುನಾಥ್ ರೆಡ್ಡಿ, ಚಿರಂಜೀವಿ, ಮುಖಂಡರಾದ ಆನೇಪಯರ ಹನುಮಂತಪ್ಪ, ಎಸ್.ವಿ.ಗೋರ್ವರ್ಧನ್ ರೆಡ್ಡಿ, ಚಮಲ್ಲಿಯಪ್ಪನಹಳ್ಳಿ ನಾರಾಯಣಸ್ವಾಮಿ, ಮಲ್ಲಿಕಾರ್ಜುನ್, ಓಬಾಳ ರೆಡ್ಡಿ, ಇಂತಿಯಾಜ್, ಆಂಜನೇಯ ರೆಡ್ಡಿ ಪಿಡಿಒ ಅಲಿಲಿಖಾನ್, ಜಿಪಂ ಇಂಜಿನಿಯರಿಂಗ್ ಉಪ ವಿಭಾಗದ ಎ ಇ ಇ ವಿಶ್ವನಾಥ್ ರೆಡ್ಡಿ ಅಭಿಯಂತರ ಇಮ್ರಾನ್, ಗುತ್ತಿಗೆದಾರ ವೆಂಕಟೇಶ್, ದೊಡ್ಡಮಲ್ಲೆ ಹರೀಶ್ ಗೌಡ ಇನ್ನಿತರರು ಹಾಜರಿದ್ದರು.

## ಸಾಧಕರ ಸಾಧನೆ ಮಕ್ಕಳಲ್ಲಿ ಮೈಗೂಡಿಸಿಕೊಂಡಾಗ ಸದೃಢ ಸಮಾಜ ನಿರ್ಮಾಣ ಸಾಧ್ಯ: ತಿಮ್ಮರಾಜು



ನಾಗಮಂಗಲ: ಮಕ್ಕಳಲ್ಲಿ ಸಾಧಕರ ಸಾಧನೆ ಮಾಡಿದ ಸೇವೆಗಳನ್ನು ಮನನ ಮಾಡಿಕೊಂಡಾಗ ಸದೃಢ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಸಲಹೆಗಾರರಾದ ತಿಮ್ಮರಾಜು ಅವರು ತಿಳಿಸಿದರು.

ಅವರು ನಾಗಮಂಗಲ ತಾಲೂಕುಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ.) ನಾಗಮಂಗಲ . ಮತ್ತು ಮಾನಸ ಪ್ರೌಢಶಾಲೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಪರಮಪೂಜ್ಯ ರಾಜರ್ಷಿ ಡಾ। ಡಿ. ವೀರೇಂದ್ರ ಹೆಗ್ಗಡೆಯವರು ಹಾಗೂ ಮಾತೃಶ್ರೀ ಡಾ। ಹೇಮಾವತಿ ವಿ. ಹೆಗ್ಗಡೆಯವರ ಕೃಪಾಶೀರ್ವಾದಗಳೊಂದಿಗೆ ಹಮ್ಮಿಕೊಳ್ಳಲಾದ ಸ್ವಾಸ್ಥ್ಯ ಸಂಕಲ್ಪ ಯೋಜನೆಯ ಪರಿಚಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜವನ್ನು ನಿರ್ಮಾಣ ಮಾಡುವಲ್ಲಿ ವಿದ್ಯಾರ್ಥಿಗಳ ದುಶ್ಚಟ ದುರಭ್ಯಾಸದಿಂದ ಆಗುವ ದುಷ್ಪರಿಣಾಮದ ಬಗ್ಗೆ ಜಾಗೃತಿ ಹಾಗೂ ಅರಿವು ಮೂಡಿಸುವ "ಸ್ವಾಸ್ಥ್ಯ ಸಂಕಲ್ಪ" ಅವಶ್ಯಕತೆ ಎಂದರು. ವಿದ್ಯಾರ್ಥಿಗಳು ಕುಟುಂಬದ ಕಣ್ಮಣಿಗಳಾಗಿದ್ದು ಪೋಷಕರ ಅಭಿಲಾಷೆಯಂತೆ ಅವರು ವಿದ್ಯಾಭ್ಯಾಸದಲ್ಲಿ ತೊಡಗಿ ಪ್ರಗತಿ ಸಾಧಿಸಬೇಕು. ವಿದ್ಯಾರ್ಥಿಗಳು ತಮ್ಮ ಆರೋಗ್ಯ ಪಾಲನೆಗೆ ಹಲವು ಮೂಲ ತಿಳುವಳಿಕೆಗಳನ್ನು ಗಳಿಸುವ ಅಗತ್ಯವಿದೆ ಎಂದರು.

ಮದ್ಯವ್ಯಸನ, ಗುಟ್ಕಾ, ಧೂಮಪಾನಗಳಿಂದ ಯುವ ಜನತೆಯ ಜೀವನ ಹಾಳಾಗುತ್ತಿದೆ. ಸಹವಾಸ ದೋಷ, ಆಕಸ್ಮಿಕ ಆಕರ್ಷಣೆಗಳ ಕಾರಣ ದುಶ್ಚಟ ಒಮ್ಮೆ ಆರಂಭವಾದರೆ ಬದುಕು ವೈಯಕ್ತಿಕ ಜೀವನದ ಜೊತೆ ಜೊತೆಗೆ ಸಮಾಜದ ಸ್ವಾಸ್ಥ್ಯ ಸಹ ಹಾಳಾಗುತ್ತದೆ ಎಂದು ವಿವರಿಸಿದರು. ವಿದ್ಯಾರ್ಥಿ ಜೀವನದ ದೆಸೆಯಿಂದಲೇ ಉತ್ತಮ ಕ್ರಿಯಾಶೀಲ ಹವ್ಯಾಸಗಳನ್ನು ರೂಢಿಸಿಕೊಂಡು ಉತ್ತಮ ಸಮಾಜ ಕಟ್ಟುವ ಕಾರ್ಯಕ್ರಮಕ್ಕೆ ದೃಢ ಸಂಕಲ್ಪ ಕೈಗೊಳ್ಳಬೇಕು ಎಂದು ಮಾತನಾಡಿದರು.

ಸಮಾರಂಭದಲ್ಲಿ ತಾಲ್ಲೂಕು ಯೋಜನಾಧಿಕಾರಿ ದಿವಾಕರ್, ಬಿಂಡಿಗನವಿಲೆ ಆರೋಗ್ಯ ಇಲಾಖೆ ಶ್ರೀ ಮಹೇಶ್, ಮುಖ್ಯ ಶಿಕ್ಷಕರಾದ ರಿಹನ ಭಾನು, ಶಾಲಾ ಅಧ್ಯಾಪಕ ವೃಂದ, ಮೇಲ್ವಿಚಾರಕರುಹಾಜರಿದ್ದರು.

ಸಭೆಯಲ್ಲಿ ಸೇವಾಪ್ರತಿನಿಧಿ, ಪ್ರೌಢ ಶಾಲೆ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿರು.

## ಫ್ಯಾಷನ್ ಡಿಸೈನರ್ ತರಬೇತಿಗಾಗಿ ಅರ್ಜಿ ಆಹ್ವಾನ

ತುಮಕೂರು: ಕೇಂದ್ರದ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ಹಾಗೂ ದಿ ಅಪರೇಲ್ ಟ್ರೈನಿಂಗ್ ಅಂಡ್ ಡಿಸೈನ್ ಸೆಂಟರ್ ಸಹಯೋಗದಲ್ಲಿ ಉಚಿತವಾಗಿ 6 ತಿಂಗಳ ಫ್ಯಾಷನ್ ಡಿಸೈನರ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವವರು 12ನೇ ತರಗತಿ ಪಾಸಾಗಿದ್ದು, 20 ರಿಂದ 40 ವರ್ಷ ವಯೋಮಾನದವರಾಗಿರಬೇಕು. ಆಸಕ್ತ ಅಭ್ಯರ್ಥಿಗಳು ಎ.ಟಿ.ಡಿ.ಸಿ., ಸಿದ್ದರಾಮಣ್ಣ ಹಾಸ್ಟಲ್ ಕಾಂಪೌಂಡ್, ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಎದುರು, ತುಮಕೂರು ಇವರ ಕಚೇರಿಯಿಂದ ಅರ್ಜಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಮೂಲ ದಾಖಲೆ ಹಾಗೂ ಇತ್ತೀಚಿನ ಭಾವಚಿತ್ರದೊಂದಿಗೆ ಮಾರ್ಚ್ 20ರೊಳಗಾಗಿ ಖುದ್ದಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ವಾ.ಸಂ. 0816–2251618, ಮೊ.ಸಂ. 9844077096ನ್ನು ಸಂಪರ್ಕಿಸಬೇಕೆಂದು ಪ್ರಕಟಣೆ ತಿಳಿಸಿದೆ.

## ಅನ್ನಭಾಗ್ಯ ಯೋಜನೆಯಿಂದ ಬಡ ಜನರ ಮುಖದಲ್ಲಿ ಮಂದಹಾಸ

**ಕೊರಟಗೆರೆ:** ಅಂತ್ಯೋದಯ ಅನ್ನ ಯೋಚನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲನಬವಿಗಳಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅನ್ವಯ ವಿತರಿಸಲಾಗುವ 5 ಕೆ.ಜಿ ಆಹಾರ ಧಾನ್ಯದೊಂದಿಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 5 ಕೆಜಿ ಆಹಾರ ಧಾನ್ಯದ ಬದಲಾಗಿ ಪ್ರತಿ ಕೆಜಿಗೆ 34 /ರೂ ನಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರು ಬ್ಯಾಂಕ್ ಖಾತೆಗೆ ( ಡಿ ಬಿ ಟಿ) ಮೂಲಕ 170 / ರಂತೆ ಹಣ ವರ್ಗಾಯಿಸಲಾಗುತ್ತಿತ್ತು.

ಆದರೆ ಫೆಬ್ರವರಿ ತಿಂಗಳಿನಿಂದ ನೇರಗದು ವರ್ಗಾವಣೆ (ಡಿ ಬಿ ಟಿ )ಬದಲಾಗಿ ಅನ್ನಭಾಗ್ಯ ಯೋಜನೆ ಅಡಿ ಪಡಿತರ ಚೀಟಿ ಫಲಾನುಭವಿಗಳಿಗೆ ಹೆಚ್ಚುವರಿ ಆಗಿ 5 ಕೆಜಿ ಅಕ್ಕಿಯನ್ನು ಹಂಚಿಕೆ ಮಾಡಲಾಗದ ಕಾರಣ ಫೆಬ್ರವರಿ ತಿಂಗಳ 5 ಕೆಜಿ ಅಕ್ಕಿಯ ಜೊತೆ ಮಾರ್ಚ್ ತಿಂಗಳ 10 ಕೆಜಿ ಅಕ್ಕಿಯನ್ನು ಸೇರಿಸಿ 15 ಕೆಜಿ ಅಕ್ಕಿ ಕೊಡಲು ರಾಜ್ಯ ಸರ್ಕಾರ ತೀರ್ಮಾನಿಸಿದ್ದು ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಪಡಿತರದರರಿಗೆ ಕೊರಟಗೆರೆಯ ಆಹಾರ ಮತ್ತು ನಾಗರಿಕ ಇಲಾಖೆಯ ಲಕ್ಷ್ಮಿ ಶಿರಸ್ತಿದಾರರು ತಿಳಿಸಿದ್ದಾರೆ




ತಹಶೀಲ್ದಾರ್ ಮಂಜುನಾಥ್ ಮಾತನಾಡಿ, ಕೊರಟಗೆರೆ ತಾಲೂಕಿನ ಅಂತ್ಯೋದಯ 4494, ಬಿಪಿಎಲ್ 37059 ಒಟ್ಟು 41,553 ಕಾಡುದಾರರು ಈ ಯೋಜನೆಯ ಲಾಭವನ್ನು ಪಡೆಯಲಿದ್ದಾರೆ . ಪ್ರತಿ ಬಡವರ ಹಸಿವನ್ನ ನೀಗಿಸಲು ಸಿದ್ಧವಾಗಿದೆ ರಾಜ್ಯ ಸರ್ಕಾರ ಯಾವುದೇ ಪಡಿತರ ಅಂಗಡಿಗಳಲ್ಲಿ ಸಮಸ್ಯೆ ಬಂದಲ್ಲಿ ಅಥವಾ ಕಾಳ ಸಂತೆಯಲ್ಲಿ ಮಾರುವುದಾಗಲಿ ಕಂಡುಬಂದಲ್ಲಿ ತಕ್ಷಣ ನಮ್ಮ ಗಮನಕ್ಕೆ ತನ್ನಿ ಎಂದು ತಿಳಿಸಿದರು..

ಸೊಸೈಟಿ ಮಾಲಿಕ ನಯಾಜ್ ಮಾತನಾಡಿ, ಫೆಬ್ರವರಿ ತಿಂಗಳ 5 ಕೆಜಿ ಹಣದ ಬದಲಿಗೆ ಅಕ್ಕಿ ಹಾಗೂ ಮಾರ್ಚ್ ತಿಂಗಳ 10 ಕೆಜಿ ಅಕ್ಕಿ ಸೇರಿ ಈ ತಿಂಗಳು 15 ಕೆಜಿ ಪ್ರತಿ ಬಿಪಿಎಲ್ ಕಾರ್ಡ್ ಸದಸ್ಯರಿಗೆ ಸಿಗಲಿದೆ ಅಂತ್ಯದಯ ಕಾರ್ಡ್ ಒಬ್ಬರಿಂದ ಮೂರು ಜನ ಇರುವ ಸದಸ್ಯರಿಗೆ 35 ಕೆಜಿ ಮೇಲ್ಪಟ್ಟ ಒಬ್ಬೊಬ್ಬ ಸದಸ್ಯರಿದ್ದರೆ 10 ಕೆ.ಜಿ ಹೆಚ್ಚುವರಿ ಸಿಗಲಿದ್ದು ,

ಮುಂದಿನ ತಿಂಗಳಿಂದ 10 ಕೆಜಿ ಪಡಿತರ ಬಿಪಿಎಲ್ ಪ್ರತಿ ಸದಸ್ಯರಿಗೆ ಸಿಗಲಿದೆ.ಮೂರು ಸದಸ್ಯರಿಗಿಂತ ಹೆಚ್ಚು ಇದ್ದ ಅಂತ್ಯೋದಯ ಕಾರ್ಡಿಗೆ 10,ಕೆಜಿ ಹೆಚ್ಚು ಅಕ್ಕಿ ವಿತರಣೆ. ಕೊಟ್ಟ ಮಾತನ್ನ ಉಳಿಸಿಕೊಂಡ ಮುಖ್ಯಮಂತ್ರಿ ಅನ್ನರಾಮಯ್ಯ ರಾಜ್ಯದ ಪ್ರತಿ ಬಡವರಿಗೆ ಇನ್ನು ಮುಂದೆ ಹಣದ ಬದಲಿಗೆ ಅಕ್ಕಿ ಸಿಗಲಿದೆ ಅಂತ್ಯೋದಯ ಕಾಡುದಾರರಿಗೆ 35 ಕೆಜಿ ಅಕ್ಕಿ ಬಿಪಿಎಲ್ ಕಾರ್ಡ್ ಪಡಿತರ ಪ್ರತಿ ಸದಸ್ಯರಿಗೆ 10 ಕೆಜಿ ಸಿಗಲಿದೆ ಇದರಿಂದ ಬಡ ಜನರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

## ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ದರ ವಿವರ ಪ್ರದರ್ಶನ ಕಡ್ಡಾಯ

**ತುಮಕೂರು:** ಜಿಲ್ಲೆಯಲ್ಲಿ 163 ಸ್ಕ್ಯಾನಿಂಗ್ ಕೇಂದ್ರಗಳಿದ್ದು, ಎಲ್ಲಾ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಕಡ್ಡಾಯವಾಗಿ ಸ್ಕ್ಯಾನಿಂಗ್ ದರ ಹಾಗೂ ಸೇವಾ ವಿವರಗಳನ್ನು ಪ್ರದರ್ಶಿಸಿರಬೇಕು ಎಂದು ಜಿಲ್ಲಾ ಆರೋಗ್ಯ ಹಾಗೂ ಕುಟುಂಬ ಕಲ್ಯಾಣಾಧಿಕಾರಿ ಡಾ॥ ಬಿ.ಎಂ. ಚಂದ್ರಶೇಖರ್ ಸೂಚನೆ ನೀಡಿದರು.

ತಮ್ಮ ಕಚೇರಿಯಲ್ಲಿಂದು ಪಿಸಿ&ಪಿಎನ್‌ಡಿಟಿ ಜಿಲ್ಲಾ ಸಲಹಾ ಸಮಿತಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸ್ಕ್ಯಾನಿಂಗ್ ಕೇಂದ್ರಗಳ ಪರಿಶೀಲನಾ ವೇಳೆಯಲ್ಲಿ ಅಧಿಕಾರಿಗಳೊಂದಿಗೆ ರೇಡಿಯಾಲಾಜಿಸ್ಟ್ ಹಾಜರಿರಬೇಕು. ಪ್ರತಿ 3 ತಿಂಗಳಿಗೊಮ್ಮೆ ಸಭೆ ನಡೆಸಿ ಸ್ಕ್ಯಾನಿಂಗ್ ಕೇಂದ್ರಗಳ ಭೇಟಿಯಲ್ಲಿ ಕಂಡುಬಂದ ನ್ಯೂನ್ಯತೆಗಳ ಬಗ್ಗೆ ಸಭೆಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ನೋಂದಣಿಗಾಗಿ ಅರ್ಜಿ ಸಲ್ಲಿಸಿರುವ ಸ್ಕ್ಯಾನಿಂಗ್ ಕೇಂದ್ರಗಳಿಗೆ ನೋಂದಣಿ ಪತ್ರ ನೀಡುವ ಹಾಗೂ ಸ್ಕ್ಯಾನಿಂಗ್ ಯಂತ್ರ ಖರೀದಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ ಚರ್ಚಿಸಲಾಯಿತು. ಸಭೆಯಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ॥ ಪ್ರಭ, ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞ ಡಾ॥ ಲೋಕೇಶ್ ರೆಡ್ಡಿ, ಸಮಾಜ ಸೇವಕಿ ಲಲಿತಾ, ಕಾನೂನು ಸಲಹೆಗಾರರು, ವಾರ್ತಾ ಇಲಾಖೆ ಹಾಗೂ ವಿವಿಧ ಅಧಿಕಾರಿ ಸೇರಿದಂತೆ ಮತ್ತಿತರರು ಹಾಜರಿದ್ದರು.

## ಬಿಕ್ಕೋಡು ಬಳಿಯ ಎಸ್ಟೇಟ್‌ನಲ್ಲಿದ್ದ ಪುಂಡಾನೆ ಸೆರೆ


**ಹಾಸನ:** ಬೇಲೂರು ತಾಲೂಕಿನ ಬಿಕ್ಕೋಡು ಬಳಿಯ ಎಸ್ಟೇಟ್‌ನಲ್ಲಿದ್ದ ಒಂಟಿಸಲಗವನ್ನು ಅರಣ್ಯ ಇಲಾಖೆ ಸಿಬ್ಬಂದಿ ಸತತ ನಾಲ್ಕು ಗಂಟೆಗಳ ಕಾರ್ಯಾಚರಣೆ ನಡೆಸಿ ಸೆರೆಹಿಡಿದಿದ್ದು, ಈ ಮೂಲಕ ಮೊದಲ ದಿನದ ಸೆರೆ ಕಾರ್ಯಾಚರಣೆಯಲ್ಲೇ ಯಶಸ್ವಿಯಾಗಿದ್ದಾರೆ.

ಜಿಲ್ಲೆಯ ಮಲೆನಾಡು ಭಾಗದಲ್ಲಿ ಕಾಡಾನೆಗಳ ದಾಳಿಯ ಪ್ರಮಾಣ ಹೆಚ್ಚಾದ ಹಿನ್ನೆಲೆ ಸರ್ಕಾರ ಮೂರು ಪುಂಡಾನೆಗಳ ಸೆರೆಗೆ ಅನುಮತಿ ನೀಡಿದ್ದು, ಇಂದಿನಿಂದ ಅಧಿಕೃತ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ. ಅರವಳಿಕೆ ಮದ್ದು ನೀಡಿ ಅರಣ್ಯ ಸಿಬ್ಬಂದಿ ಕಾಡಾನೆಯನ್ನ ಸೆರೆ ಹಿಡಿದಿದ್ದಾರೆ. ಕ್ಯಾಪ್ಟನ್ ಪ್ರಶಾಂತ್ ನೇತೃತ್ವದಲ್ಲಿ ನಡೆದ ಕಾಡಾನೆ ಸೆರೆ ಯಶಸ್ವಿ ಆಗಿದೆ.

ಬೇಲೂರು ತಾಲೂಕಿನ ಬಿಕ್ಕೋಡು ಕ್ಯಾಂಪಿಗೆ ಮಾ.15 ರಂದು ಮತ್ತಿಗೋಡು ಮತ್ತು ದುಬಾರೆ ಆನೆ ಶಿಬಿರಗಳಿಂದ ಏಳು ಸಾಕಾನೆಗಳು ಆಗಮಿಸಿದ್ದವು. ಈ ಕಾರ್ಯಾಚರಣೆಯಲ್ಲಿ ಅರಣ್ಯ ಇಲಾಖೆಯ ಭೀಮ, ಕಂಜನ್, ಪ್ರಶಾಂತ, ಹರ್ಷ, ಧನಂಜಯ, ಮಹೇಂದ್ರ ಮತ್ತು ಏಕಲವ್ಯ ಭಾಗವಹಿಸಿದ್ದವು. ಕಾರ್ಯಾಚರಣೆಗೂ ಮುನ್ನ ಸ್ಥಳೀಯ ಶಾಸಕ ಹೆಚ್. ಕೆ. ಸುರೇಶ್, ತಹಶೀಲ್ದಾರ್ ಮಮತಾ ಮತ್ತು ಅರಣ್ಯಾಧಿಕಾರಿಗಳ ಉಪಸ್ಥಿತಿಯಲ್ಲಿ ಪೂಜೆ ಸಲ್ಲಿಸಲಾಯಿತು.

ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಆನೆಗಳ ಶ್ರಮದಿಂದ ಸೆರೆಯಾದ ಒಂಟಿ ಸಲಗ ವರ್ಷದ ಮೊದಲ ವಾರವೇ ಓರ್ವನನ್ನು ಬಲಿಪಡೆದಿದ್ದ ಕಾಡಾನೆ, ನಂತರ 2 ತಿಂಗಳ ಅವಧಿಯಲ್ಲಿ ಸಕಲೇಶಪುರ ಮತ್ತು ಬೇಲೂರು ಭಾಗದಲ್ಲಿ ನಾಲ್ವರನ್ನು ಸಾಯಿಸಿತ್ತು. ಈ ಹಿನ್ನೆಲೆ ಕಾಡಾನೆ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವಂತೆ ಸ್ಥಳೀಯರು ಪ್ರತಿಭಟನೆ ನಡೆಸಿದ್ದರು.

ಅರಣ್ಯ ಇಲಾಖೆ ತಾತ್ಕಾಲಿಕವಾಗಿ ಮಾನವ ಮತ್ತು ಕಾಡಾನೆ ಸಂಘರ್ಷವನ್ನು ತಡೆಯಲು ಕ್ರಮಗಳನ್ನು ಕೈಗೊಂಡಿದ್ದು, ಇಂದಿನಿಂದ ಕಾಡಾನೆ ಹಿಡಿಯಲು ಸರ್ಕಾರದ ಅನುಮತಿಯೊಂದಿಗೆ ಅರಣ್ಯ ಇಲಾಖೆ ಮುಂದಾಗಿತ್ತು. ಮೊದಲ ದಿನವೇ ಅರಣ್ಯ ಇಲಾಖೆಯ ಶ್ರಮಕ್ಕೆ ಫಲ ಸಿಕ್ಕಿದ್ದು, ಪುಂಡಾನೆಯೊಂದು ಸೆರೆಯಾಗಿರುವುದು ಸ್ಥಳೀಯರ ಆತಂಕವನ್ನು ಸ್ವಲ್ಪ ಕಡಿಮೆ ಮಾಡಿದೆ.



ಕ್ರೀಡೆ - ಸಿನಿಮಾ
ಮುಸ್ಸಂಜೆ



# ಹ್ಯಾಪಿ ಬರ್ತ್‌ಡೇ ಅಪ್ಪು



'ಪವರ್ ಸ್ಟಾರ್' ಪುನೀತ್ ರಾಜ್‌ಕುಮಾರ್ ಅವರು ನಮ್ಮೊಂದಿಗೆ ಇದ್ದಿದ್ದರೆ ಇಂದು ಅದ್ದೂರಿಯಾಗಿ 50ನೇ ವರ್ಷದ ಹುಟ್ಟುಹಬ್ಬ ಆಚರಿಸಿಕೊಳ್ಳಬೇಕಿತ್ತು. ಈಗ ಅವರಿಲ್ಲದೇ ಜನ್ಮದಿನ ಆಚರಿಸುವಂತಾಗಿದೆ.

ಪ್ರತಿ ವರ್ಷ ಮಾರ್ಚ್ 17 ಬಂತೆಂದರೆ ಅಭಿಮಾನಿಗಳು ಸಂಭ್ರಮಿಸುತ್ತಾರೆ. ಪುನೀತ್ ರಾಜ್‌ಕುಮಾರ್ ಬರ್ತ್‌ಡೇ ಪ್ರಯುಕ್ತ ಹಲವಾರು ಬಗೆಯ ಸಮಾಜಮುಖಿ ಕೆಲಸಗಳನ್ನು ಮಾಡಲಾಗುತ್ತದೆ. ಈ ಬಾರಿ ಕೂಡ ಅದು ಮುಂದುವರಿದಿದೆ.

ಅಪ್ಪು ಅಭಿಮಾನಿಗಳು ಅನ್ನದಾನ, ರಕ್ತದಾನ, ನೇತ್ರದಾನ ನೋಂದಣಿ ಸೇರಿದಂತೆ ಅನೇಕ ಬಗೆಯ ಕಾರ್ಯಗಳನ್ನು ಕೈಕೊಳ್ಳುತ್ತಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಕೂಡ ಪುನೀತ್ ಅವರಿಗೆ ಜನ್ಮದಿನದ ಶುಭಾಶಯ ಕೋರುವ ಮೂಲಕ ಸ್ಮರಿಸಲಾಗುತ್ತಿದೆ.

ರಾಜ್ಯಾದ್ಯಂತ ಅಭಿಮಾನಿಗಳು ನಟ ಪುನೀತ್ ರಾಜ್‌ಕುಮಾರ್ ಜನ್ಮದಿನವನ್ನು ಆಚರಿಸುತ್ತಿದ್ದಾರೆ. 50ನೇ ವರ್ಷದ ಬರ್ತ್‌ಡೇ ಆದ್ದರಿಂದ ಈ ಬಾರಿ ಸ್ಪೆಷಲ್ ಆಗಿದೆ. ಸಮಾಧಿ ಸ್ಥಳಕ್ಕೆ ಅಭಿಮಾನಿಗಳು, ಕುಟುಂಬದವರು ಹಾಗೂ ಸೆಲೆಬ್ರಿಟಿಗಳು ಭೇಟಿ ನೀಡುತ್ತಿದ್ದಾರೆ. ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡಲಾಗುತ್ತಿದೆ. 'ಅಪ್ಪು' ಸಿನಿಮಾ ಕೂಡ ಚೆನ್ನಾಗಿ ಪ್ರದರ್ಶನ ಕಾಣುತ್ತಿದೆ.

ಕನ್ನಡ ಚಿತ್ರರಂಗಕ್ಕೆ ಪುನೀತ್ ರಾಜ್‌ಕುಮಾರ್ ಅವರು ನೀಡಿದ ಕೊಡುಗೆಯನ್ನು ಮರೆಯುವಂತಿಲ್ಲ. ಬಾಲನಟನಾಗಿಯೇ ಅಭಿಮಾನಿಗಳ ಮನಗೆದ್ದ ಅವರು ಹೀರೋ ಆಗಿ ಕೂಡ ಗಟ್ಟಿಯಾಗಿ ನೆಲೆನಿಂತರು. ಅಭಿನಯ, ಡ್ಯಾನ್ಸ್, ಫೈಟಿಂಗ್‌ನಲ್ಲಿ ಅಪ್ಪು ಅವರಿಗೆ ಸರಿಸಾಟಿ ಯಾರಿಲ್ಲ. ಅದೇ ರೀತಿ ಜನಪರ ಕಾರ್ಯಗಳ ಮೂಲಕ ಕೂಡ ಅವರು ರಿಯಲ್ ಹೀರೋ ಎನಿಸಿಕೊಂಡರು. ಆ ಗುಣಗಳು ಅಭಿಮಾನಿಗಳಿಗೆ ಮಾದರಿ ಆಗಿವೆ.

ಪುನೀತ್ ಅವರ ಮೊದಲ ಹೆಸರು ಲೋಹಿತ್ ಎಂದಾಗಿತ್ತು. 10 ವರ್ಷಗಳ ಕಾಲ ಈ ಹೆಸರು ಚಾಲ್ತಿಯಲ್ಲಿ ಇತ್ತು. ಆ ಬಳಿಕ ಈ ಹೆಸರನ್ನು ಪುನೀತ್ ಎಂದು ರಾಜ್‌ಕುಮಾರ್ ಬದಲಿಸಿದ್ದರು. ಲೋಹಿತ್ ಎಂಬ ಹೆಸರಿನ ಬಗ್ಗೆ ಇದ್ದ ಭಯವೇ ಹೆಸರು ಬದಲಿಸಲು ಮುಖ್ಯ ಕಾರಣ ಎನ್ನುವ ವಿಚಾರ ರಿವೀಲ್ ಆಗಿದೆ.

ರಾಜ್‌ಕುಮಾರ್ ಅವರಿಗೆ ಪುನೀತ್ ಬಗ್ಗೆ ಎಲ್ಲಿಲ್ಲದ ಪ್ರೀತಿ. ಅವರಿಗೆ ಹಸರು ಇಡಬೇಕು ಎಂದಾಗ ಲೋಹಿತ್ ಎಂಬ ಹೆಸರು ಅವರಿಗೆ ನೆನಪಿಗೆ ಬಂತು. ಇದಕ್ಕೆ ಕಾರಣ ಆಗಿದ್ದು 'ಸತ್ಯ ಹರಿಶ್ಚಂದ್ರ' ಸಿನಿಮಾ. ಸತ್ಯ ಹರಿಶ್ಚಂದ್ರನ ಪುತ್ರನ ಹೆಸರು ಲೋಹಿತಾಶ್ವ (ಅಥವಾ ರೋಹಿತಾಶ್ವ). ಈ ಹೆಸರು ರಾಜ್‌ಕುಮಾರ್‌ಗೆ ತುಂಬಾನೇ ಇಷ್ಟವಾಗಿತ್ತು. ಈ ಕಾರಣಕ್ಕೆ ಲೋಹಿತ್ ಎಂದು ಹೆಸರು ಇಡಲಾಯಿತು. ಸತ್ಯ ಹರಿಶ್ಚಂದ್ರನ ಮಗ ಲೋಹಿತಾಶ್ವ ಸಣ್ಣ ವಯಸ್ಸಿನಲ್ಲೇ ಸಾಯುತ್ತಾನೆ. ಈ ಕಾರಣಕ್ಕೆ ರಾಜ್‌ಗೆ ಹೆಸರು ಬದಲಿಸಲು ಸೂಚಿಸಿದ್ದರು.

ಡಾ. ರಾಜ್‌ಕುಮಾರ್ ಅವರ ಕುಟುಂಬಕ್ಕೆ ಬೇಕಾದ ಹಿರಿಯರೊಬ್ಬರು ಲೋಹಿತ್ ಎಂದು ಹೆಸರಿಟ್ಟ ಬಗ್ಗೆ ಪ್ರಶ್ನೆ ಮಾಡಿದ್ದರು. ಲೋಹಿತ್ ಅನ್ನೋದು ಅಲ್ಪಾಯುಷಿಗೆ ಇರುವಂತಹ ಹೆಸರು. ಹೀಗಾಗಿ ಪುನೀತ್ ಎಂದು ಬದಲಿಸಲು ಸೂಚಿಸಿದ್ದರಂತೆ. ಈ ಕಾರಣಕ್ಕೆ ಅಣ್ಣಾವ್ರು ಈ ಹೆಸರನ್ನು ಬದಲಿಸಿದ್ದರು. ಡಾ. ರಾಜ್ ಕುಟುಂಬದ ಸಂಬಂಧಿ ಕುಮಾರ್ ಬಂಗಾರಪ್ಪ ಈ ಬಗ್ಗೆ ಈ ಮೊದಲು ಮಾಹಿತಿ ನೀಡಿದ್ದರು.

ಇದು 50ನೇ ವರ್ಷದ ಹುಟ್ಟುಹಬ್ಬ ಆದ್ದರಿಂದ ಪುನೀತ್ ರಾಜ್‌ಕುಮಾರ್ ಅವರು ಮೊದಲ ಸಿನಿಮಾ 'ಅಪ್ಪು' ಮರು ಬಿಡುಗಡೆ ಆಗಿದೆ.

ನಾಯಕ ನಟನಾಗಿ 'ಅಪ್ಪು' ಇವರ ಚೊಚ್ಚಲ ಚಿತ್ರ. ಅಭಿ, ವೀರ ಕನ್ನಡಿಗ, ಮೌರ್ಯ, ಆಕಾಶ್, ನಮ್ಮ ಬಸವ, ಅಜಯ್, ಅರಸು, ಮಿಲನಾ, ಬಿಂದಾಸ್, ರಾಜ್ - ದಿ ಶೋಮ್ಯಾನ್, ಅಣ್ಣ ಬಾಂಡ್, ಯಾರೇ ಕೂಗಾಡಲಿ, ರಾಮ್, ಪೃಥ್ವಿ, ಜಾಕಿ, ಹುಡುಗರು, ಪರಮಾತ್ಮ, ನಿನ್ನಿಂದಲೇ, ಪವರ್, ಮೈತ್ರಿ, ರಣ ವಿಕ್ರಮ, ಚಕ್ರವ್ಯೂಹ, ದೊಡ್ಮನೆ ಹುಡ್ಗ, ರಾಜಕುಮಾರ, ಅಂಜನಿ ಪುತ್ರದಲ್ಲಿ ಬಣ್ಣ ಹಚ್ಚಿದ್ದಾರೆ. 2021ರಲ್ಲಿ ಬಂದ 'ಯುವರತ್ನ' ಕೊನೆ ಚಿತ್ರ. ಮರಣದ ನಂತರ, ಜೇಮ್ಸ್, ಲಕ್ಕಿ ಮ್ಯಾನ್, ಗಂಧದ ಗುಡಿ ತೆರೆಗಪ್ಪಳಿಸಿತು.

ಕಳೆದ ಶುಕ್ರವಾರ ರೀ-ರಿಲೀಸ್ ಆದ 'ಅಪ್ಪು' ಸಿನಿಮಾಗೆ ಭರ್ಜರಿ ಪ್ರತಿಕ್ರಿಯೆ ಸಿಕ್ಕಿದೆ. ಆ ಮೂಲಕ ಅಪ್ಪು ಮೇಲಿನ ಅಭಿಮಾನ ಎಂದಿಗೂ ಕಡಿಮೆ ಆಗಲ್ಲ ಎಂಬುದನ್ನು ಫ್ಯಾನ್ಸ್ ಸಾಬೀತು ಮಾಡಿದ್ದಾರೆ. ಹಲವು ಕಡೆಗಳಲ್ಲಿ ಈ ಸಿನಿಮಾ ಹೌಸ್‌ಫುಲ್ ಪ್ರದರ್ಶನ ಕಂಡಿದೆ. ರಮ್ಯಾ, ಶರ್ಮಿಳಾ ಮಾಂಡ್ರೆ, ಸಂತೋಷ್ ಆನಂದ್ ರಾಮ್, ರಕ್ಷಿತಾ ಪ್ರೇಮ್, ಯುವ ರಾಜ್‌ಕುಮಾರ್ ಸೇರಿದಂತೆ ಹಲವರು ಸಿನಿಮಾ ನೋಡಿದ್ದಾರೆ.



## ಹೇಳಿಕೊಂಡಿದ್ದು ವಿರಳ, ಮಾಡಿದ್ದು ಬಹಳ

ಸಿನಿಮಾ ಎಂಬ ಗ್ಲ್ಯಾಮರ್ ಲೋಕದಲ್ಲಿ ಮಾತ್ರವಲ್ಲದೇ ಸಮಾಜ ಸೇವೆಯಲ್ಲೂ ಎತ್ತಿದ ಕೈ ಅಪ್ಪು ಅವರದ್ದಾಗಿತ್ತು. ಈ ವಿಷಯದಲ್ಲಿ ಪುನೀತ್ ರಾಜ್‌ಕುಮಾರ್ ಅವರು ಹೇಳಿಕೊಂಡಿದ್ದು ವಿರಳ, ಮಾಡಿದ್ದು ಬಹಳ. ಅವರ ಸಮಾಜ ಸೇವೆ ಲೆಕ್ಕಕ್ಕೆ ಸಿಗದಷ್ಟು.

ಶಕ್ತಿಧಾಮ ಸಂಸ್ಥೆ: ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಸಾಕಷ್ಟು ನೆರವು ನೀಡಿದ್ದಾರೆ. ಕನ್ನಡದ ಕೋಟ್ಯಧಿಪತಿ ಕಾರ್ಯಕ್ರಮದಿಂದ ಗಳಿಸಿದ ರಾಯಲ್ಟಿಯನ್ನು ಶಕ್ತಿಧಾಮದ ಅಭಿವೃದ್ಧಿಗೆ ವ್ಯಯಿಸಿದರು. ಆರಂಭದಲ್ಲಿ, ಮೈಸೂರಿನ ಶಕ್ತಿಧಾಮ ಆಶ್ರಮದಲ್ಲಿ ತಮ್ಮ ತಾಯಿಯೊಂದಿಗೆ ಲೋಕೋಪಕಾರಿ ಕೆಲಸಗಳಲ್ಲಿ ತೊಡಗಿಸಿಕೊಂಡಿದ್ದರು. 'ಶಕ್ತಿಧಾಮ' ಮೂಲಕ ಸಾವಿರಾರು ಹೆಣ್ಣು ಮಕ್ಕಳಿಗೆ ಬೆಂಬಲ ನೀಡಿದ್ದಾರೆ. ಸದ್ಯ ಈ ಲೋಕೋಪಕಾರಿ ಚಟುವಟಿಕೆಗಳನ್ನು ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರು ನೋಡಿಕೊಳ್ಳುತ್ತಿದ್ದಾರೆ.

ತಮ್ಮ ಲೋಕೋಪಕಾರಿ ಚಟುವಟಿಕೆಗಳ ಬಗ್ಗೆ ಬಹಳ ಕಡಿಮೆ ಮಾತನಾಡಿದ್ದರೂ, ನಟನ ಸಾಮಾಜಿಕ ಕಾರ್ಯಗಳು ಬೆಟ್ಟದಷ್ಟಿವೆ. ಕಲಾವಿದನ ದಾನ ಧರ್ಮ ಕಾರ್ಯಗಳು ಅಪಾರವಾಗಿತ್ತು. ದೇಶ ಕೋವಿಡ್ ಬಿಕ್ಕಟ್ಟಿನಿಂದ ಬಳಲಿದ್ದ ಸಂದರ್ಭ, ಕರ್ನಾಟಕ ಮುಖ್ಯಮಂತ್ರಿ ಪರಿಹಾರ ನಿಧಿಗೆ 50 ಲಕ್ಷ ರೂ.ಗಳನ್ನು ದೇಣಿಗೆಯಾಗಿ ನೀಡಿದ್ದರು. ಹಣಕಾಸು ನೆರವು ಮಾತ್ರವಲ್ಲದೇ 2020 ಮತ್ತು 2021ರ ಉದ್ದಕ್ಕೂ ಜಾಗೃತಿ ಮೂಡಿಸುವ ಮೂಲಕ ಪುನೀತ್ ರಾಜ್‌ಕುಮಾರ್ ಕೋವಿಡ್-19 ವಿರುದ್ಧದ ಹೋರಾಟದಲ್ಲಿ ನಿರ್ಣಾಯಕ ಪಾತ್ರ ವಹಿಸಿದ್ದರು. 26 ಅನಾಥಾಶ್ರಮಗಳು, 16 ವೃದ್ಧಾಶ್ರಮಗಳು ಮತ್ತು 19 ಗೋಶಾಲೆಗಳನ್ನು ಬೆಂಬಲಿಸುತ್ತಿದ್ದರು. ಗಾಯನದಿಂದ ಗಳಿಸುವ ಹಣವನ್ನು ಚಾರಿಟಿಗಳಿಗೆ ದಾನ ಮಾಡುತ್ತಿದ್ದರು. ಒಂದೆರಡು ಕನ್ನಡ ಮಾಧ್ಯಮ ಶಾಲೆಗಳಿಗೆ ಆಗಾಗ್ಗೆ ಕೊಡುಗೆಗಳನ್ನು ನೀಡುತ್ತಾ ಬಂದಿದ್ದರು.

2019ರಲ್ಲಿ, ಉತ್ತರ ಕರ್ನಾಟಕ ತೀವ್ರ ಪ್ರವಾಹವನ್ನು ಎದುರಿಸಿತ್ತು. ಪ್ರವಾಹ ಪೀಡಿತರಿಗೆ ಸಹಾಯ ಹಸ್ತ ಚಾಚೋ ನಿಟ್ಟಿನಲ್ಲಿ, ಮುಖ್ಯಮಂತ್ರಿಗಳ ಪ್ರಕೃತಿ ವಿಕೋಪ ಪರಿಹಾರ ನಿಧಿಗೆ 5 ಲಕ್ಷ ರೂಪಾಯಿಯನ್ನು ದೇಣಿಗೆಯಾಗಿ ನೀಡಿದ್ದರು.

**ಕನ್ನಡಿಗನಿಗೆ ಸಂದ ಪ್ರತಿಷ್ಠಿತ ಗೌರವಗಳಿವು :**

* ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ : ಬೆಟ್ಟದ ಹೂವು (1985) ಚಿತ್ರದಲ್ಲಿ ಬಾಲನಟನಾಗಿ ಅತ್ಯುತ್ತಮ ಅಭಿನಯ.

*ಸೌತ್ ಫಿಲ್ಮ್‌ಫೇರ್ ಪ್ರಶಸ್ತಿ : 1986ರಲ್ಲಿ ಅತ್ಯುತ್ತಮ ಬಾಲನಟ ವಿಶೇಷ ಪ್ರಶಸ್ತಿ (ಬೆಟ್ಟದ ಹೂವು).

* ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಗಳು : ಮಿಲನ (2007-08) - ಅತ್ಯುತ್ತಮ ನಟ, ಜಾಕಿ (2010-11) - ಅತ್ಯುತ್ತಮ ನಟ.

* ಸೈಮಾ ಅವಾರ್ಡ್ಸ್: ಹುಡುಗರು (2011) - ಅತ್ಯುತ್ತಮ ನಟ, ಯಾರೇ ಕೂಗಾಡಲಿ (2013) - ಯೂತ್ ಐಕಾನ್ ಆಫ್ ಸೌತ್ ಇಂಡಿಯಾ, ರಣ ವಿಕ್ರಮ (2016) - ಅತ್ಯುತ್ತಮ ನಟ, ರಾಜಕುಮಾರ (2018) - ಅತ್ಯುತ್ತಮ ನಟ.

*ಫಿಲ್ಮ್‌ಫೇರ್ ಅವಾರ್ಡ್ಸ್ ಸೌತ್ : ಅರಸು (2007) - ಅತ್ಯುತ್ತಮ ನಟ, ಹುಡುಗರು (2011) - ಅತ್ಯುತ್ತಮ ನಟ, ರಣ ವಿಕ್ರಮ (2015) - ಅತ್ಯುತ್ತಮ ನಟ, ರಾಜಕುಮಾರ (2017) - ಅತ್ಯುತ್ತಮ ನಟ.

ಮರಣೋತ್ತರ ಗೌರವ :

67ನೇ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಕರ್ನಾಟಕ ರತ್ನ ಗೌರವಕ್ಕೆ ಪಾತ್ರರಾದರು.

2022ರ ಮಾರ್ಚ್ 22ರಂದು, ಮೈಸೂರು ವಿಶ್ವವಿದ್ಯಾಲಯದ 102ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ನೀಡಲಾಯಿತು. ಪತ್ನಿ ಅಶ್ವಿನಿ ಪುನೀತ್ ರಾಜ್‌ಕುಮಾರ್ ಪ್ರಶಸ್ತಿಯನ್ನು ಸ್ವೀಕರಿಸಿದರು.

ರಾಜ್ಯ ಸರ್ಕಾರವು ನಟನ ಜನ್ಮದಿನವನ್ನು "ಸ್ಫೂರ್ತಿ ದಿನ" ಎಂದು ಆಚರಿಸಲು ಘೋಷಿಸಿತು.

2022ರ ಮೇ 3ರಂದು, ಬಸವಶ್ರೀ ಪ್ರಶಸ್ತಿಯನ್ನು ನೀಡಲಾಯಿತು.

212ನೇ ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನವನ್ನು ಅಪ್ಪು ಹಾಗೂ ಡಾ.ರಾಜ್‌ಕುಮಾರ್ ಅವರಿಗೆ ಗೌರವವಾಗಿ ಸಮರ್ಪಿಸಲಾಯಿತು.

2022ರ ಮೈಸೂರು ದಸರಾ ಮೆರವಣಿಗೆಯಲ್ಲಿ, ಅವರಿಗೆ ಸಮರ್ಪಿತವಾದ ಟ್ಯಾಬ್ಲೋವನ್ನು ತಯಾರಿಸಲಾಗಿತ್ತು.

67ನೇ ಫಿಲ್ಮ್‌ಫೇರ್ ಪ್ರಶಸ್ತಿಗಳಲ್ಲಿ ಜೀವಮಾನ ಸಾಧನೆ ಪ್ರಶಸ್ತಿಯನ್ನು ನೀಡಲಾಯಿತು.

ಅವರ ನಿಧನದ ಒಂದು ವರ್ಷದೊಳಗೆ ಬಿಡುಗಡೆಯಾದ ಎಲ್ಲಾ 200 ಕನ್ನಡ ಚಲನಚಿತ್ರಗಳು ತಮ್ಮ ಆರಂಭಿಕ ಕ್ರೆಡಿಟ್‌ಗಳಲ್ಲಿ ಅಪ್ಪು ಅವರಿಗೆ ಗೌರವ ಸಲ್ಲಿಸಿದವು. ನಟನ ಕೊನೆ ಚಿತ್ರ 'ಗಂಧದ ಗುಡಿ' ಬಿಡುಗಡೆ ಸಂದರ್ಭದಲ್ಲಿ ವರ್ಷ ಅಕ್ಟೋಬರ್ 22 ಮತ್ತು 23ರಂದು ಬೆಂಗಳೂರಿನ ರೆಸ್ಟೋರೆಂಟ್‌ಗಳು 'ಫುಡ್ ಫೆಸ್ಟಿವಲ್ - ಫ್ಲೇವರ್ಸ್ ಆಫ್ ಗಂಧದ ಗುಡಿ'ಯನ್ನು ಆಯೋಜಿಸಿದ್ದವು.

## 'ಧ್ರುವ 369': ಪುನೀತ್- ಡಾ.ರಾಜ್ ಪಾತ್ರಗಳ ಮರುಸೃಷ್ಟಿ







ಪುನೀತ್ ರಾಜ್‌ಕುಮಾರ್ ಅವರನ್ನು ಮತ್ತೆ ಮತ್ತೆ ದೊಡ್ಡ ಪರದೆ ಮೇಲೆ ನೋಡಬೇಕು ಎಂಬುದು ಅಭಿಮಾನಿಗಳ ಆಸೆ. ಆದರೆ ಅದು ಅಷ್ಟು ಸುಲಭವಲ್ಲ. ಈಗ ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಪುನೀತ್ ಅವರನ್ನು ಹಿರಿತೆರೆಯಲ್ಲಿ ಜೀವಂತವಾಗಿಸುವ ಪ್ರಯತ್ನಗಳು ನಡೆಯುತ್ತಿವೆ.

ಈಗ 'ಧ್ರುವ 369' ಸಿನಿಮಾ ಕೂಡ ಅದೇ ನಿಟ್ಟಿನಲ್ಲಿ ಕಾರ್ಯನಿರತವಾಗಿದೆ. ಈ ಸಿನಿಮಾದ ಟೀಸರ್ ಬಿಡುಗಡೆ ಆಗಿದೆ. ಡಿಫರೆಂಟ್ ಕಾನ್ಸೆಪ್ಟ್‌ನಲ್ಲಿ ಮೂಡಿಬಂದ ಈ ಟೀಸರ್‌ನಲ್ಲಿ ಪುನೀತ್ ರಾಜ್‌ಕುಮಾರ್ ಮಾತ್ರವಲ್ಲದೇ ಡಾ. ರಾಜ್‌ಕುಮಾರ್ ಕೂಡ ಕಾಣಿಸಿಕೊಂಡಿದ್ದಾರೆ. ಆ ಮೂಲಕ ಚಿತ್ರದ ಬಗ್ಗೆ ಕೌತುಕ ಮೂಡಿಸಲಾಗಿದೆ.


'ಧ್ರುವ 369' ಸಿನಿಮಾ ಶೀರ್ಷಿಕೆಯೇ ಭಿನ್ನವಾಗಿದೆ. ಈ ಚಿತ್ರದ ಟೀಸರ್ ಅನ್ನು ಇತ್ತೀಚೆಗೆ ಬಿಡುಗಡೆ ಮಾಡಲಾಯಿತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷ ಸಾ.ರಾ. ಗೋವಿಂದು ಅವರು ಟೀಸರ್ ಬಿಡುಗಡೆ ಮಾಡಿದರು. ಬಳಿಕ ಅವರು ಮಾತನಾಡಿದರು. 'ನಿರ್ದೇಶಕರ ಶ್ರಮ ಈ ಟೀಸರ್‌ನಲ್ಲಿ ಕಾಣುತ್ತಿದೆ. ಇಂಥ ನಿರ್ದೇಶಕರ ಅವಶ್ಯಕತೆ ಕನ್ನಡ ಚಿತ್ರರಂಗಕ್ಕೆ ತುಂಬ ಇದೆ. ಮುಂದಿನ ದಿನಗಳಲ್ಲಿ ಅವರಿಗೆ ಒಳ್ಳೆಯ ಅವಕಾಶಗಳು ಸಿಗಲಿವೆ' ಎಂದು ಸಾ.ರಾ. ಗೋವಿಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಎನ್.ಎಂ. ಸುರೇಶ್, ರಮೇಶ್ ಭಟ್ ಮುಂತಾದವರು ಹಾಜರಿದ್ದರು.

ಆಧುನಿಕ ತಂತ್ರಜ್ಞಾನ ಬಳಸಿಕೊಂಡು 'ಧ್ರುವ 369' ಸಿನಿಮಾದ 1.40 ನಿಮಿಷದ ಅವಧಿಯ ಟೀಸರ್ ಸಿದ್ಧಪಡಿಸಲಾಗಿದೆ. ಡಾ. ರಾಜ್‌ಕುಮಾರ್ ಹಾಗೂ ಪುನೀತ್ ರಾಜ್‌ಕುಮಾರ್ ಅವರನ್ನು ಈ ಟೀಸರ್‌ನಲ್ಲಿ ನೋಡಿ ಅಭಿಮಾನಿಗಳಿಗೆ ಖುಷಿ ಆಗಿದೆ. ಮಂಗಳೂರಿನ ಉದ್ಯಮಿ ಶ್ರೀಕೃಷ್ಣ ಕಾಂತಿಲ ಅವರು 'ಅಚಿಂತ್ಯ ಸ್ಟುಡಿಯೋಸ್' ಮೂಲಕ ಈ ಸಿನಿಮಾವನ್ನು ನಿರ್ಮಿಸಿದ್ದಾರೆ.

## ಹೀರೋ ಆಗುವುದಕ್ಕೂ ಮೊದಲು 30ಕ್ಕೂ ಹೆಚ್ಚು ಸಿನಿಮಾ ಮಾಡಿದ್ದ ಜಗ್ಗೇಶ್



ಕನ್ನಡದ ಹಿರಿಯ ನಟ, ನವರಸ ನಾಯಕ ಜಗ್ಗೇಶ್ (ಎಚಿರಂಜು) ಅವರಿಗೆ ಇಂದು (ಮಾರ್ಚ್ 17) ಬರ್ತ್‌ಡೇ. ಅವರು 62ನೇ ವಯಸ್ಸಿಗೆ ಕಾಲಿಟ್ಟಿದ್ದಾರೆ. ಅವರಿಗೆ ಎಲ್ಲ ಕಡೆಗಳಿಂದ ಶುಭಾಶಯ ಬರುತ್ತಿವೆ. ಜಗ್ಗೇಶ್ ಅವರು ಸಾಕಷ್ಟು ಏಳುಬೀಳುಗಳನ್ನು ಕಂಡು ಬಂದವರು. ಅವರು ಸಾಕಷ್ಟು ಶ್ರಮದಿಂದ ಇಲ್ಲಿಯವರೆಗೆ ಬಂದು ನಿಂತಿದ್ದಾರೆ. ಅವರಿಗೆ ಸಿನಿಮಾ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಯಶಸ್ಸು ಒಲಿದಿದೆ. ಅವರು ಹೀರೋ ಆಗಲು ಬರೋಬ್ಬರಿ 10 ವರ್ಷ ತೆಗೆದುಕೊಂಡಿದ್ದರು.




ಜಗ್ಗೇಶ್ ಅವರು ನಟಿಸಿದ ಮೊದಲ ಸಿನಿಮಾ 'ಇಬ್ಬನಿ ಕರಗಿತು'. ಈ ಚಿತ್ರ 1982ರಲ್ಲಿ ರಿಲೀಸ್ ಆಯಿತು. ಆದರೆ, ಜಗ್ಗೇಶ್ ಅವರು ಹೀರೋ ಆಗಿ ಮಿಂಚಿದ ಮೊದಲ ಚಿತ್ರ ಎಂದರೆ ಉಪೇಂದ್ರ ನಿರ್ದೇಶನದ 'ತರ್ಲೆ ನನ್ಮಗ'. ಈ ಚಿತ್ರ ಬಿಡುಗಡೆ ಕಂಡಿದ್ದು 1992ರಲ್ಲಿ. ಈ ಚಿತ್ರದಿಂದ ಅವರಿಗೆ ದೊಡ್ಡ ಯಶಸ್ಸು ಸಿಕ್ಕಿತು. ನಂತರ ಸಾಲು ಸಾಲು ಆಫರ್‌ಗಳು ಅವರನ್ನು ಹುಡುಕಿ ಬಂದವು. ಸಣ್ಣಪುಟ್ಟ ಪಾತ್ರಗಳನ್ನು ಮಾಡಿಕೊಂಡಿದ್ದ ಜಗ್ಗೇಶ್ ಹೀರೋ ಆಗೋಕೆ ತೆಗೆದುಕೊಂಡಿದ್ದು ಬರೋಬ್ಬರಿ 10 ವರ್ಷ. 30ಕ್ಕೂ ಅಧಿಕ ಚಿತ್ರಗಳಲ್ಲಿ ಪೋಷಕ ಪಾತ್ರ, ವಿಲನ್ ಪಾತ್ರ ಮಾಡಿದ ನಂತರ ಅವರಿಗೆ ಹೀರೋ ಆಗುವ ಅವಕಾಶ ಸಿಕ್ಕಿತು ಅನ್ನೋದು ವಿಶೇಷ.

ಹೀರೋ ಆಗಿ ಒಪ್ಪಿದ್ದ ಮೊದಲ ಚಿತ್ರ ಎಂದರೆ 'ಭಂಡ ನನ್ ಗಂಡ'. ಆದರೆ, ಮೊದಲು ರಿಲೀಸ್ ಆಗಿದ್ದು 'ತರ್ಲೆ ನನ್ಮಗ'. 'ಭಂಡ ನನ್ ಗಂಡ' ಚಿತ್ರಕ್ಕೆ ಜಗ್ಗೇಶ್ ಅವರ ಭಾವ ಬಂಡವಾಳ ಹೂಡಿದ್ದರು. ಈ ಚಿತ್ರದಲ್ಲಿ ಅಂಬರೀಷ್ ಅವರು ಅತಿಥಿ ಪಾತ್ರ ಮಾಡಿದ್ದರು. ಜಗ್ಗೇಶ್‌ಗೆ ಅವರು ಬೆಂಬಲವಾಗಿ ನಿಂತಿದ್ದರು ಅನ್ನೋದು ವಿಶೇಷ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878